RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 68 ಪುಟ: 06 ಬುಧವಾರ 05-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



14 ವರ್ಷ ಜೊತೆಗಿದ್ದು ದೂರ ಆಗಿಬಿಟ್ರಾ...?

ಪುಟ 6

## ಪ್ರಮುಖ ಸುದ್ದಿ

### ನಕಲಿ ಮತದಾನ ಆರೋಪ

ದೆಹಲಿಯ ಸೀಲಾಂಪುರದಲ್ಲಿ ನಕಲಿ ಮತದಾನ ನಡೆದಿದೆ ಎನ್ನುವ ಆರೋಪ ಕೇಳಿಬಂದಿದ್ದು, ಆಮ್‌ಆದ್ಮಿ ಪಕ್ಷ ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಮಾರಾಮಾರಿ ನಡೆದಿದೆ. ಬಿಜೆಪಿ ನಾಯಕರು ಬುರ್ಖಾ ಧರಿಸಿದ ಮಹಿಳೆಯರು ಮತಗಟ್ಟೆಗಳಲ್ಲಿ ನಕಲಿ ಮತ ಚಲಾವಣೆ ಮಾಡಿದ್ದಾರೆಂದು, ಚುನಾವಣಾ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಬಿಜೆಪಿ ಕಾರ್ಯಕರ್ತರು ಆರೋಪಿಸಿದ್ದಾರೆ.

ನಕಲಿ ಮತದಾನವನ್ನು ನಿಲ್ಲಿಸುವಂತೆ ಬಿಜೆಪಿ ಚುನಾವಣಾ ಆಯೋಗವನ್ನು ಒತ್ತಾಯಿಸಿದೆ. ಏತನ್ಮಧ್ಯೆ, ಯಾವುದೇ ಅಕ್ರಮಗಳನ್ನು ತಡೆಗಟ್ಟಲು ಅಗತ್ಯ ಪರಿಶೀಲನಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಮತಗಟ್ಟೆ ಅಧಿಕಾರಿಗಳು ಭರವಸೆ ನೀಡಿದ್ದಾರೆ. ಆರೋಪಗಳಿಗೆ ಅಧಿಕಾರಿಗಳು ಇನ್ನೂ ಪ್ರತಿಕ್ರಿಯಿಸಿಲ್ಲ. ಇದರಿಂದಾಗಿ ಎಎಪಿ ಮತ್ತು ಬಿಜೆಪಿ ಕಾರ್ಯಕರ್ತರು ಘರ್ಷಣೆ ನಡೆಸಿ ಪರಸ್ಪರ ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು. ಸ್ಥಳದಲ್ಲಿದ್ದ ಪೊಲೀಸರು ಎರಡೂ ಪಕ್ಷಗಳ ಕಾರ್ಯಕರ್ತರನ್ನು ಅಲ್ಲಿಂದ ಕರೆದೊಯ್ದರು.

### ಮಹಾಕುಂಭದಲ್ಲಿ ಪ್ರಧಾನಿ ಮೋದಿ ಪವಿತ್ರಸ್ನಾನ



**ಪ್ರಯಾಗ್ ರಾಜ್:** ಇಲ್ಲಿನ ಸಂಗಮದಲ್ಲಿ ನಡೆಯುತ್ತಿರುವ ಐತಿಹಾಸಿಕ ಶತಮಾನದ ಮಹಾಕುಂಭಮೇಳದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಇಂದು ಅಷ್ಟಮಿ ದಿನ ಪುಣ್ಯಸ್ನಾನ ಮಾಡಿದ್ದಾರೆ.ಸಂಗಮ ಘಾಟ್‌ನ ತ್ರಿವೇಣಿ ಸಂಗಮದಲ್ಲಿ ಮಿಂದೆದ್ದ ಪ್ರಧಾನಿ ಮೋದಿ ಪವಿತ್ರ ಗಂಗಾ ಜಲಕ್ಕೆ ಅರ್ಘ್ಯ ಬಿಟ್ಟು ಸುತ್ತು ಬಂದು ಕಣ್ಣುಮುಚ್ಚಿ ನೀರಿನ ಮಧ್ಯೆ ನಿಂತು ರುದ್ರಾಕ್ಷಿ ಮಾಲೆ ಹಿಡಿದುಕೊಂಡು ಧ್ಯಾನ ಮಾಡಿದರು. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ಜೊತೆ ನೀಡಿದರು.

**ಅಮೃತ ಸ್ನಾನ:** ಭಾರತದ ಸನಾತನ ಧರ್ಮದಲ್ಲಿ, ಮಹಾಕುಂಭದ ಸಮಯದಲ್ಲಿ ಅಮೃತ ಸ್ನಾನಕ್ಕೆ ವಿಶೇಷ ಮಹತ್ವವಿದೆ. ಧಾರ್ಮಿಕ ನಂಬಿಕೆಯ ಪ್ರಕಾರ, ಮಹಾಕುಂಭದಲ್ಲಿ ಸ್ನಾನ ಮಾಡುವುದು ವ್ಯಕ್ತಿಯ ದೇಹವನ್ನು ಶುದ್ಧೀಕರಿಸುತ್ತದೆ ಮತ್ತು ಎಲ್ಲಾ ಪಾಪಗಳನ್ನು ತೊಡೆದುಹಾಕಿ ಮೋಕ್ಷವನ್ನು ಪಡೆಯುತ್ತದೆ ಎಂದರ್ಥವಾಗಿದೆ.

ಪೌಷ ಪೂರ್ಣಿಮೆಯಂದು (ಜನವರಿ 13) ಪ್ರಾರಂಭವಾದ 2025 ರ ಮಹಾ ಕುಂಭವು ವಿಶ್ವದ ಅತಿದೊಡ್ಡ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಮೇಳವಾಗಿದ್ದು, ಪ್ರಪಂಚದಾದ್ಯಂತದ ಭಕ್ತರನ್ನು ಆಕರ್ಷಿಸುತ್ತದೆ. ಫೆಬ್ರವರಿ 26 ರಂದು ಮಹಾಶಿವರಾತ್ರಿಯವರೆಗೆ ಇದು ಮುಂದುವರಿಯುತ್ತದೆ.

12 ವರ್ಷಗಳ ನಂತರ ನಡೆಯುತ್ತಿರುವ ಮಹಾ ಕುಂಭವು ಭಾರತ ಮತ್ತು ಪ್ರಪಂಚದಾದ್ಯಂತ ಇಲ್ಲಿಯವರೆಗೆ 38 ಕೋಟಿಗೂ ಹೆಚ್ಚು ಯಾತ್ರಿಕರನ್ನು ಆಕರ್ಷಿಸಿದೆ ಎಂದು ಮೆಗಾ ಮೇಳವನ್ನು ಆಯೋಜಿಸುತ್ತಿರುವ ಉತ್ತರ ಪ್ರದೇಶ ಸರ್ಕಾರ ತಿಳಿಸಿದೆ.

### ಬೆಂಗಳೂರಿನಲ್ಲಿ 837 ಕೆರೆಗಳ ಪೈಕಿ 730 ಕೆರೆಗಳ ಒತ್ತುವರಿ: ಬಿಡಿಎ ಪತ್ತೆ.

**ಬೆಂಗಳೂರು:** ಬೆಂಗಳೂರು ನಗರ ಮತ್ತು ಜಿಲ್ಲೆಯ 837 ಕೆರೆಗಳ ಪೈಕಿ 730 ಕೆರೆಗಳು ಒತ್ತುವರಿಯಾಗಿವೆ ಎಂಬುದನ್ನು ಇದೀಗ ಜಿಲ್ಲಾಡಳಿತ ಪತ್ತೆ ಹಚ್ಚಿದೆ.

ಉತ್ತರ, ದಕ್ಷಿಣ ಮತ್ತು ಪೂರ್ವ ತಾಲ್ಲೂಕುಗಳ ತಹಶೀಲ್ದಾರರು ಮತ್ತು ಭೂಮಾಪಕರ ವರದಿಗಳ ಪ್ರಕಾರ, 4,554 ಎಕರೆ ಕೆರೆ ಭೂಮಿಯನ್ನು ಅತಿಕ್ರಮಣ ಮಾಡಲಾಗಿದೆ. ಬಿಬಿಎಂಪಿ ಮತ್ತು ಕಂದಾಯ ಇಲಾಖೆ ಜಂಟಿಯಾಗಿ ಕೆರೆ ಭೂಮಿ ಮತ್ತು ಅವುಗಳ ಗಡಿಗಳ ಅತಿಕ್ರಮಣವನ್ನು ನಿಭಾಯಿಸಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

2022 ರಲ್ಲಿ ಭಾರಿ ಪ್ರವಾಹದಿಂದಾಗಿ ತಗ್ಗು ಪ್ರದೇಶಗಳಲ್ಲಿನ ಮನೆಗಳು ಮುಳುಗಿದ ನಂತರ, ಹಿಂದಿನ ಬಿಜೆಪಿ ಸರ್ಕಾರವು ಎಲ್ಲಾ ಜಲಮೂಲಗಳು ಮತ್ತು ರಾಜಕಾಲುವೆಗಳನ್ನು ಅತಿಕ್ರಮಿಸಲಾಗಿದೆಯೇ ಎಂದು ಪರಿಶೀಲಿಸಲು ಸಮೀಕ್ಷೆಗೆ ಆದೇಶಿಸಿತ್ತು.

ಅತಿಕ್ರಮಣಗಳ ತೆರವು ಮತ್ತು ಮಳೆನೀರು ಕಾಲುವೆಗಳಿಂದ ಸರೋವರಗಳಿಗೆ ಯಾವುದೇ ಅಡೆತಡೆಯಿಲ್ಲದೆ ಮುಕ್ತವಾಗಿ ಹರಿಯಲು ದಾರಿ ಮಾಡಿಕೊಡಲು ಸಮೀಕ್ಷೆಯನ್ನು ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿಯ ವರದಿಯ ಪುಟ 2

## ದೆಹಲಿ ಚುನಾವಣೆ: ಮತ ಚಲಾಯಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ವಿಪಕ್ಷ ನಾಯಕ ರಾಹುಲ್ ಗಾಂಧಿ

# ಗಣ್ಯಾತಿಗಣ್ಯರಿಂದ ಮತದಾನ

**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿ ವಿಧಾನಸಭೆಯ 70 ವಿಧಾನಸಭಾ ಸ್ಥಾನಗಳಿಗೆ ಇಂದು ಬೆಳಗ್ಗೆ 7 ಗಂಟೆಯಿಂದ ಮತದಾನ ಪ್ರಾರಂಭವಾಯಿತು. 8ನೇ ವಿಧಾನಸಭೆ ಚುನಾವಣೆಯು ಬಿಗಿ ಭದ್ರತೆಯಲ್ಲಿ ನಡೆಯುತ್ತಿದೆ.


ರಾಷ್ಟ್ರಪತಿ ದ್ರೌಪದಿ ಮುರ್ಮು, ವಿಪಕ್ಷ ನಾಯಕ ರಾಹುಲ್ ಗಾಂಧಿ, ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಸಂಸದೆ ಪ್ರಿಯಾಂಕ ಗಾಂಧಿ, ಬಿಜೆಪಿ ಸಂಸದೆ ಸುಷ್ಮಾ ಸ್ವರಾಜ್ ಪುತ್ರಿ ಬಾನ್ಸುರಿ ಸ್ವರಾಜ್, ಬಿಜೆಪಿ ಅಭ್ಯರ್ಥಿ ಅರ್ವಿಂದರ್ ಸಿಂಗ್ ಲವ್ಲಿ, ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ, ಆಪ್ ನಾಯಕ ಮನೀಶ್ ಸಿಸೋಡಿಯಾ ಅವರು ತಮಗೆ ನಿಗದಿ ಮಾಡಿದ ಕೇಂದ್ರಗಳಲ್ಲಿ ಮತದಾನ ಮಾಡಿದರು.

ಸಿಎಂ ಅತಿಶಿ ವಿರುದ್ಧ ಕಣಕ್ಕಿಳಿದಿರುವ ಕಾಂಗ್ರೆಸ್ ಅಭ್ಯರ್ಥಿ ಅಲ್ಕಾ ಲಂಬಾ ಅವರು ಬೆಳ್ಳಂಬೆಳಗ್ಗೆ ಮದಿಪುರ್ ಮತಕೇಂದ್ರಕ್ಕೆ ಆಗಮಿಸಿ ತಮ್ಮ ಹಕ್ಕು ಚಲಾಯಿಸಿದರು. ನಂತರ ಮಾತನಾಡಿದ ಅವರು, "ದೆಹಲಿಯ ಜನರು ಬದಲಾವಣೆ ಮತ್ತು ಅಭಿವೃದ್ಧಿ ಬಯಸಿದ್ದಾರೆ. ಆ ಬದಲಾವಣೆಯನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ.

ಕಳೆದ 10 ವರ್ಷಗಳಲ್ಲಿ ದೆಹಲಿಯನ್ನು ಹೇಗೆ ಅಭಿವೃದ್ಧಿಹೀನ ಮಾಡಲಾಗಿದೆ ಎಂಬುದು ಕಣ್ಣಮುಂದಿದೆ. ದೆಹಲಿಯ ಮತದಾರರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ, ಬದಲಾವಣೆಗಾಗಿ ಮತ ಚಲಾಯಿಸಲಿದ್ದಾರೆ" ಎಂದು ಹೇಳಿದರು.







ದೆಹಲಿಯಲ್ಲಿ 1,56,14,000 ನೋಂದಾಯಿತ ಮತದಾರರಿದ್ದಾರೆ. ಇದರಲ್ಲಿ 83,76,173 ಪುರುಷರು, 72,36,560 ಮಹಿಳೆಯರು ಮತ್ತು 1,267 ತೃತೀಯ ಲಿಂಗ ಮತದಾರರು ಇದ್ದಾರೆ. ಮತದಾರರ ಪಟ್ಟಿಯಲ್ಲಿ 18-19 ವರ್ಷ ವಯಸ್ಸಿನ 2,39,905 ಮೊದಲ ಬಾರಿಗೆ ಮತದಾರ ಮಾಡಲಿದ್ದರೆ, 85 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ 1,09,368 ವೃದ್ಧರು ಮತ್ತು 79,885 ಅಂಗವಿಕಲರು ಮತದಾನಕ್ಕೆ ಅರ್ಹರಾಗಿದ್ದಾರೆ.

ಚುನಾವಣೆ ಹಿನ್ನೆಲೆ ಸುಮಾರು 97,955 ಸಿಬ್ಬಂದಿ ಮತ್ತು 8,715 ಸ್ವಯಂಸೇವಕರನ್ನು ನಿಯೋಜಿಸಲಾಗಿದೆ. ಶಾಂತಿಯುತ ಮತದಾನಕ್ಕಾಗಿ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ (CAPF) 220 ತಂಡಗಳು, 19 ಸಾವಿರ ಗೃಹರಕ್ಷಕ ಸಿಬ್ಬಂದಿ ಮತ್ತು 35,626 ದೆಹಲಿ ಪೊಲೀಸ್ ಸಿಬ್ಬಂದಿ ಭದ್ರತೆ ಒದಗಿಸಿದ್ದಾರೆ.

ತೀವ್ರ ಪೈಪೋಟಿಯ ಕ್ಷೇತ್ರಗಳಲ್ಲಿ ನವದೆಹಲಿ, ಜಂಗ್‌ಪುರ ಮತ್ತು ಕಲ್ಕಾಜಿ ಇವೆ. ಇಲ್ಲಿ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್, ಸಿಎಂ ಅತಿಶಿ, ಮನೀಶ್ ಸಿಸೋಡಿಯಾ ಅವರು ಆಪ್‌ನಿಂದ ಸ್ಪರ್ಧೆ ಮಾಡಿದರೆ, ಬಿಜೆಪಿಯಿಂದ ಪರ್ವೇಶ್, ರಮೇಶ್ ಬಿದೂರಿ, ಕಾಂಗ್ರೆಸ್‌ನಿಂದ ಅಲ್ಕಾ ಲಂಬಾ ಸೇರಿದಂತೆ ಘಟಾನುಘಟಿಗಳು ಕಣದಲ್ಲಿದ್ದಾರೆ. ಪ್ರಸ್ತುತ 70 ಸ್ಥಾನಗಳ ವಿಧಾನಸಭೆಯಲ್ಲಿ ಆಪ್ 62 ಸ್ಥಾನ, ಬಿಜೆಪಿ 8 ಹೊಂದಿವೆ.

### ಬಿವೈವಿ.ಪರ ಕೆಲ ಪೇಮೆಂಟ್ ಸ್ವಾಮೀಜಿಗಳಿದ್ದಾರೆ: ಯತ್ನಾಳ್

**ನವದೆಹಲಿ:** ಬಿಜೆಪಿ ಹಿರಿಯ ನಾಯಕ ಬಿಎಸ್ ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ ಪದೇ ಪದೇ ಕೆಂಡಕಾರುವ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಇದೀಗ ಮತ್ತೆ ವಾಗ್ದಾಳಿ ನಡೆಸಿದ್ದಾರೆ.



ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಬಿವೈ ವಿಜಯೇಂದ್ರ ಜೊತೆಯಲ್ಲಿ ಯಾರು ಇಲ್ಲ. ಕೆಲ ಪೇಮೆಂಟ್ ಸ್ವಾಮೀಜಿಗಳಿದ್ದಾರೆ. ಅವರಿಗೆ ಒಂದು ಲಕ್ಷ ರೂಪಾಯಿ ಕೊಟ್ಟರೆ ಮಾತನಾಡುತ್ತಾರೆ ಎಂದು ಲೇವಡಿ ಮಾಡಿದರು.

ರಾಜ್ಯದಲ್ಲಿ ಬಿಎಸ್ ಯಡಿಯೂರಪ್ಪ ಪರ ಲಿಂಗಾಯತರು ಇಲ್ಲ. ಅದೆಲ್ಲ ಮುಗಿದು ಹೋದ ಅಧ್ಯಾಯ ರಾಜ್ಯದಲ್ಲಿ ಬಿಎಸ್ ವೈಗೆ ಗೌರವವಿತ್ತು. ಆದರೆ ಅದನ್ನು ಬಿಎಸ್ ವೈ ಉಳಿಸಿಕೊಳ್ಳಲಿಲ್ಲ ಎಂದು ಯತ್ನಾಳ್ ಟೀಕಿಸಿದರು.

ಡಿಕೆ ಶಿವಕುಮಾರ್ ಆಶೀರ್ವಾದದಿಂದ ಕಾಂಗ್ರೆಸ್ ಕೊಟ್ಟ ಭಿಕ್ಷೆಯಿಂದ ವಿಜಯೇಂದ್ರ ಶಾಸಕರಾದರು. ರಮೇಶ್ ಜಾರಕಿಹೊಳಿ ಯೋಗೇಶ್ವರ್ ರಿಂದ ಬಿಜೆಪಿ ಸರ್ಕಾರ ಬಂದಿತ್ತು ಎಂದು ತಿಳಿಸಿದ ಯತ್ನಾಳ್, ಕರ್ನಾಟಕದಲ್ಲಿ ಕುಟುಂಬ ರಾಜಕಾರಣ ಅಂತ್ಯವಾಗಬೇಕು ಎಂದರು.

### ಅಮೆರಿಕದಿಂದ ಭಾರತೀಯರ ಗಡಿಪಾರು: ಮಧ್ಯಾಹ್ನ ಅಮೃತಸರಕ್ಕೆ ಮರಳಲಿರುವ 205 ಮಂದಿ

**ಅಮೃತ್‌ಸರ:** ಅಕ್ರಮ ವಲಸಿಗರ ವಿರುದ್ಧ ಅಮೆರಿಕದ ನೂತನ ಅಧ್ಯಕ್ಷ ಡೋನಾಲ್ ಟ್ರಂಪ್ ಕಠಿಣ ಕ್ರಮ ತೆಗದುಕೊಳ್ಳುತ್ತಿದ್ದಾರೆ. ಈ ಹಿನ್ನೆಲೆ ಅಕ್ರಮ ವಲಸಿಗರನ್ನು ಅಮೆರಿಕದಿಂದ ಗಡಿಪಾರು ಮಾಡುತ್ತಿದ್ದಾರೆ. ಅದರಂತೆ ಅಕ್ರಮವಾಗಿ ಅಮೆರಿಕ ಪ್ರವೇಶಿಸಿದ್ದ 205 ಜನರು ಭಾರತಕ್ಕೆ ಮರಳುತ್ತಿದ್ದಾರೆ. ಇವರನ್ನು ಹೊತ್ತ ಅಮೆರಿಕದ ಮಿಲಿಟರಿ ವಿಮಾನ ಸಿ- 17 ಅಮೃತ್‌ಸರ್ ವಿಮಾನ ನಿಲ್ದಾಣದಲ್ಲಿ ಬಂದಿಳಿಯಲಿದೆ.

ಮಂಗಳವಾರ ಮಧ್ಯಾಹ್ನ ಸ್ಯಾನ್ ಆಂಟೋನಿಯೊದಿಂದ ಹೊರಟಿರುವ ವಿಮಾನ ಇಂದು ಅಮೃತಸರದ ಶ್ರೀ ಗುರು ರಾಮದಾಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯಲಿದೆ. ಅಮೆರಿಕದಿಂದ ವಿಮಾನ ಹೊರಡುತ್ತಿದ್ದ ಸುದ್ದಿ ತಿಳಿಯುತ್ತಿದ್ದಂತೆ ಅಮೃತ್‌ಸರದಲ್ಲಿ ಜನಸಂದಣಿ ಹೆಚ್ಚಾಗಿದೆ. ಈ ಮೊದಲು ಇಂದು ಬೆಳಗ್ಗೆ 9ಕ್ಕೆ ವಿಮಾನ ಬಂದಿಳಿಯಲಿದೆ ಎನ್ನಲಾಗಿತ್ತು. ಇದೀಗ



ವಿಮಾನ ಮಧ್ಯಾಹ್ನ 1ಕ್ಕೆ ಲ್ಯಾಂಡ್ ಆಗಲಿದೆ ಎಂದು ತಿಳಿಸಲಾಗಿದೆ.

ಅಮೆರಿಕದಿಂದ ಭಾರತೀಯರನ್ನು ಹೊತ್ತ ವಿಮಾನ ಹೊರಡುತ್ತಿದ್ದ ಸುದ್ದಿ ತಿಳಿಯುತ್ತಿದ್ದಂತೆ ಅವರ ಸಂಬಂಧಿಕರು ವಿಮಾನ ನಿಲ್ದಾಣದತ್ತ ಮುಖ ಮಾಡಿದ್ದಾರೆ. ವಿಮಾನದಲ್ಲಿ 11 ಮಂದಿ ಸಿಬ್ಬಂದಿ ಹಾಗೂ 45 ಅಮೆರಿಕನ್ ಅಧಿಕಾರಿಗಳು ಇದ್ದಾರೆ. ಇವರು 205 ಭಾರತೀಯರನ್ನು ಅಮೃತ್‌ಸರ ವಿಮಾನ ನಿಲ್ದಾಣದಲ್ಲಿ ಇಳಿಸಿದ ಬಳಿಕ ವಾಪಸ್ ಆಗಲಿದೆ. ಈ 205 ಮಂದಿಯಲ್ಲಿ ಪಂಜಾಬ್ ಹೊರತಾದ ಇತರ ರಾಜ್ಯದ ಭಾರತೀಯರು ಇದ್ದಾರೆ. ಇವರ ಆಗಮನ ಹಿನ್ನಲೆ ವಿಮಾನ ನಿಲ್ದಾಣದಲ್ಲಿ ಭಾರತೀಯ ಭದ್ರತಾ ಏಜೆನ್ಸಿಗಳನ್ನು ಕೂಡ ಸೇವೆಗೆ ನಿಯೋಜಿಸಲಾಗಿದೆ. ಪುಟ 2

### ಕೇಜ್ರಿವಾಲ್: ಪೊಲೀಸ್ ದೂರು ದಾಖಲು

**ನವದೆಹಲಿ:** ಯಮುನಾ ನದಿಗೆ ಬಿಜೆಪಿ ವಿಷ ಹಾಕಿದೆ ಎಂಬ ಆರೋಪ ಮಾಡಿದ್ದ ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನ್ಯಾಯಾಲಯದ ನಿರ್ದೇಶನಗಳನ್ನು ಅನುಸರಿಸಿ ಹರಿಯಾಣದ ಕುರುಕ್ಷೇತ್ರದ ಶಹಾಬಾದ್ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತಾ ಅಡಿ ಕೇಜ್ರಿವಾಲ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.



ತನಿಖೆ ಆರಂಭವಾಗಿದೆ. ಸಾಕ್ಷ್ಯಗಳ ಆಧಾರದ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಶಹಾಬಾದ್ ಸ್ಟೇಷನ್ ಹೌಸ್ ಅಧಿಕಾರಿ ಸತೀಶ್ ಕುಮಾರ್ ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಹರ್ಷ್ ಮಲ್ಹೋತ್ರಾ ಅವರು, ಕೇಜ್ರಿವಾಲ್ ದೆಹಲಿಯಲ್ಲಿನ ನಿಜವಾದ ಸಮಸ್ಯೆಗಳಿಂದ ಗಮನ ಬೇರೆಡೆ ಸೆಳೆಯಲು ಬಿಜೆಪಿ ವಿರುದ್ಧ ವಿನಾಕಾರಣ ಆರೋಪ ಮಾಡುತ್ತಿದ್ದಾರೆ. ಆಪ್ ಕಳೆದ 10 ವರ್ಷಗಳ ಆಡಳಿತದಲ್ಲಿ ಯಾವುದೇ ಅಭಿವೃದ್ಧಿ ಮಾಡಿಲ್ಲ. ಪ್ರಚಾರದ ವೇಳೆ ಅಭಿವೃದ್ಧಿ ಬಗ್ಗೆ ಮಾತನಾಡಲು ಸಾಧ್ಯವಾಗದೇ ಬಿಜೆಪಿ ಮೇಲೆ ದೂರುತ್ತಿದೆ ಎಂದು ಆರೋಪಿಸಿದರು. ಪುಟ 2

### ಮುಡಾ ತೀರ್ಪು ಆತಂಕದಲ್ಲಿ ಸಿದ್ದರಾಮಯ್ಯ ಬಜೆಟ್!

**ಬೆಂಗಳೂರು:** ಸ್ನಾನಗೃಹದಲ್ಲಿ ಆಯತಪ್ಪಿ ಬಿದ್ದು ಮಂಡಿ ನೋವಿನಿಂದ ಬಳಲುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರದಿಂದ ಎಂದಿನಂತೆ ತಮ್ಮ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದಾರೆ. ಮೈಸೂರು ಪ್ರವಾಸ ವೇಳೆ ಈ ಘಟನೆಗೆ ಒಳಗಾಗಿದ್ದ ಮುಖ್ಯಮಂತ್ರಿ ಅವರು, ವೈದ್ಯರ ಸಲಹೆ ಮೇರೆಗೆ ಐದು ದಿನಗಳ ಕಾಲ ತಮ್ಮ ಎಲ್ಲಾ ಕಾರ್ಯಕ್ರಮಗಳನ್ನು ರದ್ದುಪಡಿಸಿ ಪೂರ್ಣ ವಿಶ್ರಾಂತಿಯಲ್ಲಿದ್ದಾರೆ.



ಕಳೆದ ಸೋಮವಾರದಿಂದ ಸತತವಾಗಿ 10 ದಿನಗಳ ಕಾಲ 2025-26ನೇ ಸಾಲಿನ ಮುಂಗಡಪತ್ರ ಸಿದ್ಧತೆಯ ಪೂರ್ವಭಾವಿ ಸಭೆಗಳನ್ನು ಕರೆದಿದ್ದರು. ಆದರೆ, ಈ ಘಟನೆಯಿಂದ ಪೂರ್ವಭಾವಿ ಸಭೆ ಸೇರಿದಂತೆ ಪ್ರಮುಖ ಕಾರ್ಯಕ್ರಮಗಳಿಂದಲೂ ದೂರ ಉಳಿದಿದ್ದರು.

ಇದೀಗ ಫೆಬ್ರವರಿ 6ರಿಂದ ಶನಿವಾರ, ಭಾನುವಾರ ಹೊರತುಪಡಿಸಿ 8 ದಿನಗಳ ಕಾಲ ಮುಂಗಡಪತ್ರದ ಇಲಾಖಾ ಸಭೆಗಳಲ್ಲಿ ಭಾಗವಹಿಸಲಿದ್ದಾರೆ ಎಂದು ಮುಖ್ಯಮಂತ್ರಿಗಳ ಕಾರ್ಯಾಲಯ ತಿಳಿಸಿದೆ. ಅಂದು ಬೆಳಗ್ಗೆ 11 ಗಂಟೆಯಿಂದ ಸಂಜೆ 7 ರವರೆಗೆ 12 ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

ಫೆಬ್ರವರಿ 14ರಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಇಲಾಖಾ ಅಧಿಕಾರಿಗಳೊಂದಿಗಿನ ಸಮಾಲೋಚನೆ ಮೂಲಕ ಪುಟ 2

### ಕಾಶ್ಮೀರದ ಕುಲ್ಗಾಮ್‌ನಲ್ಲಿ ಸೇನೆಯಿಂದ ಬೃಹತ್ ಕಾರ್ಯಾಚರಣೆ, ಹಲವರ ವಶ

**ಶ್ರೀನಗರ:** ದಕ್ಷಿಣ ಕಾಶ್ಮೀರದ ಕುಲ್ಗಾಮ್ ಜಿಲ್ಲೆಯಲ್ಲಿ ಮಾಜಿ ಸೈನಿಕರೊಬ್ಬರನ್ನು ಅವರ ನಿವಾಸದ ಬಳಿ ಉಗ್ರರು ಹತ್ಯೆ ಮಾಡಿದ ನಂತರ ಭದ್ರತಾ ಪಡೆಗಳು ದೊಡ್ಡ ಪ್ರಮಾಣದ ಉಗ್ರ ನಿಗ್ರಹ ಕಾರ್ಯಾಚರಣೆಯನ್ನು ಆರಂಭಿಸಿವೆ. ಘಟನೆಗೆ ಕಾರಣರಾದವರನ್ನು ಪತ್ತೆಹಚ್ಚಲು ಅಧಿಕಾರಿಗಳು ಪ್ರಯತ್ನಗಳನ್ನು ತೀವ್ರಗೊಳಿಸುತ್ತಿರುವುದರಿಂದ, ವಿಚಾರಣೆಗಾಗಿ ಡಜನ್ ಗಟ್ಟಲೆ ವ್ಯಕ್ತಿಗಳನ್ನು ವಶಕ್ಕೆ ಪಡೆಯಲಾಗಿದೆ. ಮೊನ್ನೆ ಸೋಮವಾರ ಮಧ್ಯಾಹ್ನ ಉಗ್ರರು ಮಂಜೂರ್ ಅಹ್ಮದ್ ವಾಗೆ ಮೇಲೆ ದಾಳಿ ಮಾಡಿ ಕೊಂದು ಹಾಕಿದ ನಂತರ ಪೊಲೀಸರು ಸಿಆರ್‌ಪಿಎಫ್ ಮತ್ತು ಸೇನಾಧಿಕಾರಿಗಳು ಬೆಹಿಬಾಗ್ ಮತ್ತು ಹತ್ತಿರದ ಪ್ರದೇಶಗಳಲ್ಲಿ ವ್ಯಾಪಕ ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾರೆ. ದಾಳಿಯಲ್ಲಿ ಅವರ ಪತ್ನಿ ಮತ್ತು ಸೊಸೆ ಕೂಡ ಗಾಯಗೊಂಡಿದ್ದಾರೆ.

ಭದ್ರತಾ ಸಿಬ್ಬಂದಿ ಡ್ರೋನ್ ಮತ್ತು ಇತರ ಸುಧಾರಿತ ಕಣ್ಗಾವಲು ಸಾಧನಗಳನ್ನು ಬಳಸಿಕೊಂಡು ಪ್ರದೇಶವನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಸ್ಥಳೀಯ ಓವರ್ ಗ್ರೌಂಡ್ ವರ್ಕರ್ಸ್ (ಓಜಿಡಬ್ಲ್ಯೂ) ನಿಂದ ಉಗ್ರಗಾಮಿಗಳು ಲಾಜಿಸ್ಟಿಕ್ ಬೆಂಬಲವನ್ನು ಪುಟ 2

### ಸಿಸಿಬಿ ಕಾರ್ಯಾಚರಣೆ 1 ಕೋಟಿ 75 ಲಕ್ಷ ನಕಲಿ ವಸ್ತು ವಶ

**ಬೆಂಗಳೂರು:** ಗೃಹಪಯೋಗಿ ವಸ್ತುಗಳನ್ನು ನಕಲಿಯಾಗಿ ತಯಾರಿಸಿ, ಮಾರಾಟ ಮಾಡುತ್ತಿದ್ದ ಗೋದಾಮಿನ ಮೇಲೆ ಸಿಸಿಬಿ ದಾಳಿ ಮಾಡಿ, ಸುಮಾರು 1 ಕೋಟಿ 75 ಲಕ್ಷ ಬೆಲೆ ಬಾಳುವ ನಕಲಿ ವಸ್ತುಗಳ ವಶ ಪಡಿಸಿಕೊಂಡಿದ್ದಾರೆ.

ಒಂದು ಪ್ರತಿಷ್ಠಿತ ಕಂಪನಿಯ ಅಧಿಕೃತ ಪ್ರತಿನಿಧಿಯವರಿಗೆ ದೊರೆತ ಖಚಿತ ಮಾಹಿತಿಯನ್ನು ಸಿಸಿಬಿಯ ಆರ್ಥಿಕ ಅಪರಾಧ ದಳದ ಅಧಿಕಾರಿಗಳಿಗೆ ತಿಳಿಸಿರುತ್ತಾರೆ. ಮಾಹಿತಿಯಲ್ಲಿ ಕಾಟನ್ ಪೇಟೆ, ಕಾಚೋಹಳ್ಳಿ ಗ್ರಾಮ ಗಳಲ್ಲಿರುವ ಗೋದಾಮಿನಲ್ಲಿ ನಕಲಿಯಾಗಿ ಗೋದ್ರೇಜ್ ಕನ್ಸೂಮರ್ ಪ್ರಾಡಕ್ಟ್, ಮತ್ತು ಗ್ಯಾಂಬಲ್ ಸಂಸ್ಥೆ, ಹಾಗೂ ಗ್ರೂಪ್ ಕರಮ್ ಚಂದ್ ಲಿಮಿಟೆಡ್ ಕಂಪನಿ ರವರಿಗೆ ಸೇರಿದ ವಸ್ತುಗಳಾದ ಲೈಜೋಲ್, ಹಾರ್ಪಿಕ್, ಕೋಲಿನ್, ಟೈಡ್ ಪೌಡರ್, ಆಲ್‌ಔಟ್, ಏರಿಯಲ್, ಲೇಬಲ್ಸ್, ಗುಡ್‌ನೈಟ್, ವೀಲ್ ಡಿಟರ್ಜೆಂಟ್ ಪೌಡರ್, ಸರ್ಫ್ ಎಕ್ಸೆಲ್, 3 ರೋಸ್ ಟೀ ಪೌಡರ್, ರೆಡ್ ಲೇಬಲ್ ಟೀ ಪೌಡರ್, ಮತ್ತಿತ್ತರ ಉತ್ಪನ್ನಗಳನ್ನು ನಕಲಿಯಾಗಿ ತಯಾರಿಸಿದ್ದ ವಸ್ತುಗಳನ್ನು ಶೇಖರಿಸಿಟ್ಟಿದ್ದು, ಅವುಗಳನ್ನು ವಾಹನಗಳ ಮುಖಾಂತರ ಸಾಗಾಣಿ ಮಾಡುತ್ತಿರುವುದಾಗಿ ಖಚಿತ ಮಾಹಿತಿಯ ಆಧಾರದ ಮೇರೆಗೆ ಸಿಸಿಬಿ ಪೊಲೀಸ್‌ರು ಪ್ರಕರಣವನ್ನು ದಾಖಲಿಸಿಕೊಂಡು ಪುಟ 2

### ಲೋಪಗಳಿಂದ ಕೂಡಿದ ರಾಷ್ಟ್ರೀಯ ಶಿಕ್ಷಣ ನೀತಿ ಹಿಂಪಡೆಯುವಂತೆ ಕೇಂದ್ರದ ಮೇಲೆ ಒತ್ತಡ: ಡಿಸಿಎಂ ಡಿ.ಕೆ.ಶಿವಕುಮಾರ್

ಬೆಂಗಳೂರು: ಕೇಂದ್ರ ಸರ್ಕಾರ ಹಾಗೂ ಯುಜಿಸಿ (ವಿಶ್ವವಿದ್ಯಾಲಯ ಧನ ಸಹಾಯ ಆಯೋಗ) ದ ಮೇಲೆ ಒತ್ತಡ ತಂದು ಅನೇಕ ಲೋಪದೋಷಗಳನ್ನು ಹೊಂದಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಹಿಂಪಡೆಯಲು ನಾವೆಲ್ಲರೂ ಸೇರಿ ಒತ್ತಡ ಹೇರಬೇಕು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ನಗರದ ಖಾಸಗಿ ಹೋಟೆಲ್ ನಲ್ಲಿ ಬುಧವಾರ ನಡೆದ ರಾಜ್ಯ ಉನ್ನತ ಶಿಕ್ಷಣ ಸಚಿವರ ಸಮ್ಮೇಳನದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ಜಾರಿಗೆ ತಂದಿದ್ದ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಸಾಕಷ್ಟು ಲೋಪಗಳಿದ್ದವು. ನಮ್ಮ ಕರ್ನಾಟಕ ಸರ್ಕಾರ ಧೈರ್ಯದಿಂದ ಮುನ್ನುಗ್ಗಿ ಒಂದಷ್ಟು ತಿದ್ದುಪಡಿ ಮಾಡುವ ತೀರ್ಮಾನಗಳನ್ನು ತೆಗೆದುಕೊಂಡಿದೆ" ಎಂದರು.

ಈ ಸಮ್ಮೇಳನದಿಂದ ಹೊರ ಬರುವ ವಿಚಾರಗಳು ಕೇಂದ್ರ ಸರ್ಕಾರಕ್ಕೆ ಮುಟ್ಟಬೇಕು. ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ಎಲ್ಲಾ ರಾಜ್ಯಗಳ ಶೈಕ್ಷಣಿಕ ಗುಣಮಟ್ಟ ಅತ್ಯುತ್ತಮವಾಗಿದೆ. ನಾವು ಸೌಲಭ್ಯ ಕೊಡುವುದರಲ್ಲೂ ಮುಂದಿದ್ದೇವೆ. ನನಗೆ ನೆನಪಿರುವಂತೆ ಕಳೆದ 30 ವರ್ಷಗಳ ಹಿಂದೆಯೇ ಉತ್ತರ ಭಾರತದ ವಿದ್ಯಾರ್ಥಿಗಳು ದಕ್ಷಿಣ ಭಾರತ ರಾಜ್ಯಗಳಿಗೆ ಉತ್ತಮ ಶಿಕ್ಷಣ ಪಡೆಯುವ ಸಲುವಾಗಿ ವಲಸೆ ಬರುತ್ತಿದ್ದುದ್ದನ್ನು ಗಮನಿಸಿದ್ದೇನೆ" ಎಂದರು.

ಕರ್ನಾಟಕದಲ್ಲಿ ಸುಮಾರು 70ಕ್ಕೂ ಹೆಚ್ಚು ಮೆಡಿಕಲ್ ಕಾಲೇಜುಗಳು, 250 ಕ್ಕೂ ಹೆಚ್ಚು ಎಂಜಿನಿಯರಿಂಗ್ ಕಾಲೇಜುಗಳಿವೆ. ತಮಿಳುನಾಡು, ಕೇರಳ, ತೆಲಂಗಾಣ, ಆಂಧ್ರಪ್ರದೇಶಗಳು ಹೆಚ್ಚು ಕಾಲೇಜುಗಳನ್ನು ಹೊಂದಿವೆ. ಆದರೆ ನಮ್ಮ ಶಿಕ್ಷಣ ನೀತಿಗಳನ್ನು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟಗಳಿಗೆ ತೆಗೆದುಕೊಂಡು ಹೋಗುವುದಕ್ಕೆ ಸಾಧ್ಯವಾಗುತ್ತಿಲ್ಲ ಎಂಬುದೇ ದೊಡ್ಡ ಪ್ರಶ್ನೆಯಾಗಿ ಕಾಡುತ್ತಿದೆ" ಎಂದು ವಿಷಾದ ವ್ಯಕ್ತಪಡಿಸಿದರು.

ಗಣತಂತ್ರ ವ್ಯವಸ್ಥೆ ಕಾಪಾಡಬೇಕಿದೆ

ನಮ್ಮ ಗಣತಂತ್ರ ವ್ಯವಸ್ಥೆ ವಿನೂತನವಾದುದು. ನಮ್ಮ ಸಂವಿಧಾನ ಹಲವಾರು ಹಕ್ಕುಗಳನ್ನು ನಮಗೆ ನೀಡಿದೆ. ಭಾಷೆಗಳ ವಿಚಾರದಲ್ಲಿಯೂ ನಾವು ವೈವಿಧ್ಯತೆ ಹೊಂದಿದ್ದೇವೆ. ನಾವುಗಳು ರಾಜ್ಯಗಳ ಮಟ್ಟದಲ್ಲಿ ಸ್ಪರ್ಧಿಸುವುದು ಉತ್ತಮವಾದುದಲ್ಲ. ನಾವು ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಬೇಕಿದೆ. ಈ ಕಾರಣಕ್ಕೆ ವ್ಯವಸ್ಥೆಯನ್ನು ನಾವುಗಳೆಲ್ಲ ಸೇರಿ ಬದಲಾಯಿಸಬೇಕಿದೆ. ಕಳೆದ 30 ವರ್ಷಗಳಲ್ಲಿ ಇಡೀ ಶಿಕ್ಷಣ ವ್ಯವಸ್ಥೆಯೇ ಬದಲಾಗಿದೆ. ಜೊತೆಗೆ ಸಾಕಷ್ಟು ಬದಲಾವಣೆಗಳನ್ನೂ ನಾವು ನೋಡಿದ್ದೇವೆ. ಎಐ ತಂತ್ರಜ್ಞಾನ ಹೊಸದಾಗಿ ಬೆರಗು ಹುಟ್ಟಿಸಿದೆ. ಸವಾಲುಗಳನ್ನು ಇಟ್ಟುಕೊಂಡು ಯುವಜನತೆಗೆ ಅವಕಾಶ ಸೃಷ್ಟಿಸುವುದು ನಮ್ಮೆಲ್ಲರ ಗುರಿಯಾಗಬೇಕು" ಎಂದು ಹೇಳಿದರು.

ವಿಶ್ವವಿದ್ಯಾನಿಲಯಗಳ ಆಡಳಿತ ವಿಚಾರದಲ್ಲಿಯೂ ನಾವು ಸಾಕಷ್ಟು ಸುಧಾರಣೆ ಮಾಡಬೇಕಾಗಿದೆ. ಈ ವಿಚಾರಗಳ ಬಗ್ಗೆಯೂ ನಾವು ಬೆಳಕು ಚೆಲ್ಲಬೇಕಾಗಿದೆ. ಏಕೆಂದರೆ ಕುಲಪತಿಗಳ ನೇಮಕ ಸೇರಿದಂತೆ ಸಾಕಷ್ಟು ವಿಚಾರಗಳು ನಮ್ಮ ಮುಂದಿವೆ. ಕುಲಪತಿಗಳು ಹಾಗೂ ಶೈಕ್ಷಣಿಕ ಸಿಬ್ಬಂದಿಗಳ ನೇಮಕಾತಿಗೆ ಕನಿಷ್ಠ ಮಾನದಂಡಗಳು, ಅರ್ಹತೆಗಳನ್ನು ನಿಗಧಿ ಮಾಡಬೇಕಿದೆ. ಎಲ್ಲದಕ್ಕಿಂತ ಮುಖ್ಯವಾಗಿ ಉನ್ನತ ಶಿಕ್ಷಣ ವ್ಯವಸ್ಥೆ ಗಟ್ಟಿಯಾಗಬೇಕಿದೆ. ಅನೇಕ ದೇಶಗಳ ವಿಶ್ವವಿದ್ಯಾಲಯಗಳಲ್ಲಿ ಭಾರತೀಯರು ಅತ್ಯುತ್ತಮ ಸ್ಥಾನಗಳನ್ನು ಅಲಂಕರಿಸಿದ್ದಾರೆ. ಈ ಸಮ್ಮೇಳನದ ಮೂಲಕ ಜಾಗತಿಕ ಮಟ್ಟಕ್ಕೆ ನಮ್ಮ ಶಿಕ್ಷಣ ವ್ಯವಸ್ಥೆ ಬೆಳೆಯಲು ಅನೇಕ ತಜ್ಞರ ಸಲಹೆ ಉಪಯುಕ್ತವಾಗುತ್ತವೆ" ಎಂದರು.

ಬೆಂಗಳೂರು, ಚೆನ್ನೈ, ಹೈದರಾಬಾದ್ ಇವುಗಳು ತಾಂತ್ರಿಕ ಪರಿಣಿತರನ್ನು ಸೃಷ್ಟಿ ಮಾಡುವುದರಲ್ಲಿ ಮುಂಚೂಣಿಯಲ್ಲಿವೆ. ನಮ್ಮ ದಕ್ಷಿಣ ಭಾರತದ ರಾಜ್ಯಗಳ ಸರಿಸಮಾನವಾಗಿ ಯಾರೂ ನಿಲ್ಲಲು ಸಾಧ್ಯವಿಲ್ಲ. ನಮ್ಮ ರಾಜ್ಯಗಳಿಗೆ ತಮ್ಮದೇ ಆದ ಶಕ್ತಿಗಳನ್ನು ಹೊಂದಿವೆ. ಕೆಲಸ ಮಾಡಲು, ಕಲಿಯಲು, ದುಡಿಯಲು ಪ್ರಸಕ್ತವಾಗಿವೆ. ನಮ್ಮ ಹಿಂದಿನ ನಾಯಕರು ಗುಣಮಟ್ಟದ ಅಡಿಪಾಯವನ್ನು ಶಿಕ್ಷಣ ಕ್ಷೇತ್ರಗಳಿಗೆ ಹಾಕಿಕೊಟ್ಟಿದ್ದಾರೆ. ಇದನ್ನು ನಾವು ಕಾಪಾಡಬೇಕು. ನಮ್ಮ ದೇಶ ಶಿಕ್ಷಣದ ವಿಚಾರದಲ್ಲಿ ಮಹತ್ತರ ಸಾಧನೆ ಮಾಡಿದೆ ಎಂದು ಹೇಳಿದರು.



ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವರು ದೇಶೀಯವಾಗಿ ಅಭಿವೃದ್ಧಿ ಪಡಿಸಲಾಗಿರುವ ಆನೆ ರೇಡಿಯೋ ಕಾಲರ್ ಅನ್ನು ಪರಿವೀಕ್ಷಿಸಿ, ಅಪರ ಮುಖ್ಯ ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಕುಮಾರ್ ಪುಷ್ಕರ್ ಅವರಿಂದ ಮಾಹಿತಿ ಪಡೆದರು.

# ವಿಧಾನಸೌಧದಲ್ಲಿ ಬೀದಿ ನಾಯಿಗಳ ಹಾವಳಿಗೆ ಅಂಕುಶ ಹಾಕಲು ಹೊಸ ಪ್ಲಾನ್

ಬೆಂಗಳೂರು: ರಾಜ್ಯದ ಶಕ್ತಿ ಕೇಂದ್ರವಾದ ವಿಧಾನಸೌಧದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದೆ. ಅವುಗಳಿಗೆ ಅಂಕುಶ ಹಾಕಲು ಸ್ಪೀಕರ್ ಯು.ಟಿ.ಖಾದರ್ ವಿಧಾನಸೌಧ ಆವರಣದಲ್ಲೇ ಶ್ವಾನಗಳಿಗೆ ಪ್ರತ್ಯೇಕ ಸ್ಥಳ ಗುರುತಿಸಿ ಶೆಲ್ಟರ್ ನಿರ್ಮಿಸಲು ಮುಂದಾಗಿದ್ದಾರೆ.

ಈ ಸಂಬಂಧ ವಿಧಾನಸೌಧದಲ್ಲಿ ಸಭಾಧ್ಯಕ್ಷ ಯು.ಟಿ.ಖಾದರ್ ನೇತೃತ್ವದಲ್ಲಿ ಸಭೆ ನಡೆಸಲಾಯಿತು. ಸಭೆಯಲ್ಲಿ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಹಿರಿಯ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು. ಸಭೆಯಲ್ಲಿ ವಿಧಾನಸೌಧ ಆವರಣದಲ್ಲಿ ನಾಯಿಗಳ ಹಾವಳಿ ನಿಯಂತ್ರಣಕ್ಕೆ ವಿವಿಧ ಕ್ರಮಗಳ ಬಗ್ಗೆ ಚರ್ಚೆ ನಡೆಸಲಾಯಿತು.

ವಿಧಾನಸೌಧ ಆವರಣದಲ್ಲಿ 54 ಬೀದಿ ನಾಯಿಗಳು: ವಿಧಾನಸೌಧ ಆವರಣದಲ್ಲಿ ಸುಮಾರು 54 ಬೀದಿ ನಾಯಿಗಳು ಇವೆ. ಈ ಬೀದಿ ನಾಯಿಗಳ ಓಡಾಟದಿಂದ ಸಾರ್ವಜನಿಕರಿಗೆ, ಅಧಿಕಾರಿಗಳಿಗೆ, ವಾಹನ ಚಾಲಕರಿಗೆ ಸಮಸ್ಯೆ ಎದುರಾಗುತ್ತಿದೆ. ಶಾಲಾ ಮಕ್ಕಳು ವಿಧಾನಸೌಧಕ್ಕೆ ಬರುವಾಗ ಬೀದಿ ನಾಯಿಗಳು ದಾಳಿ ನಡೆಸಲು ಮುಂದಾಗುತ್ತಿರುವ ಘಟನೆಗಳು ನಡೆಯುತ್ತಿವೆ. ಇತ್ತ ವಿಧಾನಸೌಧ ಆವರಣ, ಪಾರ್ಕ್, ನೆಲ ಮಹಡಿ, ವರಾಂಡಗಳಲ್ಲಿ ಎಲ್ಲೆಂದರಲ್ಲಿ ಓಡಾಡುತ್ತಿರುತ್ತವೆ. ಸರ್ಕಾರಿ ಸಾಮಾರಂಭದ ವೇಳೆಯೂ ವಿಧಾನಸೌಧದಲ್ಲಿನ ಬೀದಿ ನಾಯಿಗಳು ಅಪಾಯ ಉಂಟು ಮಾಡುತ್ತಿವೆ ಎಂಬ ದೂರುಗಳು ಕೇಳಿ ಬಂದಿತ್ತು.

ಇದನ್ನು ಗಂಭೀರವಾಗಿ ತೆಗೆದುಕೊಂಡಿರುವ ಸ್ಪೀಕರ್ ಯು.ಟಿ.ಖಾದರ್ ಅವುಗಳ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಕ್ರಮಗಳ







ಬಗ್ಗೆ ಚರ್ಚೆ ನಡೆಸಿದರು. ಸಭೆ ಬಳಿಕ ಮಾತನಾಡಿದ ಅವರು, "ಪ್ರಾಣಿಗಳಿಗೆ ಮಾತನಾಡಲು ಆಗುತ್ತಾ. ಅವುಗಳ ಕಷ್ಟವನ್ನು ನಾವು ನೋಡಬೇಕು. ವಿಧಾನಸೌಧದ ವ್ಯಾಪ್ತಿಯಲ್ಲಿ ವಾಕಿಂಗ್ ಮಾಡುವಾಗ, ವಿಧಾನಸೌಧ ನೋಡಲು ಮಕ್ಕಳು ಬಂದಾಗ ಅವನ್ನು ಕಂಡು ಭಯಭೀತರಾಗುತ್ತಾರೆ. ನಾಯಿಗಳನ್ನು ಇಲ್ಲಿಂದ ತೆರವು ಮಾಡಬೇಕೆಂದು ಚರ್ಚೆ ಮಾಡಿದ್ದೇವೆ. ಇದಕ್ಕೆ ಪರ, ವಿರೋಧ ಎರಡು ಇದೆ. ನಾಯಿಗಳನ್ನು ಎಲ್ಲಿ ಬಿಡಬೇಕು ಎಂಬ ಬಗ್ಗೆಯೂ ಚರ್ಚೆ ಆಯಿತು" ಎಂದು ತಿಳಿಸಿದರು. "ಇವತ್ತು ಸಭಾಪತಿಗಳು, ಮುಖ್ಯ ಕಾರ್ಯದರ್ಶಿ, ಆರೋಗ್ಯ ಸಚಿವರು, ಡಿಪಿಆರ್, ವಿಧಾನಸೌಧ ಪೊಲೀಸ್, ಪಿಡಬ್ಲ್ಯುಡಿ ಇಲಾಖೆಯವರು ಸಭೆ ಮಾಡಿದ್ದೇವೆ. 54 ನಾಯಿಗಳು ವಿಧಾನಸೌಧ ಆವರಣದಲ್ಲಿ ಇವೆ. ಮಳೆಗಾಲ, ಬಿಸಿಲು ಬಂದಾಗ ಶೆಲ್ಟರ್ ಎಲ್ಲಿ ಇರುತ್ತದೆಯೋ ಅಲ್ಲಿಗೆ ಹೋಗುತ್ತವೆ. ಅವುಗಳನ್ನು ಬೇರೆ ಕಡೆ ಶಿಫ್ಟ್ ಮಾಡಲು ಆಗುವುದಿಲ್ಲ" ಎಂದು ಹೇಳಿದರು. ಇದಕ್ಕಾಗಿ ವಿಧಾನಸೌಧದ ಆವರಣದಲ್ಲಿ ಒಂದು ಶೆಲ್ಟರ್ ನಿರ್ಮಾಣ ಮಾಡುವ ಬಗ್ಗೆ ಚಿಂತನೆ ನಡೆದಿದೆ. ಅವುಗಳನ್ನು ನೋಡಲು ಸಿಬ್ಬಂದಿ ನಿಯೋಜಿಸಲಾಗುವುದು. ಎನ್‌ಜಿಓಗೆ ವಹಿಸಿದರೆ ಪ್ರಾಣಿಗಳ ಯೋಗಕ್ಷೇಮ ನೋಡಿಕೊಳ್ಳುತ್ತಾರೆ. ನಾಯಿಗಳಿಗೆ ವಿಧಾನಸೌಧ ಆವರಣದಲ್ಲೇ ಪ್ರತ್ಯೇಕ ಸ್ಥಳ ಗುರುತು ಮಾಡಿ, ವ್ಯವಸ್ಥೆ ಮಾಡಲು ಒಂದು ಅಂದಾಜು ವೆಚ್ಚದ ವರದಿ ನೀಡಲು ತಿಳಿಸಿದ್ದೇವೆ. 15 ದಿನಗಳ ಒಳಗೆ ಟೆಂಡರ್ ಕರೆಯುತ್ತೇವೆ" ಎಂದರು.

# ಯತ್ನಾಳ್ ಉಚ್ಚಾಟನೆಗೆ ಎಂ.ಪಿ ರೇಣುಕಾಚಾರ್ಯ ಆಗ್ರಹ

**ಬೆಂಗಳೂರು:** ರಾಜ್ಯ ಬಿಜೆಪಿ ಬಣ ಬಡಿದಾಟ ಹೆಚ್ಚುತ್ತಿದ್ದು ಈ ಮಧ್ಯೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ದ ವಾಗ್ದಾಳಿ ನಡೆಸಿದ್ದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ದ ಮಾಜಿ ಶಾಸಕ ಎಂ.ಪಿ ರೇಣುಕಾಚಾರ್ಯ ಗುಡುಗಿದ್ದಾರೆ.

ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಎಂ.ಪಿ ರೇಣುಕಾಚಾರ್ಯ, ರೆಬೆಲ್ಸ್ ನಾಯಕರು ಮಾನಸಿಕವಾಗಿ ಅಸ್ವಸ್ಥರಾಗಿದ್ದಾರೆ. ಇವರು ದೆಹಲಿ ದಂಡಯಾತ್ರೆ ಮಾಡುತ್ತಿರುವ ದಂಡಪಿಂಡಗಳು ಎಂದು ಕಿಡಿಕಾರಿದ್ದಾರೆ. ಹಾಗೆಯೇ ಶಾಸಕ ಯತ್ನಾಳ್ ಉಚ್ಚಾಟನೆಗೆ ಎಂ.ಪಿ ರೇಣುಕಾಚಾರ್ಯ ಆಗ್ರಹಿಸಿದ್ದಾರೆ.

ಪ್ರಭಾವಿ ಸಚಿವರೊಂದಿಗೆ ಯತ್ನಾಳ್ ಒಪ್ಪಂದ

ಹಾಗೆಯೇ ಶಾಸಕ ಯತ್ನಾಳ್ ವಿರುದ್ದ ಅಸಮಾಧಾನ ಹೊರ ಹಾಕಿದ ಎಂಪಿ ರೇಣುಕಾಚಾರ್ಯ, ಯತ್ನಾಳ್ ಅವರೇ, ನೀವು ಬಬಲೇಶ್ವರ ಕ್ಷೇತ್ರದವರು ಆದರೆ ನೀವು ಯಾಕೆ ಅಲ್ಲಿ ಸ್ಪರ್ಧೆ ಮಾಡುತ್ತಿಲ್ಲ? ಯಾಕಂದರೆ ಅಲ್ಲಿ ನೀವು ಕಾಂಗ್ರೆಸ್ ಜೊತೆ ಮ್ಯಾಚ್ ಫಿಕ್ಸಿಂಗ್ ಮಾಡ್ಕೊಂಡಿದ್ದೀರಿ. ಅಪ್ಪು ಪಟ್ಟಣ್ ಶೆಟ್ಟಿಗೆ ಟಿಕೆಟ್ ಕೊಟ್ಟಿದ್ರೆ ನೀನು ಎಂಎಲ್‌ಎ ಆಗ್ತಿರಲಿಲ್ಲ ಎಂದು ಹೇಳುವ ಮೂಲಕ ಬಬಲೇಶ್ವರ ಕ್ಷೇತ್ರದಿಂದ ಆಯ್ಕೆಯಾಗುವ ಸಚಿವ ಎಂಬಿ ಪಾಟೀಲ್ ಹಾಗೂ ಯತ್ನಳ್ ನಡುವೆ ಒಳ ಒಪ್ಪಂದವಿದೆ ಎಂಬ ಗಂಭೀರ ಆರೋಪ ಮಾಡಿದರು. ಯತ್ನಾಳ್ ನೀವು ಬಸ್ ಡ್ರೈವರ್ ಆಗಿದ್ರಿ ನೀವು ಸಕ್ಕರೆ ಖಾರ್ಕಾನೆ ಹೇಗೆ ಮಾಡಿದ್ರಿ. ಈ ಹಿಂದೆ ಸಸ್ಪೆಂಡ್ ಆಗಿ ಯಡಿಯೂರಪ್ಪ ನವರ ಕಾಲು ಹಿಡಿದವರು? ಮಿಸ್ಟರ್ ಯತ್ನಾಳ್ ಇದು ಸರಿಯಲ್ಲ. ನಾಲಿಗೆ ಬಿಗಿ ಹಿಡಿದು ಮಾತಾಡು ಎಂದು ಹರಿಹಾಯ್ದರು.

# ರಾಹುಲ್ ಕಾರು: ಗೂಡ್ಸ್ ಆಟೋ ನಡುವೆ ಸಣ್ಣ ಡಿಕ್ಕಿ

ಬೆಂಗಳೂರು: ನಗರದ ಕನ್ನಿಂಗ್‌ಹ್ಯಾಮ್ ರಸ್ತೆಯಲ್ಲಿ ಮಂಗಳವಾರ ಸಂಜೆ ಮಾಜಿ ಕ್ರಿಕೆಟಿಗ ರಾಹುಲ್ ದ್ರಾವಿಡ್ ಅವರ ಕಾರು ಹಾಗೂ ಗೂಡ್ಸ್ ಆಟೋ ನಡುವೆ ಸಣ್ಣ ಪ್ರಮಾಣದ ಡಿಕ್ಕಿ ಸಂಭವಿಸಿದ್ದು, ಈ ಘಟನೆ ಸಂಬಂಧ ದ್ರಾವಿಡ್ ಮತ್ತು ಆಟೋ ಚಾಲಕನ ನಡುವೆ ಸಣ್ಣದೊಂದು ವಾಗ್ವಾದ ನಡೆದಿದೆ.

ಕನ್ನಿಂಗ್‌ಹ್ಯಾಮ್ ರಸ್ತೆ ಮಾರ್ಗವಾಗಿ ಹೋಗುತ್ತಿದ್ದ ದ್ರಾವಿಡ್ ಕಾರು ಟ್ರಾಫಿಕ್ ಜಾಮ್‌ನಲ್ಲಿ ಸಿಲುಕಿತ್ತು. ಆಗ ಅದೇ ರಸ್ತೆಯಲ್ಲಿ ಹೋಗುತ್ತಿದ್ದ ಸರಕು ಸಾಗಣೆ ಆಟೋ ಚಾಲಕನು ದ್ರಾವಿಡ್ ಕಾರಿಗೆ ಗೂಡ್ಸ್ ವಾಹನ ಟಚ್ ಆಗಿದೆ. ಇದರಿಂದ ಕೋಪಗೊಂಡ ದ್ರಾವಿಡ್ ಅವರು ಕಾರಿನಿಂದ ಕೆಳಗಿಳಿದು, ಕಾರು ಪರಿಶೀಲನೆ ಮಾಡಿದರು. ವಾಹನ ತುಸು ಡ್ಯಾಮೇಜ್ ಆಗಿರುವುದನ್ನು ಕಂಡು ಚಾಲಕನೊಂದಿಗೆ ಸಣ್ಣದಾಗಿ ಮಾತಿನ ಚಕಮಕಿ ನಡೆಸಿದ್ದಾರೆ.

ಘಟನೆ ಬಳಿಕ ದ್ರಾವಿಡ್ ಅವರು ಕಾರು ಚಾಲಕನ ಮೊಬೈಲ್ ಸಂಖ್ಯೆ ಪಡೆದು ಸ್ಥಳದಿಂದ ನಿರ್ಗಮಿಸಿದ್ದಾರೆ. ಘಟನೆ ಸಂಬಂಧ ಯಾವುದೇ ದೂರು ದಾಖಲಾಗಿಲ್ಲ ಎಂದು ಹೈಗ್ರೌಂಡ್ಸ್ ಸಂಚಾರ ಠಾಣೆ ಪೊಲೀಸರು ತಿಳಿಸಿದ್ದಾರೆ.

# ಎಲೆಕ್ಟ್ರಿಕ್ ವಾಹನಗಳಿಗೆ ಮಾತ್ರ ಅನುಮತಿ ಸೂಕ್ತ: ದಿನೇಶ್ ಗುಂಡೂರಾವ್

**ಬೆಂಗಳೂರು:** ನಗರದಲ್ಲಿ ಹೆಚ್ಚುತ್ತಿರುವ ವಾಯು ಮಾಲಿನ್ಯ ನಿಯಂತ್ರಿಸಲು ಸಾರ್ವಜನಿಕ ಸಾರಿಗೆ ಬಳಕೆ ಪ್ರೋತ್ಸಾಹಿಸುವುದರ ಜೊತೆಗೆ ಭವಿಷ್ಯದಲ್ಲಿ ವಿದ್ಯುತ್ ಚಾಲಿತ ವಾಹನಗಳಿಗೆ (ಇವಿ) ಮಾತ್ರ ಅನುಮತಿ ನೀಡುವುದು ಸೂಕ್ತ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಪತ್ರ ಬರೆದಿರುವ ಸಚಿವ ದಿನೇಶ್ ಗುಂಡೂರಾವ್, ಸಾಂಪ್ರದಾಯಿಕ ಇಂಧನ ಬಳಸುವ ವಾಹನಗಳಿಂದ ವಾಯು ಮಾಲಿನ್ಯ ಹೆಚ್ಚುತ್ತಿದೆ. ಇದು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಹೇಳಿದ್ದಾರೆ.

ಬೆಂಗಳೂರಿನಂತಹ ಮಹಾನಗರಗಳಲ್ಲಿ ಅಧಿಕ ಸಂಖ್ಯೆಯಲ್ಲಿ ವಾಹನಗಳಿರುವುದರಿಂದ ಮಾಲಿನ್ಯದ ಪ್ರಮಾಣವು ಅಗಾಧವಾಗಿದೆ. ನಗರದ ಜನ ಸಾಂದ್ರತೆಯೂ ಹೆಚ್ಚಾಗಿರುವ ಕಾರಣ ಮಾಲಿನ್ಯ ಹೆಚ್ಚು ಜನರನ್ನು ಬಾಧಿಸುತ್ತಿದೆ. ವಾಯು ಮಾಲಿನ್ಯದಿಂದ ನವದೆಹಲಿಯಂತೆ ಬೆಂಗಳೂರು ನಗರ ಸಹ ಕುಖ್ಯಾತಗೊಳ್ಳುವ ಪೂರ್ವದಲ್ಲಿಯೇ ನಾವು ಎಚ್ಚೆತ್ತುಕೊಳ್ಳಬೇಕು ಎಂದಿದ್ದಾರೆ.

ಪರಿಸರದ ಮೇಲೆ ಬೀರುತ್ತಿರುವ ದುಷ್ಪರಿಣಾಮಗಳನ್ನು ಮಿತಿಗೊಳಿಸುವ ನಿಟ್ಟಿನಲ್ಲಿ, ವಾಯು ಮಾಲಿನ್ಯವನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕಿದೆ. ಸರ್ಕಾರವು ಈ ಬಗ್ಗೆ ಉತ್ತರದಾಯಿತ್ವ ಹೊಂದಿದೆ. ಆದ್ದರಿಂದ ಸಾರ್ವಜನಿಕ ಸಾರಿಗೆ ಬಳಕೆ ಹೆಚ್ಚಿಸುವುದು ಅತ್ಯಗತ್ಯವಾಗಿದೆ. ಇದರ ಜೊತೆಯಲ್ಲೇ ನಗರದಲ್ಲಿ ವಿದ್ಯುತ್ ಚಾಲಿತ ವಾಹನಗಳ ಸಂಖ್ಯೆಯನ್ನು ಹೆಚ್ಚಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ.

ನಗರದಲ್ಲಿ ಭವಿಷ್ಯದ ದಿನಗಳಲ್ಲಿ ವಿದ್ಯುತ್ ಚಾಲಿತ ಆಟೊ ರಿಕ್ಷಾಗಳು, ಕ್ಯಾಬ್‌ಗಳು, ಸರಕು ಆಟೋಗಳು ಹಾಗೂ ಘನತ್ಯಾಜ್ಯ ಸಂಗ್ರಹಣೆ ವಾಹನಗಳಿಗೆ ಮಾತ್ರ ಅನುಮತಿ ನೀಡುವುದು ಸೂಕ್ತ. ಇದಕ್ಕೆ ಪೂರಕವಾಗಿ ಇನ್ನು ಮುಂದೆ ನಗರ ಸಾರಿಗೆ ಬಸ್‌ಗಳನ್ನು ಖರೀದಿಸುವಾಗ ಸಹ ಎಲೆಕ್ಟ್ರಿಕ್ ಬಸ್‌ಗಳನ್ನು ಮಾತ್ರ ಸಾರಿಗೆ ಸೇವೆಗೆ ಬಳಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಸೂಕ್ತ ತೀರ್ಮಾನ ಕೈಗೊಳ್ಳಬೇಕು ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

# ಬಳ್ಳಾರಿಯಲ್ಲಿ ಸಿಜೇರಿಯನ್ ಹೆರಿಗೆಯಾಗಿದ್ದ ಮತ್ತೋರ್ವ ಬಾಣಂತಿ ಸಾವು

ಬಳ್ಳಾರಿ: ರಾಜ್ಯದಲ್ಲಿ ಬಾಣಂತಿಯರ ಸಾವು ಪ್ರಕರಣಗಳು ಮುಂದುವರೆದಿವೆ. ಬಳ್ಳಾರಿ ನಗರದ ವೈದ್ಯಕೀಯ ಕಾಲೇಜು ಮತ್ತು ವಿಜ್ಞಾನ ಕೇಂದ್ರ (ಬಿಮ್ಸ್) ದಲ್ಲಿ ಮಂಗಳವಾರ ಸಂಜೆ ಸಿರುಗುಪ್ಪ ತಾಲೂಕಿನ ತೆಕ್ಕಲಕೋಟೆ ಪಟ್ಟಣದ ಬಾಣಂತಿಯೊಬ್ಬರು ಮೃತಪಟ್ಟಿದ್ದಾರೆ.

ರೇಷ್ಮಾಬಿ ಗೌಸ್‌ಫೀರ್ (25) ಎಂಬುವರಿಗೆ ಜನವರಿ 4ರಂದು ಸಿಜೇರಿಯನ್ ಹೆರಿಗೆ ಮಾಡಲಾಗಿತ್ತು. ನಾಲ್ಕು ದಿನಗಳ ಬಳಿಕ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದರು. ಬಳಿಕ ಅವರಿಗೆ ಉಸಿರಾಟದ ಸಮಸ್ಯೆ ಕಾಣಿಸಿಕೊಂಡಿದ್ದು, ಜ.14ರಂದು ಮತ್ತೆ ವಿಮ್ಸ್‌ಗೆ ದಾಖಲಿಸಿ ಕೃತಕ ಉಸಿರಾಟದಲ್ಲಿಟ್ಟು ಚಿಕಿತ್ಸೆ ಕೊಡಲಾಗಿತ್ತಾದರೂ, ಮಂಗಳವಾರ ಕೊನೆಯುಸಿರೆಳೆದಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಬಿಮ್ಸ್ ನಿರ್ದೇಶಕ ಡಾ. ಗಂಗಾಧರ ಗೌಡ, "ರೇಷ್ಮಾ ಅವರಿಗೆ ಶ್ವಾಸಕೋಶದಲ್ಲಿ ತೊಂದರೆ ಕಾಣಿಸಿಕೊಂಡಿತ್ತು. ಸಿಸೇರಿಯನ್‌ಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ. ನಾವೂ ಎಲ್ಲ ರೀತಿಯ ಚಿಕಿತ್ಸೆಗಳನ್ನು ನೀಡಿದ್ದೆವು" ಎಂದು ಹೇಳಿದ್ದಾರೆ. ಇನ್ನೊಂದೆಡೆ, "ವೈದ್ಯರು ಸರಿಯಾಗಿ ಚಿಕಿತ್ಸೆ ಕೊಟ್ಟಿಲ್ಲ. ವೈದ್ಯರ ನಿರ್ಲಕ್ಷ್ಯದಿಂದಲೇ ರೇಷ್ಮಾ ಸಾವಾಗಿದೆ' ಎಂದು ಮೃತಳ ಪತಿ ಹಾಗೂ ಕುಟುಂಬಸ್ಥರು ಆರೋಪಿಸಿದ್ದಾರೆ. ಮೊನ್ನೆ ಭಾನುವಾರವಷ್ಟೇ ಬಾಣಂತಿ ಮಹಾದೇವಿ ಎಂಬವರು ಬಿಮ್ಸ್ ನಲ್ಲಿ ಮೃತಪಟ್ಟಿದ್ದರು. ಮಹಾದೇವಿ ಕುಟುಂಬಸ್ಥರೂ ಸಹ ವೈದ್ಯರ ನಿರ್ಲಕ್ಷ್ಯದ ಆರೋಪ ಮಾಡಿದ್ದರು.

# ಮೈಕ್ರೋ ಫೈನಾನ್ಸ್ ಕಿರುಕುಳ ತಪ್ಪಿಸಲು ನಿಯಮ ಪಾಲನೆಗೆ ಸಿಎಸ್ ಸೂಚನೆ: ಇಲ್ಲಿದೆ ಸಹಾಯವಾಣಿ

**ಬೆಂಗಳೂರು:** ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದಬ್ಬಾಳಿಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ, ಜೊತೆಗೆ ಕಿರುಕುಳ ತಪ್ಪಿಸಲು ಇರುವ ನಿಯಮಗಳ ಪಾಲನೆಗೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೂಚನೆ ನೀಡಿದ್ದಾರೆ.

ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರು ತಮ್ಮ ಅವಶ್ಯಕತೆಗಳಿಗಾಗಿ ಸಣ್ಣ ಫೈನಾನ್ಸ್ ಕಂಪನಿಗಳಲ್ಲಿ ಸಾಲ ಪಡೆದು, ಮರುಪಾವತಿಸುವಲ್ಲಿ ವಿಳಂಬ ಮಾಡಿದ ಸಾಲಗಾರರ ಮೇಲೆ ಅನಧಿಕೃತ ಲೇವಾದೇವಿದಾರರು, ಹಣಕಾಸು ಸಂಸ್ಥೆಗಳಿಂದ ಆಗುತ್ತಿರುವ ದಬ್ಬಾಳಿಕೆ, ದೌರ್ಜನ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ದೌರ್ಜನ್ಯ ತಡೆಗೆ ಹಲವು ಕ್ರಮಗಳನ್ನು ತೆಗೆದುಕೊಂಡಿದೆ.

ತುರ್ತು ವೈದ್ಯಕೀಯ ಚಿಕಿತ್ಸೆ, ಮಕ್ಕಳ ವಿದ್ಯಾಭ್ಯಾಸ, ಮದುವೆ ಇನ್ನಿತರ ಖರ್ಚಿಗಾಗಿ ತುರ್ತಾಗಿ ಕೈ ಸಾಲ ಪಡೆಯುವ ಪದ್ಧತಿ ರೂಢಿಯಲ್ಲಿದೆ. ಬಹುತೇಕರು ಪಡೆದ ಸಾಲವನ್ನು ವಾಪಸ್ ನೀಡುತ್ತಾರೆ. ಆದರೆ, ಕೆಲವು ವ್ಯಕ್ತಿಗಳು ಸಾಮಾಜಿಕ, ವೈಯಕ್ತಿಕ ಅಥವಾ ಉತ್ಪಾದಕವಲ್ಲದ ಕಾರ್ಯಗಳಿಗಾಗಿ ಹಣ ಖರ್ಚು ಮಾಡುವುದರಿಂದ, ಮರುಪಾವತಿ ಕ್ಷಮತೆ ಕಡಿಮೆ ಇರುತ್ತದೆ. ಇಂತಹ ಸಂದರ್ಭಗಳಲ್ಲಿ ಸಾಲ ನೀಡಿದವರು ಮರು ವಸೂಲಿಗಾಗಿ ಒತ್ತಾಯಿಸುತ್ತಾರೆ. ಕೆಲವೆಡೆ ಇದು ಕಿರುಕುಳವಾಗಿ ಬೆಳೆಯುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಸಿಎಸ್ ತಿಳಿಸಿದ್ದಾರೆ.

ಜನವರಿ 25ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಮಹತ್ವದ ಸಭೆ ನಡೆಸಿತ್ತು. ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕರ್ನಾಟಕ ವಲಯದ ಅಧ್ಯಕ್ಷರು, ಭಾರತೀಯ ರಿಸರ್ವ್ ಬ್ಯಾಂಕ್ (ಖಃಖ) ನ ಪ್ರಾಂತೀಯ ನಿರ್ದೇಶಕರು ಹಾಗೂ ಸಾ–ಧನ್ (ಖಂ–ಆಊಂಓ), ಎಕೆಎಂಐ, ಎಂಎ□□□ಎನ್ ಮತ್ತು ಪ್ರಮುಖ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು, ರಾಜ್ಯಮಟ್ಟದ ಬ್ಯಾಂಕರ್‌ಗಳ ಸಮಿತಿ ಸಂಚಾಲಕರು, ಅಧಿಕಾರಿಗಳು, ಪೊಲೀಸ್, ಕಂದಾಯ, ಸಹಕಾರ ಹಾಗೂ ಆರ್ಥಿಕ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆ ನಡೆಸಿ, ಕಿರುಕುಳ ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ್ದಾರೆ ಎಂದಿದ್ದಾರೆ.

ಕರ್ನಾಟಕದ ಅಧಿನಿಯಮಗಳು: ಕರ್ನಾಟಕ ಲೇವಾದೇವಿದಾರರ ಅಧಿನಿಯಮ–1961 ಅಡಿಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ. ಈ ಅಧಿನಿಯಮದಡಿಯಲ್ಲಿ 2024ರ ಡಿಸೆಂಬರ್ 31ರವರೆಗೆ 20,425 ಸಂಸ್ಥೆಗಳು ನೋಂದಣಿಯಾಗಿವೆ. ಅದರಲ್ಲಿ 6,590 ಲೇವಾದೇವಿದಾರರು, 6,772 ಪಾನ್ ಬ್ರೋಕರ್‌ಗಳು, 7,063 ಹಣಕಾಸಿನ ಸಂಸ್ಥೆಗಳು (ಈಟಿಚಿಟಿಛಿಜ ಅಂಡಿಠಿಂಡಿಚಿಣಎಂಟಿ) ಇವೆ ಎಂದು ಸಿಎಸ್ ಮಾಹಿತಿ ನೀಡಿದ್ದಾರೆ.

ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಕಾಯಿದೆ–2004 ಪ್ರಕಾರ ಭದ್ರತಾ ಸಾಲಗಳಿಗೆ ವರ್ಷಕ್ಕೆ ಶೇ.14 ಹಾಗೂ ಭದ್ರತೆ ಇಲ್ಲದ ಸಾಲಗಳಿಗೆ ವರ್ಷಕ್ಕೆ ಗರಿಷ್ಠ ಶೇ.16 ಗರಿಷ್ಠ ಬಡ್ಡಿ ದರವನ್ನು ಲೇವಾದೇವಿದಾರರಿಗೆ ನಿಗದಿಪಡಿಸಲಾಗಿದೆ. ಇಂತಹ ಮಾಹಿತಿಗಳನ್ನು ಸಾರ್ವಜನಿಕವಾಗಿ ಫಲಕಗಳ ಮೂಲಕ ಪ್ರದರ್ಶಿಸಲು ಸಂಸ್ಥೆಗಳು ಹಾಗೂ ಸಂಬಂಧಿಸಿದ ಕಚೇರಿಗಳಿಗೆ ತಿಳಿಸಲಾಗಿದೆ.

ಸಾಲಗಾರರು ಇವುಗಳನ್ನು ಸೂಕ್ಷ್ಮವಾಗಿ ಗಮನಿಸಿ ಸಾಲ ಪಡೆಯುವ ಮುನ್ನ ಲೇವಾದೇವಿ ಸಂಸ್ಥೆಗಳ ಅಧಿಕೃತ ನೋಂದಣಿ ಪತ್ರ, ಬಡ್ಡಿದರ, ವಸೂಲಿ ಪ್ರಕ್ರಿಯೆ ಇತ್ಯಾದಿಗಳ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಈ ಪ್ರಕ್ರಿಯೆಗಳಿಂದ ಸಾಲ ಮರುಪಾವತಿ ಸಂದರ್ಭದಲ್ಲಿನ ಕಿರುಕುಳ ತಪ್ಪಿಸಲು ಸಾಧ್ಯವಾಗುತ್ತದೆ ಎಂದಿದ್ದಾರೆ.

ಸೂಕ್ಷ್ಮ ಹಣಕಾಸು ಸಂಸ್ಥೆಗಳು ಎಂದರೇನು?: 3 ಲಕ್ಷ ರೂ.ವರೆಗೂ ಆದಾಯ ಇರುವ ಸಾರ್ವಜನಿಕರಿಗೆ ಸಾಲವನ್ನು ಒದಗಿಸುವ ವ್ಯವಸ್ಥೆಯನ್ನು ಮೈಕ್ರೋ ಫೈನಾನ್ಸ್ ಎಂದು ಘೋಷಿಸಲಾಗಿದೆ. ಬ್ಯಾಂಕ್‌ಗಳಲ್ಲದ ಸಹಕಾರ ಸಂಘಗಳು, ಎನ್‌ಬಿಎಫ್‌ಸಿಗಳು, ಸರ್ಕಾರೇತರ ಸಂಸ್ಥೆಗಳು, ಟ್ರಸ್ಟ್‌ಗಳು, ಸಣ್ಣ ಅಂಗಡಿ ಮಾಲೀಕರು, ಇನ್ನಿತರರು ಸಾಲ ನೀಡುತ್ತಾರೆ. ಸಹಕಾರಿ ಸಂಸ್ಥೆಗಳ ಮೇಲ್ವಿಚಾರಣೆಯನ್ನು ಸಹಕಾರ ಇಲಾಖೆ ಹಾಗೂ ಬ್ಯಾಂಕ್ ಅಲ್ಲದ ಆರ್ಥಿಕ ಸಂಸ್ಥೆಗಳ (ಎನ್‌ಬಿಎಫ್‌ಸಿ) ಮೇಲ್ವಿಚಾರಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಮೂಲಕ ನೋಂದಣಿ ಮತ್ತು ಮೇಲ್ವಿಚಾರಣೆ ಮಾಡಲಾಗುತ್ತಿದೆ.

ಸಾ–ಧನ್ (ಖಂ–ಆುಚಿಟಿ) ಮತ್ತು ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್‌ವರ್ಕ್ (ಒಈಖಓ) ಸಂಸ್ಥೆಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್ (ಖಃಖ) ಸ್ವಯಂ ನಿಯಂತ್ರಣಾ ಸಂಸ್ಥೆಗಳನ್ನಾಗಿ (ಜಟಜಿ–ಡಿಜರಣಟಚಿಣಂಡಿಥಿ ಔಡಿಂಚಿಟಿizಚಿಣಎಂಟಿ) ನೇಮಿಸಿದೆ. ನಿಗದಿತ ಉತ್ತಮ ಲೇವಾದೇವಿ ಪದ್ಧತಿಗಳನ್ನು ಅನುಷ್ಠಾನಗೊಳಿಸಲು ಈ ಸಂಸ್ಥೆಗಳನ್ನು ರಚಿಸಲಾಗಿದೆ ಎಂದು ವಿವರಿಸಿದ್ದಾರೆ.

## ಮೊದಲ ಪುಟದಿಂದ

**ಅಮೃತ್‌ಸರ:** ಅಕ್ರಮ ವಲಸಿಗರ ವಿರುದ್ಧ ಅಮೆರಿಕದ ನೂತನ ಅಧ್ಯಕ್ಷ ಡೋನಾಲ್ ಟ್ರಂಪ್ ಕಠಿಣ ಕ್ರಮ ತೆಗದುಕೊಳ್ಳುತ್ತಿದ್ದಾರೆ. ಈ ಹಿನ್ನೆಲೆ ಅಕ್ರಮ ವಲಸಿಗರನ್ನು ಅಮೆರಿಕದಿಂದ ಗಡಿಪಾರು ಮಾಡುತ್ತಿದ್ದಾರೆ. ಅದರಂತೆ ಅಕ್ರಮವಾಗಿ ಅಮೆರಿಕ ಪ್ರವೇಶಿಸಿದ್ದ 205 ಜನರು ಭಾರತಕ್ಕೆ ಮರಳುತ್ತಿದ್ದಾರೆ. ಇವರನ್ನು ಹೊತ್ತ ಅಮೆರಿಕದ ಮಿಲಿಟರಿ ವಿಮಾನ ಸಿ– 17 ಅಮೃತ್‌ಸರ್ ವಿಮಾನ ನಿಲ್ದಾಣದಲ್ಲಿ ಬಂದಿಳಿಯಲಿದೆ.

ಮಂಗಳವಾರ ಮಧ್ಯಾಹ್ನ ಸ್ಯಾನ್ ಆಂಟೋನಿಯೊದಿಂದ ಹೊರಟಿರುವ ವಿಮಾನ ಇಂದು ಅಮೃತಸರದ ಶ್ರೀ ಗುರು ರಾಮದಾಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯಲಿದೆ. ಅಮೆರಿಕದಿಂದ ವಿಮಾನ ಹೊರಡುತ್ತಿದ್ದ ಸುದ್ದಿ ತಿಳಿಯುತ್ತಿದ್ದಂತೆ ಅಮೃತ್‌ಸರದಲ್ಲಿ ಜನಸಂದಣಿ ಹೆಚ್ಚಾಗಿದೆ. ಈ ಮೊದಲು ಇಂದು ಬೆಳಗ್ಗೆ 9ಕ್ಕೆ ವಿಮಾನ ಬಂದಿಳಿಯಲಿದೆ ಎನ್ನಲಾಗಿತ್ತು. ಇದೀಗ ವಿಮಾನ ಮಧ್ಯಾಹ್ನ 1ಕ್ಕೆ ಲ್ಯಾಂಡ್ ಆಗಲಿದೆ ಎಂದು ತಿಳಿಸಲಾಗಿದೆ.

ಅಮೆರಿಕದಿಂದ ಭಾರತೀಯರನ್ನು ಹೊತ್ತ ವಿಮಾನ ಹೊರಡುತ್ತಿದ್ದ ಸುದ್ದಿ ತಿಳಿಯುತ್ತಿದ್ದಂತೆ ಅವರ ಸಂಬಂಧಿಕರು ವಿಮಾನ ನಿಲ್ದಾಣದತ್ತ ಮುಖ ಮಾಡಿದ್ದಾರೆ. ವಿಮಾನದಲ್ಲಿ 11 ಮಂದಿ ಸಿಬ್ಬಂದಿ ಹಾಗೂ 45 ಅಮೆರಿಕನ್ ಅಧಿಕಾರಿಗಳು ಇದ್ದಾರೆ. ಇವರು 205 ಭಾರತೀಯರನ್ನು ಅಮೃತ್‌ಸರ ವಿಮಾನ ನಿಲ್ದಾಣದಲ್ಲಿ ಇಳಿಸಿದ ಬಳಿಕ ವಾಪಸ್ ಆಗಲಿದೆ. ಈ 205 ಮಂದಿಯಲ್ಲಿ ಪಂಜಾಬ್ ಹೊರತಾದ ಇತರ ರಾಜ್ಯದ ಭಾರತೀಯರು ಇದ್ದಾರೆ. ಇವರ ಆಗಮನ ಹಿನ್ನಲೆ ವಿಮಾನ ನಿಲ್ದಾಣದಲ್ಲಿ ಭಾರತೀಯ ಭದ್ರತಾ ಏಜೆನ್ಸಿಗಳನ್ನು ಕೂಡ ಸೇವೆಗೆ ನಿಯೋಜಿಸಲಾಗಿದೆ.

### ಅಮೃತಸರಕ್ಕೆ ಮರಳಲಿರುವ 205 ಮಂದಿ

ಲಭ್ಯವಾದ ಮೂಲಗಳ ಪ್ರಕಾರ, ಅಮೆರಿಕದಿಂದ ಅಮೃತ್‌ಸರ್‌ಗೆ ಬರುತ್ತಿರುವ ಎಲ್ಲ ಜನರ ದಾಖಲೆಗಳ ಪರಿಶೀಲನೆ ನಡೆಸಲಾಗುವುದು. ಇಮಿಗ್ರೇಷನ್‌ಹೊರತಾಗಿ ಅವರ ಸಂಪೂರ್ಣ ಹಿನ್ನೆಲೆ ಅದರಲ್ಲೂ ವಿಶೇಷವಾಗಿ ಕ್ರಿಮಿನಲ್ ರೆಕಾರ್ಡ್‌ಪರೀಕ್ಷೆ ನಡೆಸಲಾಗುವುದು. ಯಾರಾದರೂ ಕ್ರಿಮಿನಲ್ ಹಿನ್ನೆಲೆ ಹೊಂದಿದ್ದರೆ, ಅವರನ್ನು ವಿಮಾನ ನಿಲ್ದಾಣದಲ್ಲೇ ಬಂಧಿಸಲಾಗುವುದು. ಮಾಹಿತಿ ಪ್ರಕಾರ, ಅಮೆರಿಕದಿಂದ ಗಡಿಪಾರಾಗಿರುವ ಭಾರತೀಯರಲ್ಲಿ ಭಾರತದಲ್ಲಿ ಅಪರಾಧ ಕೃತ್ಯ ಎಸಗಿ ಅಮೆರಿಕಕ್ಕೆ ಹೋಗಿರುವವರು ಇರಬಹುದು ಎನ್ನಲಾಗಿದೆ.

ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಚುನಾವಣಾ ಪ್ರಚಾರದ ಭಾಷಣದಲ್ಲಿ ಅಕ್ರಮ ವಲಸಿಗರ ವಿರುದ್ದ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರು. ಟ್ರಂಪ್ ಆಡಳಿತ ಇಂತಹ ಅಕ್ರಮ ವಲಸಿಗರು, ದಾಖಲೆ ರಹಿತರ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾಗಿದೆ. ಇದರ ಅನುಸಾರವಾಗಿ ಇದೀಗ 205 ಭಾರತೀಯ ನಾಗರಿಕರನ್ನು ಗಡಿಪಾರು ಮಾಡಲಾಗಿದೆ. ಇವರೆಲ್ಲಾ ಟೆಕ್ಸಾಸ್‌ನಿಂದ ಅಮೃತ್‌ಸರ್‌ಗೆ ಮರಳುತ್ತಿದ್ದಾರೆ.

ಅಮೆರಿಕದಲ್ಲಿ 1.5 ಮಿಲಿಯನ್ ಜನರನ್ನು ಗಡಿಪಾರು ಮಾಡಲು ಈಗಾಗಲೇ ಗುರುತಿಸಲಾಗಿದೆ. ಇದರಲ್ಲಿ 18,000 ಮಂದಿ ಭಾರತೀಯರಿದ್ದಾರೆ ಎಂದು ತಿಳಿದು ಬಂದಿದೆ. ಪಟ್ಟಿ ಸಿದ್ಧತೆ ಮಾಡಲಾಗಿದ್ದು, ಈ ನಿಟ್ಟಿನಲ್ಲಿ ಸಿ–17 ಮಿಲಿಟರಿ ವಿಮಾನದಲ್ಲಿ 205 ಮಂದಿ ಭಾರತೀಯರನ್ನು ಗಡಿಪಾರು ಮಾಡಲಾಗಿದೆ. ಈ ಎಲ್ಲರನ್ನು ಭಾರತ ಸರ್ಕಾರದಿಂದ ಪರಿಶೀಲನೆ ನಡೆಯಲಿದೆ . ಅಮೆರಿಕದಲ್ಲಿ ದೊಡ್ಡ ಪ್ರಮಾಣದಲ್ಲಿ ಭಾರತೀಯರಿದ್ದು, ಟ್ರಂಪ್ ಗಡಿಪಾರು ಆದೇಶ ಅವರ ಮೇಲೆ ಹೆಚ್ಚಿನ ಪರಿಣಾಮ ಬೀರಿದೆ.

### ಕೇಜ್ರಿವಾಲ್ ಪೊಲೀಸ್ ದೂರು ದಾಖಲು

**ನವದೆಹಲಿ:** ಯಮುನಾ ನದಿಗೆ ಬಿಜೆಪಿ ವಿಷ ಹಾಕಿದೆ ಎಂಬ ಆರೋಪ ಮಾಡಿದ್ದ ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನ್ಯಾಯಾಲಯದ ನಿರ್ದೇಶನಗಳನ್ನು ಅನುಸರಿಸಿ ಹರಿಯಾಣದ ಕುರುಕ್ಷೇತ್ರದ ಶಹಾಬಾದ್ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತಾ ಅಡಿ ಕೇಜ್ರಿವಾಲ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ತನಿಖೆ ಆರಂಭವಾಗಿದೆ. ಸಾಕ್ಷ್ಯಗಳ ಆಧಾರದ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಶಹಾಬಾದ್ ಸ್ಟೇಷನ್ ಹೌಸ್ ಅಧಿಕಾರಿ ಸತೀಶ್ ಕುಮಾರ್ ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಹರ್ಷ್ ಮಲ್ಹೋತ್ರಾ ಅವರು, ಕೇಜ್ರಿವಾಲ್ ದೆಹಲಿಯಲ್ಲಿನ ನಿಜವಾದ ಸಮಸ್ಯೆಗಳಿಂದ ಗಮನ ಬೇರೆಡೆ ಸೆಳೆಯಲು ಬಿಜೆಪಿ ವಿರುದ್ಧ ವಿನಾಕಾರಣ ಆರೋಪ ಮಾಡುತ್ತಿದ್ದಾರೆ. ಆಪ್ ಕಳೆದ 10 ವರ್ಷಗಳ ಆಡಳಿತದಲ್ಲಿ ಯಾವುದೇ ಅಭಿವೃದ್ಧಿ ಮಾಡಿಲ್ಲ. ಪ್ರಚಾರದ ವೇಳೆ ಅಭಿವೃದ್ಧಿ ಬಗ್ಗೆ ಮಾತನಾಡಲು ಸಾಧ್ಯವಾಗದೇ ಬಿಜೆಪಿ ಮೇಲೆ ದೂರುತ್ತಿದೆ ಎಂದು ಆರೋಪಿಸಿದರು.

ಆಪ್ ತನ್ನ ಅಧಿಕಾರವಧಿಯಲ್ಲಿ ದೆಹಲಿ ಜನರಿಗೆ ಶುದ್ಧ ನೀರು ಒದಗಿಸಲು ಸಾಧ್ಯವಾಗಿಲ್ಲ. 2020 ರಲ್ಲಿ ಅರವಿಂದ್ ಕೇಜ್ರಿವಾಲ್ ಅವರು ಯಮುನಾ ನದಿ ಸ್ವಚ್ಛಗೊಳಿಸದಿದ್ದರೆ, 2025 ರಲ್ಲಿ ಮತ ಹಾಕಬೇಡಿ ಎಂದು ಹೇಳಿದ್ದರು. ನದಿ ನೀರು ಕಲುಷಿತವಾಗಿರುವ ಕಾರಣ, ತಮ್ಮ ವೈಫಲ್ಯವನ್ನು ಮುಚ್ಚಿಕೊಳ್ಳಲು ಹರಿಯಾಣ ಬಿಜೆಪಿ ಸರ್ಕಾರದತ್ತ ಬೊಟ್ಟು ಮಾಡುತ್ತಿದ್ದಾರೆ. ಈ ಹೇಳಿಕೆಗಳ ವಿರುದ್ಧ ಎಫ್‌ಐಆರ್ ದಾಖಲಿಸಿ, ವಿಚಾರಣೆ ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಬಿಜೆಪಿ ಆಡಳಿತದ ಹರಿಯಾಣ ಸರ್ಕಾರವು ಯಮುನಾ ನೀರಿನಲ್ಲಿ ವಿಷ ಹಾಕಿದೆ. ಆ ನೀರನ್ನು ದೆಹಲಿಗೆ ಸರಬರಾಜು ಮಾಡುತ್ತಿದೆ. ಇಲ್ಲಿನ ಜನರ ಸಾಮೂಹಿಕ ನರಮೇಧ ನಡೆಸಲು ಸಂಚು ರೂಪಿಸಲಾಗಿದೆ ಎಂದು ಗಂಭೀರ ಆಪಾದನೆ ಮಾಡಿದ್ದರು. ಇದಕ್ಕೆ ಸಾಕ್ಷ್ಯ ಒದಗಿಸಲು ಚುನಾವಣಾ ಆಯೋಗವು ನೋಟಿಸ್ ನೀಡಿತ್ತು. ಇತ್ತ, ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಅವರು ದೆಹಲಿಯ ನದಿ ತಟಕ್ಕೆ ಆಗಮಿಸಿ ಅಲ್ಲಿನ ನೀರು ಕುಡಿದು ತಿರುಗೇಟು ನೀಡಿದ್ದರು.

ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಆರೋಪದ ಮೇಲೆ ಸಿಎಂ ಅತಿಶಿ ವಿರುದ್ಧವೂ ಕೇಸ್ ದಾಖಲಿಸಲಾಗಿದೆ. ಇದರ ವಿರುದ್ಧ ಆಪ್ ಕಿಡಿಕಾರಿದೆ. ಬಿಜೆಪಿಯ ಗೂಂಡಾಗಿರಿ ವಿರೋಧಿಸಿದವರ ವಿರುದ್ಧ ಕೇಸ್ ದಾಖಲಿಸಲಾಗುತ್ತಿದೆ ಎಂದು ಚುನಾವಣಾ ಆಯೋಗವನ್ನು ದೂಷಿಸಿದೆ.

ಇದಕ್ಕೆ ತಿರುಗೇಟು ನೀಡಿರುವ ಚುನಾವಣಾ ಆಯೋಗ, ತಪ್ಪು ಮಾಡಿದವರ ವಿರುದ್ಧ ಕ್ರಮ ಜರುಗಿಸಲಾಗುವುದು. ಆಯೋಗವನ್ನು ಒಂದು ಪಕ್ಷದ ಸಂಸ್ಥೆಯನ್ನಾಗಿ ಬಿಂಬಿಸುವ ಯತ್ನಗಳು ಸಾಗಿವೆ. ಇದರ ವಿರುದ್ಧ ನಾವು ಚಾಣಾಕ್ಷತನದಿಂದ ಮತ್ತು ಧೈರ್ಯವಾಗಿ ಎದುರಿಸುತ್ತೇವೆ ಎಂದು ಹೇಳಿದೆ.

### ಬೆಂಗಳೂರಿನಲ್ಲಿ 837 ಕೆರೆಗಳ ಪೈಕಿ 730 ಕೆರೆಗಳ ಒತ್ತುವರಿ: ಬಿಡಿಎ ಪತ್ತೆ.

ಪ್ರಕಾರ, ಯಲಹಂಕ ಮತ್ತು ಬೆಂಗಳೂರು ಉತ್ತರ ತಾಲ್ಲೂಕುಗಳಲ್ಲಿ ಹೆಚ್ಚಿನ ಅತಿಕ್ರಮಣಗಳು ನಡೆದಿವೆ.

ಯಲಹಂಕದಲ್ಲಿ 105 ಕೆರೆಗಳ ಪೈಕಿ 1,147 ಎಕರೆ, ಬೆಂಗಳೂರು ಉತ್ತರದಲ್ಲಿ 123 ಕೆರೆಗಳ ಪೈಕಿ 1,183 ಎಕರೆ ಒತ್ತುವರಿಯಾಗಿದೆ. ಬೆಂಗಳೂರು ದಕ್ಷಿಣದಲ್ಲಿ 179 ಕೆರೆಗಳ ಪೈಕಿ 825 ಎಕರೆ ಒತ್ತುವರಿಯಾಗಿದೆ.

ಅದೇ ರೀತಿ ಆನೇಕಲ್ ತಾಲ್ಲೂಕಿನಲ್ಲಿ 223 ಕೆರೆಗಳ ಪೈಕಿ 719 ಎಕರೆ ಒತ್ತುವರಿಯಾಗಿದೆ. ಪೂರ್ವ ತಾಲ್ಲೂಕಿನಲ್ಲಿ 100 ಕೆರೆಗಳ ಪೈಕಿ 667 ಎಕರೆ ಒತ್ತುವರಿಯಾಗಿದೆ.

ಬೆಂಗಳೂರು ನಗರ ಜಿಲ್ಲೆಯಲ್ಲಿ ಒತ್ತುವರಿಯಾಗಿರುವ 700ಕ್ಕೂ ಹೆಚ್ಚು ಕೆರೆಗಳ ಪೈಕಿ 102 ಕೆರೆಗಳು ಪಾಲಿಕೆ ವ್ಯಾಪ್ತಿಯಲ್ಲಿವೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ 187 ಕೆರೆಗಳಿದ್ದು, ಈ ಪೈಕಿ 167 ಕೆರೆಗಳ ಸಮೀಕ್ಷೆ ನಡೆಸಲಾಗಿದೆ. ಕಂದಾಯ ಇಲಾಖೆಯ ಭೂಮಾಪಕರ ವರದಿಯ ಆಧಾರದ ಮೇಲೆ ಅಧಿಕಾರಿಗಳು 102 ಕೆರೆಗಳಲ್ಲಿನ ಅತಿಕ್ರಮಣಗಳನ್ನು ಗುರುತಿಸಿದ್ದಾರೆ.

ಕೇವಲ 29 ಕೆರೆಗಳು ಮಾತ್ರ ಒತ್ತುವರಿಯಿಂದ ಮುಕ್ತವಾಗಿದ್ದು, ಇನ್ನೂ 29 ಕೆರೆಗಳನ್ನು ಸರ್ಕಾರಿ ಸಂಸ್ಥೆಗಳು ಅತಿಕ್ರಮಿಸಿಕೊಂಡಿವೆ. ಈ ಅತಿಕ್ರಮಣವನ್ನು ಗುರುತಿಸಿ ತೆರವಿಗೊಳಿಸಲು ಬಿಬಿಎಂಪಿಗೆ ಕಂದಾಯ ಇಲಾಖೆಯಿಂದ ಉತ್ತಮ ಸಹಕಾರವಿದ್ದರೆ, ಅತಿಕ್ರಮಣಗಳನ್ನು ತೆಗೆದುಹಾಕುವ ಪ್ರಕ್ರಿಯೆ ಸಾಧ್ಯ ಎಂಬುದು ಅಧಿಕಾರಿಗಳ ಅಭಿಪ್ರಾಯ.

### ಮುಡಾ ತೀರ್ಪು ಆತಂಕದಲ್ಲಿ ಸಿಎಂ ಬಜೆಟ್!

ಬಜೆಟ್ ಪೂರ್ವ ಸಭೆಗಳು ಮುಕ್ತಾಯಗೊಳ್ಳಲಿವೆ. ಹಣಕಾಸು ಇಲಾಖೆ ಹೊಣೆ ಹೊತ್ತಿರುವ ಮುಖ್ಯಮಂತ್ರಿ ಅವರು, ಮಾರ್ಚ್ ಎರಡನೇ ವಾರದಲ್ಲಿ ವಿಧಾನಸಭೆಯಲ್ಲಿ ಮುಂಗಡಪತ್ರ ಮಂಡಿಸಲಿದ್ದಾರೆ.

ಈ ಉದ್ದೇಶದಿಂದ ಮಾರ್ಚ್ ಮೊದಲ ವಾರದಲ್ಲಿ ವಿಧಾನಮಂಡಲದ ಜಂಟಿ ಅಧಿವೇಶನ ಕರೆಯಲು ಸರ್ಕಾರ ತೀರ್ಮಾನಿಸಿದೆಯಾದರೂ, ಅಧಿಕೃತ ಘೋಷಣೆ ಆಗಿಲ್ಲ. ಮುಡಾ ಬಿಡಿ ನಿವೇಶನಗಳ ಹಗರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಮತ್ತು ಜಾರಿ ನಿರ್ದೇಶನಾಲಯ (ಇ.ಡಿ.) ಏಕಕಾಲದಲ್ಲಿ ತನಿಖೆ ಕೈಗೊಂಡಿರುವುದು ಮುಖ್ಯಮಂತ್ರಿ ಅವರಿಗೆ ಬಜೆಟ್ ತಯಾರಿ ವೇಳೆಯಲ್ಲೂ ಗೊಂದಲದ ಸ್ಥಿತಿ ಎದುರಿಸುವಂತಾಗಿದೆ.

ಇದರ ನಡುವೆ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಹೈಕೋರ್ಟ್ ಮೆಟ್ಟಿಲೇರಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುಟುಂಬ ಪಡೆದಿರುವ 14 ಬಿಡಿ ನಿವೇಶನಗಳ ಹಗರಣವನ್ನು ಸಿಬಿಐಗೆ ವಹಿಸಬೇಕೆಂದು ಕೋರಿದ್ದಾರೆ. ರಿಟ್ ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ನ್ಯಾಯಾಲಯ ವಾದ–ಪ್ರತಿವಾದ ಆಲಿಸಿ, ತೀರ್ಪು ಕಾಯ್ದಿರಿಸಿದೆ.

ತೀರ್ಪು ಏನಾಗಬಹುದೆಂಬ ಆತಂಕವೂ ಮುಖ್ಯಮಂತ್ರಿ ಅವರ ಮನಸ್ಸಿನಲ್ಲಿ ಮನೆ ಮಾಡಿರುವುದಂತೂ ಸಹಜ.

### ಬೃಹತ್ ಕಾರ್ಯಾಚರಣೆ, ಹಲವರ ವಶ

ಪಡೆದಿದ್ದಾರೆ ಎಂದು ತನಿಖಾಧಿಕಾರಿಗಳು ನಂಬಿರುವುದರಿಂದ, ಸೇನಾಧಿಕಾರಿಗಳು ಮನೆ ಮನೆಗೆ ತೆರಳಿ ಶೋಧ ನಡೆಸುತ್ತಿವೆ,

ಉಗ್ರಗಾಮಿಗಳ ಬದುಕುಳಿಯುವಿಕೆ ಮತ್ತು ಚಲನೆಗೆ ಅಗತ್ಯವಾದ ಒಜಿಡಬ್ಲ್ಯೂಗಳನ್ನು ಗುರುತಿಸುವುದು ಮತ್ತು ಬಂಧಿಸುವುದು ಕಾರ್ಯಾಚರಣೆಯ ಪ್ರಾಥಮಿಕ ಉದ್ದೇಶವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕುಲ್ಗಾವ್‌ನಾದ್ಯಂತ ದಾಳಿ ನಡೆಸಲಾಗಿದ್ದು, ಶಂಕಿತ ಒಜಿಡಬ್ಲ್ಯೂಗಳು ಮತ್ತು ಉಗ್ರಗಾಮಿತ್ವದೊಂದಿಗೆ ಹಿಂದಿನ ಸಂಪರ್ಕ ಹೊಂದಿರುವವರು ಸೇರಿದಂತೆ ಹಲವಾರು ವ್ಯಕ್ತಿಗಳನ್ನು ಬಂಧಿಸಲಾಗಿದೆ. ಕೆಲವರನ್ನು ವಿಚಾರಣೆಯ ನಂತರ ಬಿಡುಗಡೆ ಮಾಡಲಾಗಿದೆ, ಇನ್ನು ಕೆಲವರು ಹೆಚ್ಚಿನ ತನಿಖೆಗಾಗಿ ಬಂಧನದಲ್ಲಿದ್ದಾರೆ.

ಅಧಿಕಾರಿಗಳು ಸಿಸಿಟಿವಿ ದೃಶ್ಯಾವಳಿಗಳನ್ನು ವಿಶ್ಲೇಷಿಸುತ್ತಿದ್ದಾರೆ. ದಾಳಿಯಲ್ಲಿ ಭಾಗಿಯಾಗಿರುವವರ ಚಲನವಲನಗಳನ್ನು ಪತ್ತೆಹಚ್ಚಲು ತಾಂತ್ರಿಕ ಗುಪ್ತಚರವನ್ನು ಬಳಸುತ್ತಿದ್ದಾರೆ.

ಈ ಮಧ್ಯೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರ ಕೌಂಟರ್ ಇಂಟೆಲಿಜೆನ್ಸ್ ಕಾಶ್ಮೀರ (ಅಖಎ) ಘಟಕವು ರಾಷ್ಟ್ರ ವಿರೋಧಿ ಅಂಶಗಳನ್ನು ಒಳಗೊಂಡ ಕ್ರಿಮಿನಲ್ ಪಿತೂರಿಯ ಸಂಬಂಧ ವಿಚಾರಣೆಗಾಗಿ ಐವರನ್ನು ಬಂಧಿಸಿದೆ. ಶಂಕಿತರ ಮೇಲೆ ಶ್ರೀನಗರದ ಕೇಂದ್ರ ಕಾರಾಗೃಹದೊಳಗೆ ಉಗ್ರಗಾಮಿತ್ವ ಮತ್ತು ಮಾದಕವಸ್ತು ಭಯೋತ್ಪಾದನೆಗೆ ಸಂಬಂಧಿಸಿದ ಕೈದಿಗಳ ಬಳಕೆಯ ಸಿಮ್ ಕಾರ್ಡ್‌ಗಳನ್ನು ಸಂಗ್ರಹಿಸಿ, ಸಾಗಿಸಿ ಮತ್ತು ಕಳ್ಳಸಾಗಣೆ ಮಾಡಿದ ಆರೋಪವಿದೆ.

ಸಿಐಕೆ ಅಧಿಕಾರಿಗಳು ಈ ಹಿಂದೆ ಜೈಲಿನ ಆವರಣದೊಳಗೆ ಶೋಧ ನಡೆಸಿದ್ದರು. ಕೆಲವು ಕೈದಿಗಳೊಂದಿಗೆ ಪಾಲುದಾರಿಕೆ ಹೊಂದಿರುವ ಶಂಕಿತರು ವಿವಿಧ ಭಯೋತ್ಪಾದನಾ ಸಂಬಂಧಿತ ಚಟುವಟಿಕೆಗಳಿಗಾಗಿ ಸಿಮ್ ಕಾರ್ಡ್‌ಗಳನ್ನು ಕಳ್ಳಸಾಗಣೆ ಮಾಡಲು ಅನುಕೂಲ ಮಾಡಿಕೊಟ್ಟಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ಸಿಮ್ ಕಾರ್ಡ್‌ಗಳನ್ನು ನೀಡಿದ ವಿವಿಧ ಟೆಲಿಕಾಂ ಸೇವಾ ಪೂರೈಕೆದಾರರಿಂದ ಪಿಒಎಸ್ ಮಾರಾಟಗಾರರ ಪಾತ್ರವನ್ನು ಅಧಿಕಾರಿಗಳು ತನಿಖೆ ಮಾಡುತ್ತಿದ್ದಾರೆ.

### ಸಿಸಿಬಿ ಕಾರ್ಯಾಚರಣೆ

ತನಿಖೆ ಮುಂದುವರೆಸಿದ ಸಿಸಿಬಿ ಯ ಅಧಿಕಾರಿ/ಸಿಬ್ಬಂದಿಗಳು ಗೋಲ್ಡನ್ ಗಳ ಮೇಲೆ ದಾಳಿ ಮಾಡಿ

ಉತ್ಪನ್ನಗಳನ್ನು ಹಾಗೂ ಸಾಗಾಣಿಕೆ ಮಾಡಲು ಉಪಯೋಗಿಸಿದ ಬೊಲೇರೊ ಮ್ಯಾಕ್ಸ್ ಪಿಕ್–ಅಪ್ ವಾಹನ ಮತ್ತು ಯಂತ್ರೋಪಕರಣಗಳನ್ನು ವಶಪಡಿಸಿಕೊಳ್ಳಲಾಗಿದೆ.

ಇದೇ ರೀತಿ ನಕಲಿ ವಸ್ತುಗಳನ್ನು ನಕಲಿಯಾಗಿ ತಯಾರು ಮಾಡಿ ಇತರೆ ಸ್ಥಳಗಳಲ್ಲಿ ದಾಸ್ತಾನು ಮಾಡಿಕೊಂಡಿರುವ ಬಗ್ಗೆ ಮಾಹಿತಿಯಿದ್ದು, ತನಿಖೆ ಮುಂದುವರೆದಿದೆ.

ಮುಸ್ಸಂಜೆ



# ಕಿರುಕುಳ ನೀಡುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ವಿರುದ್ಧ ನಿರ್ದಾಕ್ಷಿಣ್ಯಕ್ರಮ



**ಚಾಮರಾಜನಗರ:** ಜಿಲ್ಲೆಯ ಯುವುದೇಭಾಗದಲ್ಲಿ ಮೈಕ್ರೋಫೈನಾನ್ಸ್ ಕಂಪನಿಗಳು, ಲೇವಾದೇವಿದಾರರು, ಇತರೆವ್ಯಕ್ತಿಗಳು, ಸಂಸ್ಥೆಗಳಿಂದ ಸಾಲಗಾರರಿಗೆ ಕಿರುಕುಳ ನೀಡುವುದು ಕಂಡುಬಂದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್‌ಅವರು ಎಚ್ಚರಿಕೆ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಮೈಕ್ರೋಫೈನಾನ್ಸ್ ಕಂಪನಿಗಳ ಪ್ರತಿನಿಧಿಗಳು, ಆರ್.ಬಿ.ಐ ಪ್ರತಿನಿಧಿ ಹಾಗೂ ಲೀಡ್ ಬ್ಯಾಂಕ್‌ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರುಮಾತನಾಡಿದರು.

ಸಾಲ ನೀಡುವ ಮೈಕ್ರೋ ಫೈನಾನ್ಸ್ ಕಂಪನಿಗಳು ಆರ್.ಬಿ.ಐನಿಯುಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಸಾಲಗಾರರು ಅಥವಾಅವರ ಕುಟುಂಬದ ಸದಸ್ಯರ ಮೇಲೆ ಸಾಲ ವಸೂಲಾತಿಗಾಗಿ ವಿನಾಕಾರಣ ಒತ್ತಡತರುವಂತಿಲ್ಲ. ಸಾಲ ಪಡೆದವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸುವುದು,ಅವಮಾನಿಸುವುದು, ಹಿಂಸೆ ನೀಡುವಂತಿಲ್ಲ. ಸಾಲಗಾರರ ಸ್ವಾಧೀನದಲ್ಲಿರುವವಸ್ತುಗಳು, ಆಸ್ತಿಗಳ ಬಳಕೆಗೆ ಅಡ್ಡಿಪಡಿಸಬಾರದು ಎಂದು ಜಿಲ್ಲಾಧಿಕಾರಿಗಳುಸೂಚನೆ ನೀಡಿದರು.

ಸಾಲ ವಸೂಲಿ ಮಾಡಲು ಯಾವುದೇ ಬಲವಂತದ ಕ್ರಮಗಳನ್ನುಅನುಸರಿಸಬಾರದು. ಸಾಲ ವಸೂಲಿಗಾಗಿ ಹೊರ ವ್ಯಕ್ತಿಗಳು, ಅಪರಾಧ ಹಿನ್ನಲೆಹೊಂದಿರುವವರನ್ನು ಬಳಸಿ ಬೆದರಿಕೆ ಹಾಕಬಾರದು. ಮೈಕ್ರೋ ಫೈನಾನ್ಸ್‌ಕಂಪನಿಗಳು ಮತ್ತು ಲೇವಾದೇವಿದಾರರು ನೀಡುತ್ತಿರುವ ಕಿರುಕುಳದಿಂದ ಸಾಲಗಾರರನ್ನು ರಕ್ಷಿಸಲು ಸರ್ಕಾರದಿಂದ ಹೊರಡಿಸಲಾಗುವ ಹೊಸ ಆಜ್ಞೆಹಾಗೂ ಆದೇಶಗಳನ್ನು ನಿರೀಕ್ಷಿಸಲಾಗಿದೆ. ಇದರಂತೆ ಕಿರುಕುಳ ನೀಡುವಮೈಕ್ರೊ ಫೈನಾನ್ಸ್ ಕಂಪನಿಗಳ ವಿರುದ್ದ ಕ್ರಮವಹಿಸಲಿದ್ದೇವೆ ಎಂದರು.

ಮೈಕ್ರೊ ಫೈನಾನ್ಸ್ ಕಂಪನಿ ಕಿರುಕುಳ ಕುರಿತ ದೂರು ಸಲ್ಲಿಸಲುಸಹಾಯವಾಣಿ ತೆರೆಯಲಾಗಿದೆ. ನೊಂದಣಿ ಪರವಾನಗಿ ಹೊಂದಿರುವವರುಹಾಗೂ ಇಲ್ಲದಿರುವ ಎಲ್ಲ ಮೈಕ್ರೋ ಫೈನಾನ್ಸ್ ಕಂಪನಿಗಳು,ಲೇವಾದೇವಿದಾರರು ಇತರೆ ಸಾಲ ನೀಡುವವರ ಮೇಲೆ ನಿಗಾವಹಿಸಿದ್ದೇವೆ. ಎಲ್ಲಮಾಹಿತಿಯನ್ನು ಕಲೆ ಹಾಕಲಾಗುತ್ತಿದೆ. ಜಿಲ್ಲೆಯ ಎಲ್ಲಿಯೇ ಆಗಲಿ ಸಾಲಗಾರರಿಗೆಅನಾವಶ್ಯಕವಾಗಿ ತೊಂದರೆ ನೀಡುವವರ ವಿರುದ್ದ ಕ್ರಮ ವಹಿಸುತ್ತೇವೆ. ಕಂಪನಿಗಳು ನಿಯಮಾವಳಿ, ಮಾರ್ಗಸೂಚಿ ಉಲ್ಲಂಘನೆ ಮಾಡಬಾರದು ಎಂದುಜಿಲ್ಲಾಧಿಕಾರಿಯವರು ಕಟುನಿಟ್ಟಿನ ಸೂಚನೆ ನೀಡಿದರು.

ಆರ್.ಬಿ.ಐ ನಿಯಮಗಳ ಪ್ರಕಾರ ನೀಡಲಾಗುವ ಸಾಲದ ಮೊತ್ತ, ವಿಧಿಸಿರುವಬಡ್ಡಿದರ, ಮಾಸಿಕ ಕಂತುಗಳು ಸೇರಿದಂತೆ ಎಲ್ಲ ವಿವರಗಳನ್ನು ಸ್ಥಳೀಯಭಾಷೆಯಲ್ಲಿ ಸಾಲ ಪಡೆದವರಿಗೆ ವಿವರಿಸಬೇಕು. ಪಾರದರ್ಶಕವಾಗಿ ಪ್ರಕ್ರಿಯೆಇರಬೇಕು. ಜಿಲ್ಲೆಯಲ್ಲಿ ವ್ಯಾಪಕವಾಗಿ ಜನರಿಗೆ ಅರಿವು ಮೂಡಿಸುವಕಾರ್ಯಕ್ರಮಗಳನ್ನು ಆಯೋಜಿಸಲಿದ್ದೇವೆ.

ಗ್ರಾಮ ಸಭೆಗಳಲ್ಲೂಜಾಗೃತಿ ಶಿಬಿರ ಹಮ್ಮಿಕೊಳ್ಳಲು ಸೂಚನೆ ನೀಡಿದ್ದೇವೆ. ಇಂತಹಕಾರ್ಯಕ್ರಮಗಳಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳಪ್ರತಿನಿಧಿಗಳು ಭಾಗವಹಿಸಿ ಜನರಿಗೆ ವಾಸ್ತವ ಅಂಶಗಳನ್ನು ಮನವರಿಕೆಮಾಡಿಕೊಡಬೇಕೆಂದು ಜಿಲ್ಲಾಧಿಕಾರಿಯವರಾದ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ಮಾತನಾಡಿ ಸಾಲಗಾರರಿಗೆಶೋಷಣೆ ಮಾಡುವಂತಿಲ್ಲ. ಸಾಲ ಕಟ್ಟುವ ಸಾಮರ್ಥ್ಯವಿಲ್ಲದಿದ್ದರೂಲಾಭವನ್ನಷ್ಟೇ ಕೇಂದ್ರಕರಿಸಿ ಸಾಲ ನೀಡಿ ಬಳಿಕ ಬಲವಂತದ ವಸೂಲಿಗೆ ಫೈನಾನ್ಸ್‌ಕಂಪನಿಗಳು ಮುಂದಾಗಬಾರದು. ಸಾಲ ನೀಡುವ ಮುನ್ನ ಸಾಲಗಾರರ ದುಡಿಮೆಆದಾಯವನ್ನು ನೋಡಬೇಕು. ಸಾಲ ಪಡೆದುಕೊಂಡವರಿಗೆ ಕಿರುಕುಳ,ಅವಮಾನ, ನಿಂದನೆ ಮಾಡುವುದನ್ನು ಸಹಿಸುವುದಿಲ್ಲ. ಕಿರುಕುಳಕ್ಕೆಸಂಬಂಧಿಸಿದ ದೂರುಗಳು ಬಂದರೆ ನಿಯಮಾನುಸಾರ ಪ್ರಕರಣ ದಾಖಲು ಮಾಡಿತ್ವರಿತವಾಗಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಆರ್.ಬಿ.ಐ ನ ಲೀಡ್ ಜಿಲ್ಲಾ ಅಧಿಕಾರಿ ವಿಜಯಶ್ರೀ ಅವರು ಮಾತನಾಡಿ ಮೈಕ್ರೊಫೈನಾನ್ಸ್ ಕಂಪನಿಗಳು 3 ಲಕ್ಷಕ್ಕಿಂತ ಕಡಿಮೆ ಆದಾಯ ಇರುವವರಿಗೆ ಸಾಲನೀಡಬೇಕಿದೆ. ಸಾಲ ಮರುಪಾವತಿಸುವ ಸಾಮರ್ಥ್ಯಕ್ಕೆ ಅನುಗುಣವಾಗಿ ಸಾಲವಿತರಿಸಬೇಕು. ನಿಯಮಾವಳಿಗಳ ಪ್ರಕಾರ ಬೆಳಿಗ್ಗೆ 9 ರಿಂದ ಸಂಜೆ 5ಗಂಟೆಯವರೆಗೆ ಮಾತ್ರ ಸಾಲಗಾರರ ಮನೆಯ ಬಳಿ ತೆರಳಬೇಕು. ನಿಗದಿತ ವೇಳೆಯ ನಂತರ ಸಾಲ ವಸೂಲಿ ಮಾಡುವಂತಿಲ್ಲ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್,ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಎಂ.ಎನ್.ಸುರೇಖ, ತಹಶೀಲ್ದಾರರು, ತಾಲೂಕು ಪಂಚಾಯತ್

# ಹೆತ್ತವರಿಗಿಂತ ಮಿಗಿಲಾದ ದೇವರಿಲ್ಲ



**ಶಿಡ್ಲಘಟ್ಟ :** ನಮಗೆ ಜನ್ಮ ನೀಡಿದ ತಂದೆ,ತಾಯಿಗೆ ಮೂರೊತ್ತು ಊಟ ಹಾಕಿ ಬಟ್ಟೆ ಕೊಟ್ಟು ಅವರನ್ನು ಆರೈಕೆ ಮಾಡದೇ, ಸಾಕದೇ, ಯಾವ ದೇವಾಲಯಕ್ಕೆ ಹೋಗಿ ಪೂಜೆ ಮಾಡಿದರು ಏನೂ ಉಪಯೋಗವಾಗದು ಎಂದು ಶ್ರೀಕ್ಷೇತ್ರ ಗೊಲ್ಲಗಿರಿ ಮಹಾ ಸಂಸ್ಥಾನದ ಶ್ರೀಕೃಷ್ಣಯಾದವಾನಂದ ಮಹಾಸ್ವಾಮಿ ತಿಳಿಸಿದರು. ತಾಲ್ಲೂಕಿನ ಚಿಕ್ಕದಾಸೇನಹಳ್ಳಿಯ ಶ್ರೀಲಕ್ಷ್ಮಿ ನರಸಿಂಹಸ್ವಾಮಿ ದೇಗುಲದ ಜೀರ್ಣೋದ್ಧಾರ, ವಿಮಾನಗೋಪುರ ಕುಂಭಾಭಿಷೇಕ, ಮಹಾ ಗಣಪತಿ, ನವ ಗ್ರಹಗಳು ಹಾಗು ನಾಗರ ವಿಗ್ರಹಗಳ ಶಿಲಾಬಿಂಬ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಆಶೀರ್ವಚನ ನೀಡಿ ಅವರು ಮಾತನಾಡಿದರು.

ಹೆತ್ತವರಿಗಿಂತಲೂ ಮಿಗಿಲಾದ ದೇವರಿಲ್ಲ, ಆಡಂಬರದ ಬದುಕು ಬೇಡ. ಎಲ್ಲರೊಂದಿಗೆ ಬೆರೆತು ಸೌಹಾರ್ದತೆಯ ಬದುಕನ್ನು ನಡೆಸಿದರೆ ಮಾತ್ರ ನಮ್ಮೆಲ್ಲರ ಜೀವನದಲ್ಲಿ ಸುಖ ಶಾಂತಿ ನೆಲೆಸುತ್ತದೆ ಈ ಬದುಕು ಸಾರ್ಥಕ ವಾಗುತ್ತದೆ ಎಂದು ಹೇಳಿದರು.

ಭಗವಂತನಿಗೆ ಕೈ ಮುಗಿಯಬೇಕು, ಪೂಜೆ ಸಲ್ಲಿಸಿ ನೈವೇದ್ಯಅರ್ಪಿಸಬೇಕು ಅದಕ್ಕೂ ಮುಖ್ಯವಾಗಿ ಮನೆಯಲ್ಲಿ ತಂದೆ ತಾಯಿಗೆ ಗೌರವ ನೀಡಿ ಅವರನ್ನು ಆರೈಕೆ ಮಾಡಿದರೆ ಮಾತ್ರವೇ ಭಗವಂತನಿಗೆ ಸಲ್ಲಿಸಿದ ಪೂಜೆ ಫಲ ನಮಗೆ ಸಿಗುತ್ತದೆ ಎಂದರು. ಶಾಸಕರಾದ ಬಿ.ಎನ್. ರವಿಕುಮಾರ್ ಮಾತನಾಡಿ, ಗ್ರಾಮಸ್ಥರ ಈ ಸಾಮರಸ್ಯ ಇತರರಿಗೂ ಮಾದರಿಯಾಗಲಿ ತಮ್ಮ ದಿನ ನಿತ್ಯದ ಕೆಲಸ ಕಾರ್ಯಗಳ ಒತ್ತಡದ ನಡುವೆ ಧಾರ್ಮಿಕ ಪೂಜೆ ಪುನಸ್ಕಾರಗಳಲ್ಲಿ ಭಾಗವಹಿಸುವುದರಿಂದ ಒತ್ತಡ ಕಡಿಮೆ ಆಗಲಿದ್ದು ಮಾನಸಿಕ ನೆಮ್ಮದಿ ಸಿಗಲಿದೆ ಎಂದು ಹೇಳಿದರು.

ಗ್ರಾಮದಲ್ಲಿ ಎಲ್ಲರೂ ಒಗ್ಗಟ್ಟಾಗಿ ಶ್ರೀಲಕ್ಷ್ಮಿನರಸಿಂಹ ಸ್ವಾಮಿ ದೇಗುಲ ನಿರ್ಮಿಸಿದ್ದು, ನಿತ್ಯ ಪೂಜೆ ಪುನಸ್ಕಾರಗಳನ್ನು ನಡೆಸಲು ಅಗತ್ಯ ಕ್ರಮ

ಕೈಗೊಳ್ಳಲಾಗಿದೆ ಎಂದರು. ಈ ವೇಳೆ ಸ್ವಾಮಿಗೆ ವಿಶೇಷ ಹೂವಿನ ಅಲಂಕಾರ ಮಾಡಿ ಮಂಗಳ ವಾದ್ಯಘೋಷದೊಂದಿಗೆ ಗೋಮಾತೆ ಪೂಜೆ ಹಾಗು ಗಂಗಾ ಪೂಜೆ ನೆರವೇರಿಸಲಾಯಿತು. ನಾನಾ ಪೂಜೆ ಪುನಸ್ಕಾರ ಹೋಮ ಹವನಗಳನ್ನು ನೆರವೇರಿಸಿ ಮಹಾ ಮಂಗಳಾರತಿ ಮಾಡಿ ತೀರ್ಥಪ್ರಸಾದವಿನಿಯೋಗಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯರಾದ ಡಿ.ಟಿ. ಶ್ರೀನಿವಾಸ್, ಎಂ.ನಾಗರಾಜ್ ಯಾದವ್, ಮಾಜಿ ಶಾಸಕಿ ಪೂರ್ಣಿಮಾ, ಮಾಜಿ ಸಂದದರಾದ ಎಸ್. ಮುನಿಸ್ವಾಮಿ, ಮಾಜಿ ಶಾಸಕ ಎಂ.ರಾಜಣ್ಣ, ಬಿಜೆಪಿ ಮುಖಂಡ ಸೀಕಲ್ ಆನಂದಗೌಡ, ವಕೀಲರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ, ದೇವಾಲಯ ಅಭಿವೃದ್ಧಿ ಸಮಿತಿ ಸದಸ್ಯರಾದ ಬೇಕರಿ ಗೌಡ , ಭಕ್ತಾದಿಗಳು,

# ಜೀತ ವಿಮುಕ್ತರಿಗೆ ಸರ್ಕಾರದಿಂದ ನಿವೇಶನ, ವಸತಿ

**ಶಿಡ್ಲಘಟ್ಟ:** ಜೀತ ವಿಮುಕ್ತರಿಗೆ ಸರ್ಕಾರದಿಂದ ನಿವೇಶನ, ವಸತಿ ಸವಲತ್ತು, ಎರಡು ಎಕರೆ ಕೃಷಿ ಭೂಮಿ, ಸರ್ಕಾರದ ಸವಲತ್ತುಗಳು ಹಾಗೂ ಬ್ಯಾಂಕ್ ಸಾಲದ ಸೌಲಭ್ಯಗಳನ್ನು ಆದ್ಯತೆ ಮೇರೆಗೆ ನೀಡಲು ಸಂಘಟನೆಯಿಂದ ಮನವಿ ಮಾಡಿದ್ದು ಈ ಎಲ್ಲ ಸವಲತ್ತುಗಳನ್ನು ಕಲ್ಪಿಸಿಕೊಡುವುದಾಗಿ ತಾಲ್ಲೂಕು ಪಂಚಾಯಿತಿ ಇ.ಒ. ಹೇಮಾವತಿ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜೀತ ವಿಮುಕ್ತಿ ಕರ್ನಾಟಕ(ಜೀವಿಕ) ಸಂಘಟನೆ ಪದಾಧಿಕಾರಿಗಳು, ಸಮನ್ವಯ ಅಧಿಕಾರಿಗಳು ಹಾಗು ಪಿಡಿಒಗಳ ಸಭೆಯಲ್ಲಿ ಅವರು ಮಾತನಾಡಿದರು. ಜೀತ ವಿಮುಕ್ತರಿಗೆ ಸರ್ಕಾರದಿಂದ ಸಿಗಬೇಕಾದ ಪುನರ್ ವಸತಿ ಸೌಲಭ್ಯಗಳನ್ನು ಹಂತ ಹಂತವಾಗಿ ಎಲ್ಲರಿಗೂ ಕಲ್ಪಿಸಿಕೊಡುವುದಾಗಿ ಭರವಸೆ ನೀಡಿದರು.

ಸಂಚಾಲಕ ಶ್ರೀನಿವಾಸ್ ಮಾತನಾಡಿ 2019 ರ ವರೆಗೂ ಶಿಡ್ಲಘಟ್ಟ ತಾಲೂಕಿನಲ್ಲಿ 432 ಮಂದಿ ಜೀತದಿಂದ ಮುಕ್ತಿ ಪಡೆದಿದ್ದಾರೆ. ಅವರೆಲ್ಲರಿಗೂ ಸರಕಾರದಿಂದ ಪುನರ್ ವಸತಿ ಸವಲತ್ತುಗಳನ್ನು ಇದುವರೆಗೂ ನೀಡಿಲ್ಲ ಸರ್ಕಾರದ ಆದೇಶವಿದ್ದರೂ ಅಧಿ ಕಾರಿಗಳು ನಾನಾ ಕಾರಣಕೊಟ್ಟು ವಿಳಂಬ ಮಾಡುತ್ತಿದ್ದಾರೆ ಎಂದು ಸಭೆಯಲ್ಲಿ ದೂರಿದರು.

ಮುಂದಿನ ದಿನಗಳಲ್ಲಿ ಸವಲತ್ತು ಗಳನ್ನು ನೀಡದಿದ್ದಲ್ಲಿ ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಜೀವಿಕ ಸಂಘಟನೆಯ ಮುನಿಯಪ್ಪ, ಮುನಿರಾಜು,ನರಸಿಂಹಪ್ಪ, ಮುನಿಕೃಷ್ಣಪ್ಪ, ಗುರುಮೂರ್ತಿ, ರತ್ನಮ್ಮ, ಪಿಡಿಒಗಳು ಹಾಗು ಸಮನ್ವಯ ಅಧಿಕಾರಿ ಹಾಜರಿದ್ದರು.

# ಶಿಡ್ಲಘಟ್ಟ 2ನೇ ಹಂತದ ಒಳ ಚರಂಡಿ ಕಾಮಗಾರಿಗೆ 60 ಕೋ. ರೂ. ಬಿಡುಗಡೆ



**ಶಿಡ್ಲಘಟ್ಟ :** ನಗರದ ಅರ್ಧ ಭಾಗದಷ್ಟು ಪ್ರದೇಶದಲ್ಲಿ ಒಳ ಚರಂಡಿ ನಿರ್ಮಾಣ ಆಗಬೇಕಿದೆ 2ನೇ ಹಂತದ ಒಳ ಚರಂಡಿ ಕಾಮಗಾರಿಗೆ ಅಗತ್ಯ 60 ಕೋಟಿ ರೂ. ಗಳ ಹಣವನ್ನು ನಗರಾಭಿವೃದ್ಧಿ ಸಚಿವರಾದ ಬೈರತಿ ಸುರೇಶ್ ಅವರನ್ನು ಶಾಸಕರಾದ ಬಿ.ಎನ್.ರವಿಕುಮಾರ್ ಅವರು ಸಂಪರ್ಕಿಸಿ ಬಿಡುಗಡೆ ಮಾಡಿಸಿದ್ದು, ಶೀಘ್ರದಲ್ಲೇ ಕಾಮಗಾರಿ ಆರಂಭವಾಗಲಿದೆ ಎಂದು ನಗರಸಭೆ ಅಧ್ಯಕ್ಷ ಎಂ.ವಿ.ವೆಂಕಟಸ್ವಾಮಿ ತಿಳಿಸಿದರು.

ನಗರಸಭೆಯ 14ನೇ ಹಣಕಾಸು ಯೋಜನೆಯ ಉಳಿಕೆ ಅನುದಾನ 41.53 ಲಕ್ಷ ರೂ. ವೆಚ್ಚದಲ್ಲಿ ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ನಗರದ ಅಶೋಕ ರಸ್ತೆಯ ಉಲ್ಲೂರುಪೇಟೆ ಕ್ರಾಸ್‌ನ ಪುನೀತ್ ರಾಜ್‌ಕುಮಾರ್ ವೃತ್ತದಿಂದ ಸಂತೆ ಮೈದಾನದವರೆಗೂ ಒಳ ಚರಂಡಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ನಗರದಲ್ಲಿ ಸ್ವಚ್ಛತೆ ನೈರ್ಮಲ್ಯ ಕಾಪಾಡುವಲ್ಲಿ ಒಳ ಚರಂಡಿ ಬಹಳ ಮುಖ್ಯ. ಅದಕ್ಕೂ ಮಿಗಿಲಾಗಿ ನಾಗರಿಕರಲ್ಲಿ ಸ್ವಚ್ಛತೆ ಬಗ್ಗೆ ಇನ್ನಷ್ಟು ಹೆಚ್ಚು ಅರಿವು ಮೂಡಬೇಕು,ನಿಮ್ಮ ವೈಯಕ್ತಿಕ ಹಾಗೂ ನೆರೆ ಹೊರೆಯ ಪರಿಸರದ ಸ್ವಚ್ಛತೆ ಕಾಪಾಡಲು ಎಲ್ಲರೂ ಮುಂದಾಗಬೇಕು ಎಂದು ಹೇಳಿದರು.

ಸ್ವಚ್ಛತೆ ನಮ್ಮೆಲ್ಲರ ಆರೋಗ್ಯದ ಮಟ್ಟ ಸುಧಾರಿಸಲು ಮುಖ್ಯ ಪಾತ್ರವಹಿಸುತ್ತದೆ ಅಲ್ಲದೆ ನಗರದ ಅಭಿವೃದ್ಧಿಗೆ ಪೂರಕವಾಗಲಿದೆ ಎಂದರು.

ಈ ವೇಳೆ ಪುನೀತ್ ರಾಜ್‌ಕುಮಾರ್ ವೃತ್ತದಿಂದ ಶಾಮಣ್ಣ ಬಾವಿ ಮೂಲಕ ಸಂತೆ ಮೈದಾನದವರೆಗಿನ ಒಳ ಚರಂಡಿ ಕಾಮ ಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಪೌರಾಯುಕ್ತ ಮಂಜುನಾಥ್, ಸದಸ್ಯರಾದ ಅನಿಲ್ ಕುಮಾರ್, ನಾರಾಯಣಸ್ವಾಮಿ, ಮಂಜುನಾಥ್ ನಾಯಕ್, ನಂದುಕಿಷನ್ ಮುಖಂಡರಾದ ನವೀನ್, ಫುಡ್ ಮನೋಹರ್, ಎಸ್.ಎಂ.ರಮೇಶ್, ಎಂಜಿನಿಯರ್ ಲತಾ, ಸಭಾ ಅಂಜಾನ್ ಮತ್ತಿತರರು ಹಾಜರಿದ್ದರು.

# ಹೊಂಡರಬಾಳು ನವೋದಯ ಶಾಲೆಯಲ್ಲಿ ಸಾಮೂಹಿಕ ಸೂರ್ಯ ನಮಸ್ಕಾರ



**ಚಾಮರಾಜನಗರ:** ತಾಲೂಕಿನ ಹೊಂಡರ ಬಾಳುವಿನಲ್ಲಿರುವ ಪಿ.ಎಂ.ಶ್ರೀ ಸ್ಕೂಲ್ ಜವಾಹರ್ ನವೋದಯ ವಿದ್ಯಾಲಯದಲ್ಲಿ ರಥಸಪ್ತಮಿ ಅಂಗವಾಗಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸೇವಾ ಸಮಿತಿಯಿಂದ ಸಾಮೂಹಿಕ ಸೂರ್ಯ ನಮಸ್ಕಾರ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ನಗರದ ಶ್ರೀ ಪತಂಜಲಿ ಯೋಗ ಶಿಕ್ಷಣ ಸೇವಾ ಸಮಿತಿ ಸಹಯೋಗದಲ್ಲಿ ಪ್ರತಿ ವರ್ಷದಂತೆ ಈ ಬಾರಿ 15ನೇ ವರ್ಷದ ಬೃಹತ್ ಸಾಮೂಹಿಕ 108 ಸೂರ್ಯ ನಮಸ್ಕಾರ ಕಾರ್ಯಕ್ರಮದಲ್ಲಿ ಶಾಲೆಯ 350ಕ್ಕು ಹೆಚ್ಚು ವಿದ್ಯಾರ್ಥಿಗಳು ಹಾಗೂ ಯೋಗಬಂಧುಗಳು ಭಾಗವಹಿಸಿದ್ದರು.

ಬೆಳಗಿನ ಜಾವ 6.30 ಗಂಟೆಯಿಂದ ಆರಂಭವಾದ ಕಾರ್ಯಕ್ರಮವನ್ನು ಪ್ರಾಂಶುಪಾಲರಾದ , ಪಿ.ಎಂ.ಶ್ರೀ ಸ್ಕೂಲ್ ಜವಾಹರ್ ನವೋದಯ ವಿದ್ಯಾಲಯದ ಪ್ರಾಂಶುಪಾಲರಾದ ಜೆ.ಪ್ರೀತಾ ಅವರು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ರಥಸಪ್ತಮಿಯ ದಿನ ಸೂರ್ಯ ತನ್ನ ಪಥ ಬದಲಾಯಿಸುವ ಶುಭ ದಿನವಾಗಿದೆ. ಹೀಗಾಗಿ ಸೂರ್ಯ ತಣ ಪಥವನ್ನು ಬದಲಾಯಿಸುವ ದಿನವನ್ನು ವೈಜ್ಞಾನಿಕವಾಗಿ ಹೆಚ್ಚು ಪ್ರಮುಖ್ಯತೆಯನ್ನು ಪಡೆದುಕೊಂಡಿದೆ. ಯೋಗಭ್ಯಾಸದಲ್ಲಿ ಈ ದಿನವನ್ನು ಅತ್ಯಂತ ಮಹತ್ವ ಹಾಗೂ ಆರೋಗ್ಯವನ್ನು ಕಲ್ಪಿಸುವ ದಿನವಾಗಿರುತ್ತದೆ ಎಂದರು. ಆರೋಗ್ಯವಂತ ಜೀವನಕ್ಕಾಗಿ ಯೋಗಭ್ಯಾಸ ಮಹತ್ವ ಪಡೆದುಕೊಂಡಿದೆ. ಇಡೀ ವಿಶ್ವಕ್ಕೆ ಯೋಗವನ್ನು ಪರಿಚಯ ಮಾಡಿದ್ದು ನಮ್ಮ ದೇಶ ಭಾರತ ಎಂಬ ಹೆಮ್ಮೆ ನಮ್ಮದಾಗಿದೆ. ಪ್ರತಿನಿತ್ಯ ಕನಿಷ್ಟ ಒಂದು ಗಂಟೆ ಯೋಗಭ್ಯಾಸ ಮಾಡುವುದರಿಂದ ಆರೋಗ್ಯವಂತ ಜೀವನ ನಡೆಸಲು ಸಾಧ್ಯವಿದೆ. ಇಂಥ ಯೋಗವನ್ನು ಯುವ ಪೀಳಿಗೆ ಅಭ್ಯಾಸದಲ್ಲಿ ತೊಡಗಿಸಿಕೊಂಡು ಜೀವನದಲ್ಲಿ ಶಾಂತಿ, ನೆಮ್ಮದಿ ಕಂಡುಕೊಳ್ಳಬೇಕು. ಶ್ರೀ ಪತಂಜಲಿ ಯೋಗ ಶಿಕ್ಷಣ ಸೇವಾ ಸಮಿತಿಯವರು ನಮ್ಮ ಶಾಲೆಯ ಮಕ್ಕಳಿಗೆ ಉತ್ತಮ ರೀತಿಯಲ್ಲಿ ಯೋಗಶಿಕ್ಷಣ ನೀಡುತ್ತಿರುವುದಕ್ಕೆ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು.

ನವೋದಯ ಶಾಲೆಯ ಮೋಹನ್‌ಕುಮಾರ್ ಪ್ರಸ್ತಾವಿಕವಾಗಿ ಮಾತನಾಡಿ, ಸೂರ್ಯ ಭಗವಂತ ಹುಟ್ಟಿದ ದಿನವಾದ ಇಂದು ರಥಸಪ್ತಮಿಯ ಪ್ರಯುಕ್ತ ಸಾಮೂಹಿಕ 108 ಸೂರ್ಯ ನಮಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನಮ್ಮ ಶಾಲೆಯಲ್ಲಿ ಶ್ರೀ ಪತಂಜಲಿ ಯೋಗಶಿಕ್ಷಣ ಸೇವಾ ಸಮಿಯವರು ನಡೆಸುತ್ತಿರುವುದು ಸಂತಸ ತಂದಿದೆ. ಸೂರ್ಯ ಕಿರಣಗಳು ಇಲ್ಲದೇ ಯಾರು ಸಹ ಚೈತನ್ಯದಿಂದ ಇರಲು ಸಾಧ್ಯವಿಲ್ಲ ಎಂದರು.

ಕಾಲೇಜಿನ ಉಪ ಪ್ರಾಂಶುಪಾಲ ಡಾ. ದಿನೇಶ್ ಮಾತನಾಡಿ, ಎಲ್ಲರೂ ಸಾಧನೆ ಮತ್ತು ಯಶಸ್ಸು ಸಾಧಿಸಲು ಯೋಗ ಸಹಕಾರಿ ಹಾಗೂ ಪ್ರತಿದಿನ ಯೋಗಭ್ಯಾಸ ಮಾಡುವುದರಿಂದ ದೇಹಕ್ಕೆ ಹೆಚ್ಚಿನ ಅನುಕೂಲವಾಗುತ್ತದೆ ಎಂದು ಸವಿವರಾಗಿ ತಿಳಿಸಿದರು.

ಸಂಜೀವಿನಿ ಟ್ರಸ್ಟ್ ಅಧ್ಯಕ್ಷ ಸತೀಶಣ್ಣ ಮಾತನಾಡಿ, ಕೋರೋನದಂತ ಮಾಹಮಾರಿ ಇದ್ದಾಗಲು ಸಹ ಯಾವುದೇ ಯೋಗಬಂಧು ಮೃತಪಟ್ಟ ಉದಾಹರಣೆ ಇಲ್ಲ. ನಮ್ಮ ದೇಹದ ಎಲ್ಲಾ ಅಂಗಾಗಗಳು ಸದಾ ಚೈತನ್ಯದಿಂದ ಇರಲು ಯೋಗ ಅತ್ಯಂತ ಸಹಕಾರಿ ಎಂದು ತಿಳಿಸಿದರು. ಸಮಿತಿಯ ಅಧ್ಯಕ್ಷ ಡಿ.ಪಿ. ಪ್ರಕಾಶ್ ಮಾತನಾಡಿ ಪ್ರತಿದಿನ ಲವಲವಿಕೆ ಹಾಗೂ ಚೈತನ್ಯದಿಂದ ಇರಬೇಕಾದರೆ ಹಾಗೂ ತಮ್ಮ ದೈನಂದಿನ ಎಲ್ಲಾ ಕೆಲಸ ಕಾರ್ಯಗಳನ್ನು ಉಲ್ಲಾಸದಿಂದ ಮಾಡಲು ಯೋಗ ಸಹಕಾರಿಯಾಗಿದೆ ಎಂದರು.

ಸಮಿತಿಯ ಪ್ರಧಾನ ಸಂಚಾಲಕ ಯೋಗಪ್ರಕಾಶ್ ಮಾತನಾಡಿ ಶ್ರೀಪತಂಜಲಿ ಯೋಗ ಶಿಕ್ಷಣ ಸೇವಾ ಸಮಿತಿಯು ಸಂಸ್ಕಾರ ಸಂಘಟನೆ ಮತ್ತು ಸೇವೆ ಎಂಬ ಮೂರು ಧ್ಯೇಯಗಳನ್ನಿಟ್ಟುಕೊಂಡು ಆರೋಗ್ಯವಂತ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸುತ್ತಿದೆ. ಈ ಸಮಿತಿಯು ಹಲವಾರು ವರ್ಷಗಳಿಂದ ಉಚಿತವಾಗಿ ಯೋಗಶಿಕ್ಷಣವನ್ನು ನೀಡುತ್ತಾ ಬಂದಿದೆ.

ಕಾರ್ಯಕ್ರಮದಲ್ಲಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸೇವಾ ಸಮಿತಿಯ ಉಪಾಧ್ಯಕ್ಷ ಎನ್. ದೊರೆಸ್ವಾಮಿ, ಗೌರವಾಧ್ಯಕ್ಷ ಶ್ರೀನಿವಾಸ್. ಪ್ರಧಾನ ಸಂಚಾಲಕರಾದ ಯೋಗಪ್ರಕಾಶ್, ಖಜಾಂಚಿ ಸಂತೋಷಕುಮಾರ್, ನವೋದಯ ಶಾಲೆಯ ಉಪ ಪ್ರಾಂಶುಪಾಲ ಡಾ. ದಿನೇಶ್, ಮೋಹನ್‌ಕುಮಾರ್ ಸಂಚಾಲಕರಾದ ಶ್ರೀನಿವಾಸಮೂರ್ತಿ ಸುನಿತಾ, ನಾಗಮಣಿ, ನಾಗರತ್ನಮ್ಮ, ರಾಜಶೇಖರಮೂರ್ತಿ, ರಜನಿಕಾಂತ್, ಗುಪ್ತ, ಪ್ರಸಾದ್, ರವಿ, ರಾಜು , ರಮೇಶ್ ವಿಧ್ಯಾರ್ಥಿಗಳು ಹಾಗೂ ಸಂಜೀವಿನಿ ಟ್ರಸ್ಟ್ ಪ್ರಮೀಳ ಉದಗಟ್ಟಿ, ತಂಡದವರು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರಾದ ಕೌಶಿಕ್, ಡಾ॥ ನಿಷಾ ಹಾಗೂ ಸಹ ಶಿಕ್ಷಕರ ವೃಂದದವರು ಭಾಗವಹಿಸಿದ್ದರು.

# ಉಚಿತ ಓರಲ್ ಹಾಗೂ ಸ್ತನಕ್ಯಾನ್ಸರ್ ತಪಾಸಣೆ



**ಬೆಂಗಳೂರು:** ವಿಶ್ವ ಕ್ಯಾನ್ಸರ್ ದಿನಾಚರಣೆ ಪ್ರಯುಕ್ತ ಕೆಎಸ್‌ಆರ್‌ಟಿಸಿ ಹಾಗೂ ಎಚ್‌ಸಿಜಿ ಕಾನ್ಸರ್ ಕೇಂದ್ರದ ಸಹಯೋಗದೊಂದಿಗೆ ಒಂದು ಸಾವಿರಕ್ಕೂ ಅಧಿಕ ರಸ್ತೆ ಸಾರಿಗೆ ನೌಕರರಿಗೆ ಉಚಿತ ಓರಲ್ ಹಾಗೂ ಸ್ತನಕ್ಯಾನ್ಸರ್ ತಪಾಸಣಾ ನಡೆಸಲಾಯಿತು.

ಕೆಎಸ್‌ಆರ್‌ರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ವಿ. ಅನ್ಬು ಕುಮಾರ್ ಹಾಗೂ ಎಚ್‌ಸಿಜಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮನೀಶಾ ಕುಮಾರ್ ಆರೋಗ್ಯ ತಪಾಸಣಾ ಮೇಳಕ್ಕೆ ಚಾಲನೆ ನೀಡಿದರು.

ಈ ಕುರಿತು ಮಾತನಾಡಿದ ಕೆಎಸ್‌ಆರ್‌ಟಿಸಿಯ ವ್ಯವಸ್ಥಾಪಕ ನಿರ್ದೇಶಕ ವಿ. ಅನ್ಬು ಕುಮಾರ್, "ಎಚ್‌ಸಿಜಿ ಕ್ಯಾನ್ಸರ್ ಕೇಂದ್ರದ ವತಿಯಿಂದ ವಿಶ್ವ ಕ್ಯಾನ್ಸರ್ ದಿನದ ಪ್ರಯುಕ್ತ ನಮ್ಮ ನೌಕರರಿಗೆ ಸ್ತನ ಕ್ಯಾನ್ಸರ್ ಹಾಗೂ ಓರಲ್ ಕ್ಯಾನ್ಸರ್ ತಪಾಸಣೆ ಆಯೋಜಿಸಿದ್ದ ಶ್ಲಾಘನೀಯ. ಕ್ಯಾನ್ಸರ್‌ನನ್ನು ಪ್ರಾರಂಭದಲ್ಲಿಯೇ ಪತ್ತೆ ಹಚ್ಚುವುದು ಅತಿ ಅವಶ್ಯಕ ಹಾಗೂ ಇದರ ಬಗ್ಗೆ ಪ್ರತಿಯೊಬ್ಬರಲ್ಲೂ ಜಾಗೃತಿ ಮೂಡಿಸಬೇಕಿದೆ. ತಮ್ಮ ಕೆಲಸದ ಒತ್ತಡದಲ್ಲಿ ಕ್ಯಾನ್ಸರ್ ಕುರಿತು ರೋಗಲಕ್ಷಣಗಳನ್ನು ಯಾರೂ ನಿರ್ಲಕ್ಷಿಸಬಾರದು. ನಮ್ಮ ಉದ್ಯೋಗಿಗಳ ಆರೋಗ್ಯವೇ ನಮ್ಮ ಕಾಳಜಿ ಎಂದು ಹೇಳಿದರು.

ಎಚ್‌ಸಿಜಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮನೀಶಾ ಕುಮಾರ್ ಮಾತನಾಡಿ, ವಿಶ್ವ ಕ್ಯಾನ್ಸರ್ ದಿನದ ಪ್ರಯುಕ್ತ ರಸ್ತೆ ಸಾರಿಗೆ ನೌಕರರಿಗೆ ಉಚಿತವಾಗಿ ರಲ್ ಹಾಗೂ ಸ್ತನಕ್ಯಾನ್ಸರ್‌ನ ತಪಾಸಣೆಯನ್ನು ನಡೆಸುವ ಜವಾಬ್ದಾರಿ ಹೊರುವ ಮೂಲಕ ಕ್ಯಾನ್ಸರ್ ಆರಂಭದ ಪತ್ತೆಯ ಬಗ್ಗೆ ಪ್ರತಿಯೊಬ್ಬರಲ್ಲೂ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ. ಸಾಕಷ್ಟು ಜನರು ಕ್ಯಾನ್ಸರ್‌ನ ರೋಗಲಕ್ಷಣಗಳ ಬಗ್ಗೆ ಗಮನ ನೀಡದೇ, ಕೊನೆ ಹಂತದವರೆಗೂ ನಿರ್ಲಕ್ಷಿಸುತ್ತಾರೆ, ಇದರಿಂದ ಚಿಕಿತ್ಸೆ ಕಷ್ಟಕರವಾಗಲಿದೆ,ಯಾವುದೇ ರೀತಿಯ ಕ್ಯಾನ್ಸರ್ ಆದರೂ ಪ್ರಾರಂಭದಲ್ಲಿಯೇ ಪತ್ತೆ ಹಚ್ಚಿದರೆ, ಅದನ್ನು ಗುಣಪಡಿಸಬಹುದು, ಈ ಬಗ್ಗೆ ಪ್ರತಿಯೊಬ್ಬರೂ ಜಾಗೃತರಾಗಿ, ಕ್ಯಾನ್ಸರ್ ವಿರುದ್ಧ ಹೋರಾಡೋಣ ಎಂದು ಹೇಳಿದರು.

1 ಸಾವಿರಕ್ಕೂ ಕ್ಕೂ ಹೆಚ್ಚು ರಸ್ತೆ ಸಾರಿಗೆ ಕಾರ್ಮಿಕರು ತಪಾಸಣಾ ಮೇಳದಲ್ಲಿ ಪಾಲ್ಗೊಂಡಿದ್ದರು. ಇದು ರಸ್ತೆ ಸಾರಿಗೆಯಲ್ಲೇ ಅತಿ ದೊಡ್ಡ ಕ್ಯಾನ್ಸರ್ ಜಾಗೃತಿ ಅಭಿಯಾನವಾಗಿದೆ.



ಜಯನಗರ ಕ್ಷೇತ್ರದ ಎಸ್.ಸಿ / ಎಸ್.ಟಿ ದಲಿತ ಬಂಧುಗಳೊಂದಿಗೆ ಶಾಸಕರಾದ ಸಿ.ಕೆ. ರಾಮಮೂರ್ತಿರವರ ನಿವಾಸದಲ್ಲಿ ಭೀಮ ಸಂಗಮ ಕಾರ್ಯಕ್ರಮ ಆಯೋಜಿಸಿ ಔತಣಕೂಟ ಮತ್ತು ಸಹಪಂಕ್ತಿ ಭೋಜನ ನೆಡೆಸಿದರು. ಈ ಕಾರ್ಯಕ್ರಮದಲ್ಲಿ ವಿಧಾನಪರಿಷತ್ ವಿರೋಧಪಕ್ಷದ ನಾಯಕರಾದ ಛಲವಾದಿ ನಾರಾಯಣ ಸ್ವಾಮಿ, ಲೋಕಸಭಾ ಸಂಸದ ತೇಜಸ್ವಿ ಸೂರ್ಯ, ಮಾಜಿ ಶಾಸಕ ಸಂಪಂಗಿರವರು ಮತ್ತು ಬಿಬಿಎಂಪಿಯ ಮಾಜಿ ಮಹಾಪೌರರು ಹಾಗೂ ಬಿಬಿಎಂಪಿಯ ಮಾಜಿ ಸದಸ್ಯರುಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಮೈಕ್ರೋ ಫೈನಾನ್ಸ್ ಕಾಟದಿಂದ ತತ್ತರಿಸಿದ್ದ ಕುಟುಂಬಕ್ಕೆ ನೆರವಾದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್




**ಬೆಳಗಾವಿ :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು, ಮೈಕ್ರೋ ಫೈನಾನ್ಸ್ ಕಾಟಕ್ಕೆ ಬೇಸತ್ತಿದ್ದ ಮತ್ತೊಂದು ಕುಟುಂಬಕ್ಕೆ ನೆರವಾಗಿದ್ದಾರೆ.ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಬಸರಿಕಟ್ಟಿಯ ಬಸವರಾಜ ಮಾರುತಿ ಕೊಂಡಸ್ಕೊಪ್ಪ ಅವರು ಖಾಸಗಿ ಹಣಕಾಸು ಸಂಸ್ಥೆಯಿಂದ 7 ಲಕ್ಷ ರೂಪಾಯಿ ಸಾಲ ಪಡೆದುಕೊಂಡಿದ್ದರು. ಸಾಲ ಮರುಪಾವತಿಸಲು ವಿಫಲರಾದ ಹಿನ್ನೆಲೆಯಲ್ಲಿ ಖಾಸಗಿ ಹಣಕಾಸು ಸಂಸ್ಥೆಯವರು 3 ತಿಂಗಳ ಹಿಂದೆ ಬಸವರಾಜ ಅವರ ಮನೆಗೆ ಬೀಗ ಹಾಕಿದ್ದರು. ಮೈಕ್ರೋ ಫೈನಾನ್ಸ್ ಅವರ ಕಾಟಕ್ಕೆ ಬೇಸತ್ತ ಬಸವರಾಜ ಸಚಿವರ ಬಳಿಕ ತಮ್ಮ ಅಳಲು ತೋಡಿಕೊಂಡಿದ್ದರು. ನೊಂದ ರೈತನ ಮನವಿ ಸ್ವೀಕರಿಸಿದ ಸಚಿವರು, ತಮ್ಮ ಆಪ್ತ ಸಹಾಯಕ ಮಹಾಂತೇಶ್ ಹಿರೇಮಠ ಮೂಲಕ ಖಾಸಗಿ ಹಣಕಾಸು ಸಂಸ್ಥೆ ಸಿಬ್ಬಂದಿ ಜೊತೆ ಮಾತುಕತೆ ನಡೆಸಿ, ಸಾಲ ಮರು ಪಾವತಿಸಲು ಎರಡು ತಿಂಗಳ ಸಮಯಾವಕಾಶ ಕೊಡಿಸಿದರು. ಜೊತೆಗೆ ಅನಾವಶ್ಯಕವಾಗಿ ಸಾಲಗಾರರಿಗೆ ಕಾಟ ನೀಡದಂತೆ ಖಾಸಗಿ ಹಣಕಾಸು ಸಂಸ್ಥೆಯವರಿಗೆ ಸಚಿವರು ತಾಕೀತು ಮಾಡಿದರು. ಕಳೆದ ವಾರವಷ್ಟೇ ಬೆಳಗಾವಿ ತಾಲೂಕಿನ ತಾರಿಹಾಳ ಗ್ರಾಮದ ಮಾಧುರಿ ಲೋಹಾರ್ ಎನ್ನುವ ಬಾಣಂತಿ ಮತ್ತು ಅವರ ಕುಟುಂಬದವರು ಸಾಲ ತೀರಿಸಿಲ್ಲ ಎಂದು ಆರೋಪಿಸಿ ಖಾಸಗಿ ಹಣಕಾಸು ಸಂಸ್ಥೆಯವರು ಹಸಿ ಬಾಣಂತಿ ಸೇರಿದಂತೆ ಕುಟುಂಬ ಸದಸ್ಯರನ್ನು ಮನೆಯಿಂದ ಹೊರಹಾಕಿದ್ದರು. ಈ ವೇಳೆ ಮಧ್ಯಪ್ರವೇಶಿಸಿದ ಸಚಿವರು, ಸಾಲ ಮರುಪಾವತಿಸಲು ಸಮಯಾವಕಾಶ ಕೊಡಿಸಿದ್ದಲ್ಲದೆ, ಮನೆಯ ಬೀಗ ತೆರವು ಮಾಡಿಸಿದ್ದರು.

**ಸಚಿವರ ಕಾರ್ಯಕ್ಕೆ ಸಾರ್ವಜನಿಕರ ಪ್ರಶಂಸೆ:** ಅಪಘಾತದಿಂದ ಗಾಯಗೊಂಡು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ವಿಶ್ರಾಂತಿಯಲ್ಲಿದ್ದರೂ ಮೈಕ್ರೋ ಫೈನಾನ್ಸ್ ಕಾಟದಿಂದ ಬಳಲುತ್ತಿರುವ ಜನರಿಗೆ ನೆರವಾಗಿದ್ದಕ್ಕೆ ಸಾರ್ವಜನಿಕರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಜನವರಿ 14 ರಂದು ಬೆಳಗಾವಿಯ ಕಿತ್ತೂರು ಬಳಿ ಸಚಿವರು ಪ್ರಯಾಣಿಸುತ್ತಿದ್ದ ಕಾರು ಅಪಘಾತಕ್ಕೀಡಾಗಿತ್ತು. 13 ದಿನಗಳ ಕಾಲ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಮನೆಗೆ ಮರಳಿದ್ದರು. ವೈದ್ಯರು ಸಚಿವರಿಗೆ ಒಂದು ತಿಂಗಳ ಕಾಲ ವಿಶ್ರಾಂತಿ ಸೂಚಿಸಿದರೂ ಸಚಿವರು ಬೆಳಗಾವಿ ಗ್ರಾಮೀಣ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯವೈಖರಿ ಬಗ್ಗೆ ನಿಗಾವಹಿಸುತ್ತಿದ್ದಾರೆ. ಜೊತೆಗೆ ಮೈಕ್ರೋ ಫೈನಾನ್ಸ್ ಕಾಟದಿಂದ ಬೇಸತ್ತಿರುವ ಜನರ ನೆರವಿಗೂ ಬರುತ್ತಿದ್ದಾರೆ.

# ಅಸಮರ್ಪಕ ವಿದ್ಯುತ್‌ವ್ಯವಸ್ಥೆಯನ್ನು ಖಂಡಿಸಿ ಪ್ರತಿಭಟನೆ



**ಹನೂರು:** ಏಕೀಕರಣ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನಾ ರೈತ ಸಂಘಟನೆ ಅಸಮರ್ಪಕ ವಿದ್ಯುತ್ ವ್ಯವಸ್ಥೆಯನ್ನು ಖಂಡಿಸಿ ಹನೂರು ಪಟ್ಟಣದ ಚೆಸ್ಕಾಂ ಕಚೇರಿಯ ಮುಂದೆ ಧರಣಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಪೆಟ್ರೋಲ್ ಬಂಕ್ ನಿಂದ ಪಟ್ಟಣದ ಮುಖ್ಯರಸ್ತೆಯಲ್ಲಿ ಪ್ರತಿಭಟನೆ ನಿರತ ರೈತರು ಮೆರವಣಿಗೆ ಸಾಗಿ ಖಾಸಗಿ ಬಸ್ ನಿಲ್ದಾಣ ದಿವಂಗತ ನಾಗಪ್ಪ ವೃತ್ತದದಲ್ಲಿ ಮಾನವ ಸರಪಳಿ ನಿರ್ಮಿಸಿ ಚೆಸ್ಕಾಂ ಇಲಾಖೆಯ ವಿರುದ್ಧ ಧಿಕ್ಕಾರ ಕೂಗಿದರು. ನಂತರ ಅಂಬೇಡ್ಕರ್ ಸರ್ಕಲ್ ಮುಖಾಂತರ ತೆರಳಿದ ರೈತ ಸಂಘಟನೆ ಪಟ್ಟಣದಲ್ಲಿರುವ ಚೆಸ್ಕಾಂ ಕಚೇರಿ ಮುಂಭಾಗ ಧರಣಿ ಪ್ರತಿಭಟನೆ ನಡೆಸಿದರು.

ರಾತ್ರಿ ಸಮಯದಲ್ಲಿ ಸರಿಯಾಗಿ ವಿದ್ಯುತ್ ನೀಡುತ್ತಿಲ್ಲ, ಸರಿಯಾದ ಸಮಯಕ್ಕೆ ತಿಳಿಸಿ ಅಳವಡಿಸಿ ಕೊಡುತ್ತಿಲ್ಲ, ರೈತರು ಫೋನ್ ಕರೆ ಮಾಡಿದರೆ ಅಧಿಕಾರಿಗಳು ಸರಿಯಾಗಿ ಸ್ಪಂದಿಸುತ್ತಿಲ್ಲ, ರಾತ್ರಿ ಸಮಯದಲ್ಲಿ ವಿದ್ಯುತ್ ಇಲ್ಲದೆ ಬಿಎಂ ಹಳ್ಳಿ ಎಲ್ಲೇಮಾಳ, ಒಡೆಯರಪಾಳ್ಯ, ಪಿಜಿ ಪಾಳ್ಯ ಹಾಗೂ ಇನ್ನಿತರ ಗ್ರಾಮಗಳಲ್ಲಿ ರಾತ್ರಿ ಸಮಯದಲ್ಲಿ ಕಾಡು ಪ್ರಾಣಿಗಳು ಮನೆಯಲ್ಲಿದ್ದ ಹಸು ಮೇಕೆ ತಿಂದು ಹೋಗುತ್ತಿದೆ,ರೈತರು ಜಮೀನುಗಳಲ್ಲಿ ಬೆಳದಂತ ಬೆಳೆಗಳಿಗೆ ಸರಿಯಾಗಿ ವಿದ್ಯುತ್ ಇಲ್ಲದ ಕಾರಣ ಬೆಳೆಗಳು ಒಣಗುತ್ತಿದೆ ಕಾಡಿನಿಂದ ಕಾಡು ಪ್ರಾಣಿಗಳು ಬೆಳದಂತ ಬೆಳೆಗಳನ್ನು ನಾಶ ಮಾಡುತ್ತಿದೆ ಅದಕ್ಕೆ ಕಾಡು ಪ್ರಾಣಿಗಳಿಗೆ ಕಡಿವಾಣ ಹಾಕಬೇಕು ಆಗ್ರಹಿಸಿದರು.

ಗುಂಡಲ್ ಜಲಾಶಯ ಅಕ್ಕಪಕ್ಕದಲ್ಲಿರುವ ನಾಲೆಗಳನ್ನು ಸ್ವಚ್ಛತೆ ಮಾಡಿ ನಮಗೆ ಸುಗಮವಾಗಿ ನೀರು ಹರಿಸಬೇಕು ಗುಂಡಾಲ್ ಜಲಾಶಯದಲ್ಲಿ ನೀರು ಗಂಟೆಯಾಗಿ ಹೊರಗುತ್ತಿಗೆದಾರನಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅವರನ್ನ ಕೆಲಸದಿಂದ ವಜಾಗೊಳಿಸಬೇಕು. ಹಾಗೂ ಇನ್ನೂ 10 ಹಲವಾರು ಬೇಡಿಕೆಗಳನ್ನ ರೈತರು ಪ್ರತಿಭಟಿಸಿದರು.

ಸ್ಥಳಕ್ಕೆ ಆಗಮಿಸಿದ ಸಹಾಯಕ ಕಾರ್ಯ ಪಾಲಕ ಇಂಜಿನಿಯರ್ ತಬಸಂ ಬಾನು, ಹಾಗೂ ಸಹಾಯಕ ಇಂಜಿನಿಯರ್ ನವೀನರವರು ರೈತರ ಮನ ವಲಿಸಿ ಮಾತನಾಡಿ ಇನ್ನು ಎರಡು ದಿನ ಒಳಗೆ ತಾತ್ಕಾಲಿಕವಾಗಿ ವಿದ್ಯುತ್ ಸಮಸ್ಯೆಯನ್ನ ಬಗೆಹರಿಸಲಾಗುವುದು ಮುಂದಿನ 15 ದಿನದೊಳಗೆ ವಿದ್ಯುತ್ ಲಿಂಕ್ ಲೈನ್ ಕಾಮಗಾರಿ ನಡೆಯುತ್ತಿದ್ದು ನಿಮ್ಮ ಎಲ್ಲ ವಿದ್ಯುತ್ ಸಮಸ್ಯೆಗಳನ್ನ ಬಗೆರಿಸಲಾಗುವುದು ಆದ್ದರಿಂದ ರೈತರು ನಮ್ಮ ಇಲಾಖೆ ಜೊತೆ ಸಹಕಾರ ನೀಡಬೇಕು ಎಂದರು.

ಜಿಲ್ಲಾ ಉಸ್ತುವಾರಿ ಸಚಿವರು ಸ್ಥಳೀಯ ಶಾಸಕರು ಹಾಗೂ ಜಿಲ್ಲಾಧಿಕಾರಿಗಳು ರೈತರ ಸಮಸ್ಯೆಗಳನ್ನು ಬಗೆಹರಿಸದಿದ್ದಲ್ಲಿ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಸಂಧರ್ಭದಲ್ಲಿ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ರೈತರು ಎಚ್ಚರಿಕೆ ನೀಡಿದರು. ನಂತರ ಪ್ರತಿಭಟನೆ ಕೈಬಿಟ್ಟರು.

ಇದೇ ಸಂದರ್ಭದಲ್ಲಿ ಎಇಇ ಶಂಕರ್, ತಾಂತ್ರಿಕ ಇಂಜಿನಿಯರ್ ರಂಗಸ್ವಾಮಿ, ಏಕೀಕರಣ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಗೌಡಳ್ಳಿ ಸೋಮಣ್ಣ, ಹನೂರು ತಾಲೂಕು ಅಧ್ಯಕ್ಷ ಚಿಕ್ಕರಾಜು, ಕಾರ್ಯದರ್ಶಿ ಪವನ್ ಹಾಗೂ ರೈತ ಮುಖಂಡರಾದ ಮಹದೇವಸ್ವಾಮಿ ಮಂಟೇಸ್ವಾಮಿ, ಗೋವಿಂದರಾಜು ಸೇರಿದಂತೆ ಇನ್ನಿತರ ರೈತ ಮುಖಂಡರು ಹಾಜರಿದ್ದರು.

## ಸಮಾಜೋಪಯೋಗಿ ಕಾರ್ಯಕ್ಕೆ 55 ಲಕ್ಷ ವ್ಯಯ



**ಕುಕನೂರು:** ಯಲಬುರ್ಗಾ ಕುಕನೂರು ತಾಲೂಕಿನಲ್ಲಿ ಸಮಾಜ ಉಪಯೋಗಿ ಕಾರ್ಯಗಳಿಗೆ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯಿಂದ ಪ್ರಸಕ್ತ ವರ್ಷ ಸುಮಾರು 55 ಲಕ್ಷ ರೂ ನೀಡಲಾಗಿದೆ ಎಂದು ಸಂಸ್ಥೆಯ ಯೋಜನಾಧಿಕಾರಿ ಸತೀಶ್ ಗಾಂಮ್ಕರ್ ಹೇಳಿದರು. ಪಟ್ಟಣದ ಅನ್ನದಾನೀಶ್ವರ ಮಠದಲ್ಲಿ ಪತ್ರಕರ್ತರಿಗೆ ಎರಡನೇ ಹಂತದಲ್ಲಿ ಅರೋಗ್ಯ ಕಿಟ್ ವಿತರಣೆ ಮಾಡಿ ಅವರು ಮಾತನಾಡಿದರು.

ಸಂಸ್ಥೆಯಿಂದ ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಕ್ಷೇತ್ರದಲ್ಲಿ ಹಲವು ಉಪಯುಕ್ತ ಕಾರ್ಯಗಳಿಗಾಗಿ ಧನ ಸಹಾಯ ಮಾಡಲಾಗಿದೆ, ಅವಳಿ ತಾಲೂಕಿನ ಏಳು ಕೆರೆಗಳ ಹೂಳೆತ್ತುವ ಕಾರ್ಯ ಮಾಡಲಾಗಿದೆ, ವಿಶೇಷಚೇತನರಿಗೆ ವೀಲ್ ಚೇರ್ ಕೊಡಲಾಗಿದೆ, ನಿರ್ಗತಿಕರಿಗೆ ಪ್ರತೀ ತಿಂಗಳು ಸಾವಿರ ರೂ ಮಾಶಾಸನ ಕೊಡಲಾಗುತ್ತಿದೆ, ಮನೆ ಕಟ್ಟಿಸಿ ಕೊಡಲಾಗುತ್ತಿದೆ. ದೇವಸ್ಥಾನಗಳ ಜೀರ್ಣೋದ್ದಾರ ಕಾರ್ಯಕ್ಕೆ ಧನ ಸಹಾಯ ಮಾಡಲಾಗಿದೆ, ಹೀಗೆ ಹತ್ತು ಹಲವು ಸಮಾಜ ಉಪಯೋಗಿ ಕಾರ್ಯಗಳ ಮೂಲಕ ಧರ್ಮಸ್ಥಳ ಸಂಸ್ಥೆ ನೆರವಾಗಿದೆ ಎಂದು ಸತೀಶ್ ಗಾಂಮ್ಕರ್ ಹೇಳಿದರು. ಅನ್ನದಾನೀಶ್ವರ ಶಾಖಾ ಮಠದ ಮಹದೇವ ಸ್ವಾಮೀಜಿಗಳು ಮಾತನಾಡಿ, ದಾನ ಧರ್ಮದ ಕಾರ್ಯಗಳಿಗೆ ಧರ್ಮಸ್ಥಳ ಸಂಸ್ಥೆ ಹೆಸರಾಗಿದೆ. ಬಡವರು, ದುರ್ಬಲರಿಗೆ ಆರ್ಥಿಕ ನೆರವು ಕೊಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು. ಈ ಸಂದರ್ಭದಲ್ಲಿ ಮೇಲ್ವಿಚಾರಕ ಶ್ರೀಶೈಲ್, ಪತ್ರಕರ್ತ ಧ್ವನಿ ಸಂಘದ ಗೌ. ಅಧ್ಯಕ್ಷ ಮಹೇಶ್ ಕಲ್ಮಠ, ಸಂಸ್ಥೆ ಸಿಬ್ಬಂದಿಗಳು ಉಪಸ್ಥಿತರಿದ್ದರು.



ರಥಸಪ್ತಮಿ ಪ್ರಯುಕ್ತ ಕೋಲಾರ ನಗರದ ಐತಿಹಾಸಿಕ ಪ್ರಸಿದ್ಧ ಸೋಮೇಶ್ವರ ದೇವಾಲಯದ ಆವರಣದಲ್ಲಿ ಮಂಗಳವಾರ ಬೆಳಿಗ್ಗೆ ಯೋಗ ಬಂಧುಗಳು 108 ಸೂರ್ಯ ನಮಸ್ಕಾರಗಳಲ್ಲಿ ಪಾಲ್ಗೊಂಡಿದ್ದರು. ಯೋಗ ಹಿರಿಯ ಗುರುಗಳಾದ ಬಿಸಪ್ಪಗೌಡ, ರಾಮಕೃಷ್ಣ, ಸೀನಣ್ಣ, ರವಿ ಮುಂತಾದ ಪ್ರಮುಖರು ಹಾಜರಿದ್ದರು

# ವಿದ್ಯಾರ್ಥಿಗಳು ಶೈಕ್ಷಣಿಕ ಜೀವನದಲ್ಲಿ ಸಿಗುವಂತಹ ಅವಕಾಶಗಳನ್ನು ಸದುಪಯೋಗ ಮಾಡಿಕೊಳ್ಳಿ




**ವಿಜಯಪುರ:** ವಿದ್ಯಾರ್ಥಿಗಳು ಶೈಕ್ಷಣಿಕ ಜೀವನದಲ್ಲಿ ಸಿಗುವಂತಹ ಎಲ್ಲಾ ಅವಕಾಶಗಳನ್ನು ಸದುಪಯೋಗ ಮಾಡಿಕೊಳ್ಳುವ ಕಡೆಗೆ ಹೆಚ್ಚು ಗಮನಹರಿಸಬೇಕು ಎಂದು ವಿಸ್ಡಂ ಆಂಗ್ಲ ಶಾಲೆಯ ಅಧ್ಯಕ್ಷ ನಿಜಾಂಪಾಷ ಹೇಳಿದರು.

ವಿಜಯಪುರ ಪಟ್ಟಣದ ಮಂಡಿಬೆಲೆ ರಸ್ತೆಯಲ್ಲಿರುವ ವಿಸ್ಡಂ ಶಾಲೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಾಲೆಯಲ್ಲಿ ಶಿಕ್ಷಕರು ಮಾಡುವ ಪಾಠಪ್ರವಚನಗಳ ಕಡೆಗೆ ಗಮನಹರಿಸಬೇಕು. ಎಸ್.ಎಸ್.ಎಲ್.ಸಿ ಒಂದು ದೊಡ್ಡ ಜವಾಬ್ದಾರಿ ವಿದ್ಯಾರ್ಥಿಗಳು ಪಡೆದುಕೊಂಡಿರುವ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಬೇಕು. ಜೀವನದಲ್ಲಿ ಸವಾಲುಗಳನ್ನು ಸಮರ್ಥವಾಗಿ ಎದುರಿಸುವಂತಹ ಸಾಮರ್ಥ್ಯವನ್ನು ಗಳಿಸಿಕೊಂಡು ಮುಂದೆ ಸಾಗಬೇಕು. ಉತ್ತಮ ವ್ಯಕ್ತಿತ್ವ ರೂಢಿಸಿಕೊಂಡು ನಿಗದಿತ ಗುರಿ ಸಾಧಿಸುವ ಕಡೆಗೆ ಚಿಂತನೆ ನಡೆಸಿ, ಎಸ್.ಎಸ್.ಎಲ್.ಸಿ ಪ್ರಮುಖ ಘಟ್ಟವಾಗಿದ್ದು, ಅದನ್ನು ದಾಟಲು ಅಗತ್ಯವಿರುವ ತಯಾರಿ ಮಾಡಿಕೊಳ್ಳುವ ಕಡೆಗೆ ಗಮನ ಕೇಂದ್ರೀಕರಿಸಬೇಕು. ನಿರ್ಧಿಷ್ಟವಾದ ಗುರಿಯನ್ನು ಇಟ್ಟುಕೊಂಡು ಅಭ್ಯಾಸ ಮಾಡುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನಿರ್ದೇಶಕ ತೌಸಿಫ್ ಪಾಷ ಮಾತನಾಡಿ, ಶಿಕ್ಷಣ ದೊಡ್ಡ ಆಸ್ತಿ, ಅದನ್ನು ಸಂಪಾದಿಸಿಕೊಂಡವರು ಜೀವನದಲ್ಲಿ ಎಂದಿಗೂ ವಿಫಲರಾಗುವುದಿಲ್ಲ. ಮಕ್ಕಳ ಶೈಕ್ಷಣಿಕ ಪ್ರಗತಿಯತ್ತ ಸಾಗಲು ಪೋಷಕರು ಅವರಿಗೆ ಉತ್ತಮ ಪ್ರೋತ್ಸಾಹ ನೀಡಬೇಕು ಎಂದರು.

ಶಾಲೆಯು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಪ್ರಾಂಶುಪಾಲ ಥಾಮಸ್ ರೆಮಿಜಿಯಸ್ ಹಾಗೂ ಶಾಲೆಯ ಶಿಕ್ಷಕರು, ಸಿಬ್ಬಂದಿ ಹಾಜರಿದ್ದರು.



ನಾಗಮಂಗಲ ತಾಲೂಕು ಬಿಂಡಗನವಿಲೆಯ ಶ್ರೀ ಚನ್ನಕೇಶವ ಗರುಡ ದೇವಸ್ಥಾನದ ವತಿಯಿಂದ ಫೆ.4 ರಿಂದ 15 ರವರೆಗೆ ವಿವಿಧ ಉತ್ಸವ ಕಾರ್ಯಕ್ರಮಗಳು ಜರುಗಲಿದೆ.

# ಗ್ರಾ.ಪಂ. ಪ್ರಭಾರಿ ಅಧ್ಯಕ್ಷರಾಗಿ ಚಿತ್ರ ಆಯ್ಕೆ

ಮಾಗಡಿ : ತಾಲೂಕಿನ ಹಂಚಿಕುಪ್ಪೆ ಗ್ರಾ.ಪಂ. ಪ್ರಭಾರಿ ಅಧ್ಯಕ್ಷರಾಗಿ ಚಿತ್ರ ಆಯ್ಕೆಯಾಗಿದ್ದಾರೆ.

ಶಹನಾಜು ಭಾನು ರಾಜೀನಾಮೆಯಿಂದ ತೆರವಾದ ಹಿನ್ನಲೆಯಲ್ಲಿ ಉಪಾಧ್ಯಕ್ಷರಾಗಿದ್ದ ಚಿತ್ರ ಅವರನ್ನು ಸೋಮವಾರ ಪ್ರಭಾರಿ ಅಧ್ಯಕ್ಷರನ್ನಾಗಿ ಸದಸ್ಯರ ಸಮ್ಮುಖದಲ್ಲಿ ಆಯ್ಕೆಮಾಡಲಾಯಿತು. ಚಿತ್ರ ಪ್ರಭಾರಿ ಅಧ್ಯಕ್ಷರಾಗುತಿದ್ದಂತೆ ಕಾಂಗ್ರೆಸ್ ಮುಖಂಡರು, ಸದಸ್ಯರು ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು.

ನೂತನ ಪ್ರಭಾರಿ ಅಧ್ಯಕ್ಷೆ ಚಿತ್ರ ಮಾತನಾಡಿ, ಕರಲಮಂಗಲ ವಾರ್ಡ್‌ನ ಜನತೆ ಹೆಚ್ಚು ಮತಗಳಿಂದ ಸದಸ್ಯನಾಗಿ ಆಯ್ಕೆ ಮಾಡಿದರು ಶಾಸಕರು ಉಪಾಧ್ಯಕ್ಷರನ್ನಾಗಿ ಮಾಡಿ ಪ್ರಭಾರ ಅಧ್ಯಕ್ಷರನ್ನಾಗಿ ಆಯ್ಕೆಮಾಡಲು ಸಹಕಾರ ನೀಡಿದ್ದಾರೆ ಅವರ ಭರವಸೆಗೆ ಪೂರಕವಾಗಿ ಗ್ರಾಮೀಣ ಭಾಗದಲ್ಲಿನ ಸಮಸ್ಯೆಗಳನ್ನು ಬಗೆಹರಿಸಿ ಮಾದರಿ ಗ್ರಾ.ಪಂ.ಮಾಡಲು ಶ್ರಮಿಸುವುದಾಗಿ ತಿಳಿಸಿದರು. ಬೇಸಿಗೆ ಸಮೀಪಿಸುತ್ತಿದ್ದು ಕುಡಿಯುವ ನೀರಿಗೆ ಆಹಾಕಾರ ಉಂಟಾಗದಂತೆ ಅಧಿಕಾರಿಗಳ ಸಭೆ ಕರೆದು ಸೂಕ್ತ ಕ್ರಮಕೈಗೊಳ್ಳಲಾಗುವುದು. ಗ್ರಾ.ಪಂ. ವ್ಯಾಪ್ತಿಯ ಪ್ರತಿ ಗ್ರಾಮಗಳಿಗೆ ಅಧಿಕಾರಿಗಳೊಂದಿಗೆ ಬೇಟಿ ನೀಡಿ ಸ್ಥಳದಲ್ಲೆ ಸಮಸ್ಯೆಗಳನ್ನು ಬಗೆಹರಿಸಲಾಗುವುದು. ಶಾಶ್ವತ ಸಮಸ್ಯೆಗಳು ಕಂಡು ಬಂದರೆ ಶಾಸಕ ಎಚ್.ಸಿ.ಬಾಲಕೃಷ್ಣ ಅವರ ಗಮನಕ್ಕೆ ತಂದು ತುರ್ತಾಗಿ ಸಮಸ್ಯೆ ಬಗೆಹರಿಸುವ ಕೆಲಸ ಮಾಡುವುದಾಗಿ ತಿಳಿಸಿದರು.

ಗ್ರಾ.ಪಂ. ಮಾಜಿ ಅಧ್ಯಕ್ಷ, ಸದಸ್ಯ ವಿ.ಸಿ.ಜಯಣ್ಣ ಮಾತನಾಡಿ, ಬೇಸಿಗೆ ವೇಳೆ ನಾಗರೀಕರಿಗೆ ಕುಡಿಯುವ ನೀರು ಎದುರಿಸಲು ಈಗಾಗಲೇ 15 ನೇ ಹಣಕಾಸು ಯೋಜನೆಯಡಿ ಆಕ್ಷನ್ ಪ್ಲಾನ್ ಮಾಡಲಾಗಿದೆ. ಗ್ರಾ.ಪಂ. ವ್ಯಾಪ್ತಿಯ ಪ್ರತಿ ಗ್ರಾಮಗಳಲ್ಲಿನ ವಸತಿ ರಹಿತರಿಗೆ ವಸತಿ ಕಲ್ಪಿಸಲು ಕ್ರಮಕೈಗೊಳ್ಳಲಾಗಿದೆ ಎಂದರು.

# ಕರ್ನಾಟಕ ಹಾಲು ಮಂಡಳಿಯ ಎಲ್ಲಾ ಗುತ್ತಿಗೆ ನೌಕರರನ್ನು ಕಾಯಂಗೊಳಿಸಲು ಮನವಿ



**ಶಿಡ್ಲಘಟ್ಟ :** ಕರ್ನಾಟಕ ಹಾಲು ಮಹಾಮಂಡಳಿ ಮತ್ತು ಜಿಲ್ಲಾ ಹಾಲು ಒಕ್ಕೂಟಗಳು ಈ ತೀರ್ಪಿನ ವಿರುದ್ಧ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಸಿದ್ಧತೆ ನಡೆಸುತ್ತಿವೆ,ಇದು ಕೇವಲ ಕರ್ನಾಟಕ ಹಾಲು ಮಂಡಳಿ ಹಾಗೂ ಜಿಲ್ಲಾ ಒಕ್ಕೂಟಗಳ ಹಣ ಪೋಲು ಮಾಡುವ ಪ್ರಯತ್ನವಷ್ಟೇ ಎಂಬುದನ್ನು ಸಿ.ಎಂ.ಸಿದ್ದರಾಮಯ್ಯ ಅವರಿಗೆ ಮನವರಿಕೆ ಮಾಡಿಕೊಟ್ಟೆವು ಎಂದು ಹಿಂದ್ ಮಜ್ದೂರ್ ಕಿಸಾನ್ ಪಂಚಾಯತ್ (ಎಚ್‌ಎಂಕೆಪಿ) ನ ರಾಷ್ಟ್ರೀಯ ಅಧ್ಯಕ್ಷ ಹಾಗೂ ಕೆಎಂಎಫ್ ಎಂಪ್ಲಾಯಿಸ್ ಫೆಡರೇಷನ್‌ನ ರಾಜ್ಯ ಪ್ರಧಾನ ಕಾರ್ಯದರ್ಶಿ ಭಕ್ತರಹಳ್ಳಿ ಎಲ್.ಕಾಳಪ್ಪ ತಿಳಿಸಿದರು.

ತಾಲ್ಲೂಕಿನ ಭಕ್ತರಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬೆಂಗಳೂರಿನ ಗೃಹ ಕಚೇರಿ ಕೃಷ್ಣಾದಲ್ಲಿ ಭೇಟಿ ಮಾಡಿ ಕರ್ನಾಟಕ ಹಾಲು ಮಂಡಳಿಯ ಎಲ್ಲಾ ಗುತ್ತಿಗೆ ನೌಕರರನ್ನು ಕಾಯಂಗೊಳಿಸಲು ಬೆಂಗಳೂರಿನ ಔದ್ಯಮಿಕ ನ್ಯಾಯ ಮಂಡಳಿ ನೀಡಿರುವ ತೀರ್ಪು ಜಾರಿಗೆ ಮನವಿ ಮಾಡಿದ್ದಾರೆ.

ಕರ್ನಾಟಕ ಹಾಲು ಮಹಾ ಮಂಡಳಿ ಹಾಗೂ ಜಿಲ್ಲಾ ಒಕ್ಕೂಟಗಳ ಆಡಳಿತ ಮಂಡಳಿಗಳು ಈವರೆಗೆ ಕೈಗೊಂಡಿರುವ ಅನೇಕ ಕಾನೂನುಬಾಹಿರ ತೀರ್ಮಾನಗಳ ವಿರುದ್ಧ ನ್ಯಾಯಾಲಯಗಳಲ್ಲಿ ಪ್ರಶ್ನಿಸಲಾದ ಪ್ರಕರಣಗಳಲ್ಲಿ ಆಡಳಿತ ಮಂಡಳಿಗಳು ಗೆದ್ದ ಇತಿಹಾಸವೇ ಇಲ್ಲ. ಈ ಪ್ರಕರಣದಲ್ಲೂ ಕೂಡ ಸೋಲು ಕಟ್ಟಿಟ್ಟ ಬುತ್ತಿ ಈ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸದೆ ಯಥಾವತ್ತಾಗಿ ಜಾರಿಗೆ ಕರ್ನಾಟಕ ಹಾಲು ಮಂಡಳಿಗೆ ನಿರ್ದೇಶನ ನೀಡುವಂತೆ ಒತ್ತಾಯಿಸಿದ್ದೇನೆ ಎಂದರು.

ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ಬಹುತೇಕ ನೌಕರರು ಪರಿಶಿಷ್ಟ ಜಾತಿ ಮತ್ತು ವರ್ಗದವರಾಗಿದ್ದು, ಕಳೆದ ಸುಮಾರು 15–20 ವರ್ಷಗಳಿಂದ ಈ ಸಂಸ್ಥೆಗಾಗಿ ದುಡಿಯುತ್ತಿದ್ದಾರೆ ಅವರಲ್ಲಿ ಅನೇಕ ಮಂದಿ ಈಗಾಗಲೇ ನಿಧನರಾಗಿದ್ದಾರೆ. ಬಹುತೇಕ ಮಂದಿ ಕೆಲಸ ಬಿಟ್ಟು ಹೋಗಿದ್ದಾರೆ,ಉಳಿದಿರುವ ಸುಮಾರು 1,500 ಮಂದಿಯನ್ನು ಕಾಯಂಗೊಳಿಸುವರೆಂಬ ನಿರೀಕ್ಷೆಯಲ್ಲಿದ್ದಾರೆ, ಕರ್ನಾಟಕ ಹಾಲು ಮಂಡಳಿ ಆಡಳಿತ ವರ್ಗ ಈ ಪ್ರಕರಣದಲ್ಲಿ ಮಾನವೀಯತೆ, ಸಹಾನುಭೂತಿ ತೋರಬೇಕೆಂದು ಫೆಡರೇಷನ್ ಒತ್ತಾಯಿಸಿದೆ ಎಂದರು.

# ಮತ ಚಲಾಯಿಸಿ ಜೆಡಿಎಸ್‌ಗೆ ಶಕ್ತಿ ತುಂಬಿ



**ಕೆ.ಆರ್.ಪೇಟೆ:** ಇದೇ ಎಂಟನೇ ತಾರೀಖು ನಡೆಯಲಿರುವ ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಪಕ್ಷದ ಅಭ್ಯರ್ಥಿಗಳಿಗೆ ಮತ ಚಲಾಯಿಸುವ ಮೂಲಕ ಜೆಡಿಎಸ್ ಪಕ್ಷಕ್ಕೆ ಹೆಚ್ಚಿನ ಶಕ್ತಿ ತುಂಬಬೇಕು ಎಂದು ಶಾಸಕ ಹೆಚ್.ಟಿ.ಮಂಜು ಕರೆ ನೀಡಿದರು.

ಅವರು ಪಟ್ಟಣದ ಜೆಡಿಎಸ್ ಕಛೇರಿಯಲ್ಲಿ ಮುಂಬರುವ ಪಿಎಲ್‌ಡಿ ಬ್ಯಾಂಕ್ ಚುನಾವಣಾ ಸಂಬಂಧ ಕಾರ್ಯಕರ್ತರೊಂದಿಗೆ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಜೆಡಿಎಸ್ ಪಕ್ಷದಲ್ಲಿ ಶಿಸ್ತಿನ ಸಿಪಾಯಿಗಳಂತೆ ಕಾರ್ಯಕರ್ತರು ಇದ್ದಾರೆ. ಮತದಾರ ಬಂಧುಗಳು ಪಿಎಲ್‌ಡಿ ಬ್ಯಾಂಕಿನ ಆಡಳಿತ ಮಂಡಳಿಯ ಚುಕ್ಕಾಣಿ ಹಿಡಿಯಲು ಸಹಕಾರ ನೀಡಬೇಕು. ಇದಕ್ಕಾಗಿ ಪಕ್ಷದ ಅಭ್ಯರ್ಥಿಗಳಿಗೆ, ಮುಖಂಡರುಗಳಿಗೆ ಸಹಕಾರ, ಬೆಂಬಲ ನೀಡಲು ನಾನು ಮತ್ತು ಪಕ್ಷ ಸಿದ್ದರಿದ್ದೇವೆ. ಮುಖಂಡರುಗಳಲ್ಲಿ ಏನೇ ಸಣ್ಣಮಟ್ಟ ಭಿನ್ನಾಭಿಪ್ರಾಯಗಳಿದ್ದರೂ ಕುಳಿತು ಮಾತನಾಡಿಕೊಂಡು ನಿಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಂಡು ಹೋಗುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿಯಾಗಿದೆ, ಮುಂದೆ ನಮ್ಮ ಮುಂದೆ ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ಟಿಎಪಿಸಿಎಂಎಸ್, ಸೊಸೈಟಿಗಳು, ಗ್ರಾಮಪಂಚಾಯಿತಿ, ಎಪಿಎಂಸಿ ಸೇರಿದಂತೆ ಸರಣಿ ಚುನಾವಣೆಗಳಿವೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷವನ್ನು ಬಲಪಡಿಸಿದರೆ ಎಲ್ಲರಿಗೂ ಅಧಿಕಾರ ಸಿಗಲಿದ್ದು ಮುಂದಿನ ಐದು ವರ್ಷಗಳ ಕಾಲ ಅಧಿಕಾರವನ್ನು ಅನುಭವಿಸಬಹುದಾಗಿದೆ. ಮುಖಂಡರುಗಳು ಹಾಗೂ ಕಾರ್ಯಕರ್ತರು ಯಾವುದೇ ಆತಂಕಕ್ಕೆ ಒಳಗಾಗದೇ ಚುನಾವಣೆಯಲ್ಲಿ ಪಕ್ಷಕ್ಕೆ ನಿಮ್ಮ ಶಕ್ತಿ ಮೀರಿ ಶ್ರಮಿಸಬೇಕು ಎಂದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಜಾನಕೀರಾಮು, ಜೆಡಿಎಸ್ ಕಾನೂನು ಘಟಕದ ಕಾರ್ಯದರ್ಶಿ ಕುರುಬಹಳ್ಳಿನಾಗೇಶ್, ಪ್ರಥಮದರ್ಜೆ ಗುತ್ತಿಗೆದಾರ ಹಾಗೂ ಜೆಡಿಎಸ್ ಮುಖಂಡ ಎ.ಆರ್. ರಘು, ಹುಲ್ಲೇಗೌಡ, ಸ್ವಾಮಿಗೌಡ, ತಾಪಂ ಮಾಜಿಸದಸ್ಯ ಮೋಹನ್, ಸಂಜೀವಪ್ಪ, ವಕೀಲ ಧನಂಜಯ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

# ಅಧ್ಯಕ್ಷರಾಗಿ ಕಮಲಮ್ಮ ಅವಿರೋಧ ಆಯ್ಕೆ

**ಮಾಗಡಿ :** ತಾಲೂಕಿನ ಕೋರಮಂಗಲ ಹಾಲು ಉತ್ಪಾದಕ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ಕಮಲಮ್ಮ ರಾಜಣ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬೆಟ್ಟಸ್ವಾಮಿ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಕಮಲಮ್ಮ ರಾಜಣ್ಣ ಒರತು ಪಡಿಸಿ ಉಳಿದವರು ಯಾರು ನಾಮಪತ್ರ ಸಲ್ಲಿಸದ ಕಾರಣ ಕಮಲಮ್ಮ ರಾಜಣ್ಣ ಅವರನ್ನು ಚುನಾವಣಾಧಿಕಾರಿ ವೆಂಕಟೇಶ್ ಅವಿರೋಧವಾಗಿ ಆಯ್ಕೆಮಾಡಿದರು. ಈ ವೇಳೆ ಹಾಲು ಉತ್ಪಾದಕರು ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು. ನೂತನ ಅಧ್ಯಕ್ಷೆ ಕಮಲಮ್ಮ ಮಾತನಾಡಿ, ಕಳೆದ 17 ವರ್ಷದ ಹಿಂದೆ ಪ್ರಾರಂಭವಾದ ಈ ಡೇರಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ. 50 ಕ್ಕೂ ಹೆಚ್ಚು ಮಂದಿ ಹಾಲು ಉತ್ಪಾದಕರಿದ್ದು ಪ್ರತಿನಿತ್ಯ 600 ಲೀಟರು ಹಾಲು ಪೂರೈಕೆಮಾಡುತ್ತಿದ್ದಾರೆ. 10 ಲಕ್ಷರೂ ಲಾಭಹೊಂದಿದ್ದು ಶಾಸಕ ಎಚ್.ಸಿ.ಬಾಲಕೃಷ್ಣ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಎಚ್.ಎನ್.ಅಶೋಕ್ ಹಾಗೂ ಎಲ್ಲರ ಸಹಕಾರದಿಂದ ಇನ್ನೊಂದು ವರ್ಷದ ಒಳಗೆ ಡೇರಿ ಕಟ್ಟಡ ನಿರ್ಮಿಸಲಾಗುವುದು. ಸರಕಾರ ಹಾಗೂ ಬಮೂಲ್ ವತಿಯಿಂದ ಸಿಗುವ ಸೌಲತ್ತುಗಳನ್ನು ಉತ್ಪಾದಕರಿಗೆ ಸಿಗುವ ರೀತಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು. ಕೆಂಪೇಗೌಡ ಆಸ್ಪತ್ರೆ ಅಧ್ಯಕ್ಷ ಎಚ್.ಎನ್. ಅಶೋಕ್ ಮಾತನಾಡಿ, ಗ್ರಾಮದಲ್ಲಿ ಡೇರಿ ಇದ್ದರು ಕೆಲವರು ಖಾಸಗಿ ಹಾಗೂ ಚಕ್ರಭಾವಿ ಡೇರಿಗಳಿಗೆ ಹಾಲು ಪೂರೈಸುತ್ತಿದ್ದರು ಈ ಸಂಬಂಧ ಕುಳಿತು ಚರ್ಚಿಸಿ ಪ್ರತಿಯೊಬ್ಬರೂ ಗ್ರಾಮದ ಡೇರಿಗೆ ಹಾಲು ಪೂರೈಕೆಮಾಡುವಂತೆ ಮನವಿ ಮಾಡಲಾಗಿದೆ. ಈ ಹಿಂದಿನ ಕಾರ್ಯದರ್ಶಿಗಳು ಕಟ್ಟಡ ನಿರ್ಮಿಸಲು ಒಲವು ತೋರದ ಹಿನ್ನಲೆಯಲ್ಲಿ ಕಟ್ಟಡ ನಿರ್ಮಿಸಲು ಸಾಧ್ಯವಾಗಿಲ್ಲ. ಗ್ರಾಮಠಾಣಗಳಲ್ಲಿ ಡೇರಿ ನಿರ್ಮಿಸಲು ಗ್ರಾಮಪಂಚಾಯ್ತಿ ಮಂಜೂರಾತಿ ನೀಡಲು ಅಧಿಕಾರ ಇತ್ತು ಈಗ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಮಂಜೂರಾತಿ ಪಡೆಯಬೇಕಾಗಿರುವ ಹಿನ್ನಲೆಯಲ್ಲಿ ಕೂಡಲೇ ಅನುಮತಿ ಪಡೆದು ಡೇರಿ ಕಟ್ಟಡ ನಿರ್ಮಿಸಲಾಗುವುದು. ತಾ.ಪಂ. ಮಾಜಿ ಸದಸ್ಯೆ ರತ್ನಮ್ಮ ಮಾತನಾಡಿ, ಗ್ರಾಮದಲ್ಲಿ ಒಂದು ದೇವಾಲಯ, ಹಾಲಿನ ಡೇರಿಯಿದ್ದರೆ ಆ ಗ್ರಾಮ ಅಭಿವೃದ್ಧಿಯತ್ತ ಸಾಗಿದೆ ಎಂದರ್ಥ. ನಷ್ಟದಲ್ಲಿದ್ದ ಡೇರಿಯನ್ನು ಗ್ರಾಮಸ್ಥರೆಲ್ಲರೂ ಸೇರಿ ಲಾಭದತ್ತ ಕೋಡೋಯ್ದು ಉತ್ಪಾದಕರಿಗೆ ನೆರವಾಗಿದೆ. ಹಾಲಿನ ದರ ಕಡಿಮೆ ಇದ್ದು ಪಶು ಆಹಾರ ಸೇರಿದಂತೆ ದಿನನಿತ್ಯ ಉಪಯೋಗಿಸುವ ವಸ್ತುಗಳು ದಿನೆ ,ದಿನೇ ಹೆಚ್ಚಳದಿಂದ ಉತ್ಪಾದಕರು ನಷ್ಟ ಅನುಭವಿಸಿ ಹೈನುಗಾರಿಕೆ ಬಿಡುವ ಹಂತಕ್ಕೆ ತಲುಪಿದ್ದಾರೆ ಈ ಸಂಬಂಧ ಸರಕಾರ ಪ್ರತಿ ಲೀಟರು ಹಾಲಿಗೆ 5 ರೂ ಏರಿಕೆ ಮಾಡಿ ಆ ಹಣವನ್ನು ನೇರವಾಗಿ ಉತ್ಪಾದಕರಿಗೆ ನೀಡಿದರೆ ಮಾತ್ರ ಹೈನುಗಾರಿಕೆ ಉಳಿಯಲು ಸಾಧ್ಯ ಎಂದರು.

# ಅಕ್ಕಿರಾಂಪುರ ಗ್ರಾಪಂ ಸದಸ್ಯರಿಂದ ರಾಜೀನಾಮೆ ಪರ್ವ



**ಕೊರಟಗೆರೆ:** ಅಕ್ಕಿರಾಂಪುರ ಗ್ರಾಪಂಗೆ 15ದಿನಕ್ಕೊಮ್ಮೆ ಮಾತ್ರ ಪಿಡಿಓ ಬರ್ತಾರೆ, ಸಾಮಾನ್ಯ ಸಭೆ ಮಾಡದೇ ಪಿಡಿಓ ಮನೆಯ ಬಳಿ ಹೋಗಿ ಸದಸ್ಯರ ಸಹಿ ಪಡಿತಾರೆ, ಅನುದಾನದ ಲೆಕ್ಕ ಕೇಳಿದ್ರೇ ಗ್ರಾಪಂಯ ಪಿಡಿಓ ಮತ್ತು ಅಧ್ಯಕ್ಷೆ ಉಡಾಫೆ ಉತ್ತರ ನೀಡ್ತಾರೆ ಎಂದು ಆರೋಪಿಸಿ ಪ್ರತಿಭಟನೆ ನಡೆಸಿರುವ ಘಟನೆ ಮಂಗಳವಾರ ನಡೆದಿದೆ.

ಕೊರಟಗೆರೆ ತಾಲೂಕು ಹೊಳವನಹಳ್ಳಿ ಹೋಬಳಿ ಅಕ್ಕಿರಾಂಪುರ ಗ್ರಾಪಂನ ಮಧುಸೂಧನ್ ಮತ್ತು ಲೋಕೇಶ್ ಎಂಬ ಸದಸ್ಯರು ತಮ್ಮ ಸದಸ್ಯತ್ವ ಸ್ಥಾನಕ್ಕೆ ರಾಜಿನಾಮೆ ನೀಡಿ ಅಧ್ಯಕ್ಷೆಯ ಪತಿ ನಾಗರಾಜು ಮತ್ತು ಪಿಡಿಓ ರವಿಕುಮಾರ್ ವಿರುದ್ದ ತಕ್ಷಣ ಶಿಸ್ತುಕ್ರಮ ಕೈಗೊಳ್ಳುವಂತೆ ಗ್ರಾಪಂ ಕಚೇರಿ ಮುಂಭಾಗ ಸ್ಥಳೀಯರ ಜೊತೆಗೂಡಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಅಕ್ಕಿರಾಂಪುರ ಗ್ರಾಪಂ ಸದಸ್ಯ ಮಧುಸೂಧನ್ ಮಾತನಾಡಿ ಗ್ರಾಪಂ ಸಾಮಾನ್ಯ ಸಭೆ ಮಾಡಿ 6 ತಿಂಗಳಾಗಿದೆ. ಅಭಿವೃದ್ದಿಯ ಬಗ್ಗೆ ಪ್ರಶ್ನಿಸಿದ್ರೆ ಗ್ರಾಪಂ ಪಿಡಿಓ ಉಡಾಫೆ ಉತ್ತರ ನೀಡ್ತಾರೆ, ಜನರಿಗೆ ಉತ್ತರ ಕೊಡಲು ಆಗದೇ ರಾಜಿನಾಮೇ ಕೊಡುವಂತಹ ದುಸ್ಥಿತಿ ಬಂದಿದೆ, ಗೃಹಸಚಿವ ಡಾ.ಜಿ.ಪರಮೇಶ್ವರ ಮತ್ತು ಸರಕಾರದ ಕಾರ್ಯದರ್ಶಿ ಅತೀಕ್ ಅಹಮ್ಮದ್ ಅವರ ಗಮನಕ್ಕೆ ತರುವಂತ ಕೆಲಸ ಮಾಡುತ್ತೇವೆ ಎಂದರು.

ಅಕ್ಕಿರಾಂಪುರ ಗ್ರಾಪಂ ಸದಸ್ಯ ಲೊಕೇಶ್ ಮಾತನಾಡಿ ಪಿಡಿಓ 15 ದಿನಕ್ಕೊಮ್ಮೆ ಮಾತ್ರ ಗ್ರಾಪಂಗೆ ಬರ್ತಾರೆ, ಜನರಿಗೆ ಸಮಸ್ಯೆ ಆದ್ರೆ ಕ್ಯಾಮೇನಹಳ್ಳಿಗೆ ಹೋಗ್ಬೇಕು, ಅಧ್ಯಕ್ಷೆಯ ಪತಿ ಮಾತು ಕೇಳಿ ಪಿಡಿಓ ನರೇಗಾ ಕ್ರಿಯಾ ಯೋಜನೆ ಮಾಡ್ತಾರೆ, ಪಿಡಿಓ ಮತ್ತು ಅಧ್ಯಕ್ಷರ ಬಗ್ಗೆ ಜಿಪಂ ಮತ್ತು ತಾಪಂಗೆ ದೂರು ನೀಡಿದ್ರು ಪ್ರಯೋಜನ ಆಗಿಲ್ಲ, ಅದಕ್ಕಾಗಿಯೇ ನಮ್ಮ ಸ್ಥಾನಕ್ಕೆ ರಾಜಿನಾಮೆ ನೀಡಿದ್ದೇವೆ ಎಂದರು.

## ತನಿಖೆಗೆ ತಾಪಂ ಇಓ ಆದೇಶ

ಪಿಡಿಓ ಮತ್ತು ಅಧ್ಯಕ್ಷರ ಬಗ್ಗೆ ಏನೇ ಸಮಸ್ಯೆ ಇದ್ರು ಲೀಖಿತ ರೂಪದಲ್ಲಿ ದೂರು ನೀಡಿದ್ರೇ ತ್ವರಿತವಾಗಿ ತನಿಖೆ ಮಾಡಿಸುತ್ತೇನೆ, ಯಾರೇ ತಪ್ಪು ಮಾಡಿದ್ರು ಅವರ ವಿರುದ್ದ ಕ್ರಮಕ್ಕೆ ಜಿಪಂ ಸಿಇಓಗೆ ಬರೆಯುತ್ತೇನೆ, ಪ್ರತಿಭಟನೆ ಮಾಡುವುದರಿಂದ ಸಮಸ್ಯೆ ಬಗೆಹರಿಯೋದಿಲ್ಲ, ಪ್ರತಿಭಟನೆ ಕೈಬಿಟ್ಟು ಕಚೇರಿಯ ಒಳಗೆ ಬನ್ನಿ ನಿಮ್ಮ ಸಮಸ್ಯೆ ಹೇಳಿ ಎಂದು ಗ್ರಾಪಂ ಸದಸ್ಯರ ಮನವೊಲಿಸುವ ಪ್ರಯತ್ನ ಮಾಡಿದರು.

2020ರಿಂದ 2024ರ ವರೇಗಿನ ಕಂದಾಯ ವಸೂಲಾತಿ ಮಾಡಿರುವ 90ಪುಸ್ತಕಗಳೇ ಗ್ರಾಪಂಯಲ್ಲಿ ಇಲ್ವಂತೆ, 10ಲಕ್ಷಕ್ಕೂ ಅಧಿಕ ತೆರಿಗೆ ಹಣ ದುರುಪಯೋಗ ಮತ್ತು ಅಂಗಡಿ ಮಳಿಗೆಯ ಜೊತೆ ಸಂತೆ ಹರಾಜಿನ ಠೇವಣಿ ಹಣವು ಕಾಣೆಯಾಗಿದೆ, ಗ್ರಾಪಂ ಸದಸ್ಯರು ದಾಖಲೆ ಬಗ್ಗೆ ಪ್ರಶ್ನಿಸಿದ್ರೇ ಮಾಹಿತಿ ಹಕ್ಕಿನಲ್ಲಿ ಪಡೆದುಕೊಳ್ಳಿ ಅಂತಾರೆ, ಜಿಪಂ ಮತ್ತು ತಾಪಂಗೆ ದೂರು ನೀಡಿದ್ರು ಪ್ರಯೋಜನಾ ಆಗಿಲ್ಲ ಅಂತಾರೆ ಅಲ್ಲಿನ ಗ್ರಾಪಂ ಸದಸ್ಯರು.

ಅಕ್ಕಿರಾಂಪುರ ಮತ್ತು ಕ್ಯಾಮೇನಹಳ್ಳಿ ಗ್ರಾಪಂನಲ್ಲಿ ಒತ್ತಡದ ನಡುವೆಯು ಜನರ ಕೆಲಸ ಮಾಡ್ತಿದ್ದೀನಿ, ಕಂದಾಯ ವಸೂಲಾತಿಯ ಹಳೆಯ ದಾಖಲಾತಿಯ ಬಗ್ಗೆ ನನಗೇನು ಗೊತ್ತಿಲ್ಲ, ಅಂಗಡಿ ಮಳಿಗೆ ಮತ್ತು ಸಂತೆ ಹರಾಜು ಪ್ರಕ್ರಿಯೆ ತ್ವರಿತವಾಗಿ ಆಗುತ್ತೆ, ನನ್ನ ಅವಧಿಯಲ್ಲಿ ಯಾವುದೇ ಅಕ್ರಮ ನಡೆದಿಲ್ಲ ಎಂದು ಪಿಡಿಓ ರವಿಕುಮಾರ್ ಹೇಳಿದ್ದಾರೆ.

# ರೈತರ ಖಾತೆಗೆ 48 ತಾಸಲ್ಲೇ ಬೆಂಬಲ ಬೆಲೆ ನೇರ ಜಮೆ



**ನವದೆಹಲಿ:** ರೈತರ ಖಾತೆಗೆ 48 ಗಂಟೆಗಳಲ್ಲೇ ಬೆಂಬಲ ಬೆಲೆ ಖರೀದಿ ಹಣ ನೇರ ಜಮೆಯಾಗುತ್ತದೆ. ವಿಳಂಬವಾಗುವ ಪ್ರಶ್ನೆಯೇ ಇಲ್ಲ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ಸಂಸತ್ ಅಧಿವೇಶನದಲ್ಲಿ ಇಂದು ಬಿಹಾರದ ಸಂಸದ ಉಪೇಂದ್ರ ಕುಶ್ವಾ ಅವರ ಪ್ರಶ್ನೆಗೆ ಉತ್ತರಿಸಿ, ರೈತರಿಂದ ಬೆಂಬಲ ಬೆಲೆಯಲ್ಲಿ ಧಾನ್ಯ ಖರೀದಿಸಿದ ಮೇಲೆ ಅಷ್ಟೇ ತ್ವರಿತವಾಗಿ ಅವರ ಖಾತೆಗೆ ನೇರವಾಗಿ ಹಣ ಜಮೆಯಾಗುತ್ತಿದೆ. ಇದರಲ್ಲಿ ಯಾವುದೇ ರೀತಿ ಲೋಪವಾಗುತ್ತಿಲ್ಲ ಎಂದು ಹೇಳಿದರು.

ಬೆಂಬಲ ಬೆಲೆಯಲ್ಲಿ ಧಾನ್ಯ ಖರೀದಿ ಆಅಕ ಮತ್ತು ಓಂಟಿ ಆಅಕ ಎರಡು ರೀತಿಯ ವ್ಯವಸ್ಥೆಯಲ್ಲಿ ನಡೆಯುತ್ತಿದೆ. ಓಂಟಿ ಆಅಕ ವ್ಯವಸ್ಥೆಯುಳ್ಳ ರಾಜ್ಯಗಳಲ್ಲಿ ಸಹ ತಕ್ಷಣವೇ ರೈತರ ಖಾತೆಗೆ ಹಣ ಜಮೆ ಮಾಡಲು ಆಯಾ ರಾಜ್ಯ ಸರ್ಕಾರಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ ಎಂದರು.

ರೈತರಿಗೆ ತೊಂದರೆ ಆಗಬಾರದು ಎಂಬುದು ಪ್ರಧಾನಮಂತ್ರಿ ಮೋದಿಜಿ ಅವರ ಆಶಯವಾಗಿದೆ. ಅದರಂತೆ ಕೇಂದ್ರ ಸರ್ಕಾರ ಈಅಖ ಮತ್ತು ಇತರೆ ಏಜೆನ್ಸಿ, ರಾಜ್ಯ ಸರ್ಕಾರಗಳ ಮೂಲಕ ಗೋಧಿ ಸೇರಿದಂತೆ ಬೆಂಬಲ ಬೆಲೆಯಲ್ಲಿ ಧಾನ್ಯ ಖರೀದಿ ಮಾಡುತ್ತಿದೆ. ಅಷ್ಟೇ ತ್ವರಿತವಾಗಿ ರೈತರ ಖಾತೆಗೆ ನೇರ ಹಣ ವರ್ಗಾವಣೆ ಮಾಡಲಾಗುತ್ತಿದೆ ಎಂದು ಹೇಳಿದರು.

ರೈತರ ಸಬಲೀಕರಣ ನಮ್ಮ ಸರ್ಕಾರದ ಬದ್ಧತೆಯಾಗಿದ್ದು, ಬೆಲೆ ಕುಸಿತದ ವೇಳೆ ಬೆಂಬಲ ಬೆಲೆಯಲ್ಲಿ ಧಾನ್ಯ ಖರೀದಿಸಿ ರೈತರಿಗೆ ಆರ್ಥಿಕ ಚೈತನ್ಯ ನೀಡುವ ಮೂಲಕ ಅವರ ಹಿತ ಕಾಪಾಡುವ ಕೆಲಸ ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ನಡೆದಿದೆ. ಇದರಲ್ಲೇನೂ ವ್ಯತ್ಯಾಸ, ಲೋಪವಾಗಲು ಸಾಧ್ಯವಿಲ್ಲ ಎಂದು ಹೇಳಿದರು.

ಬೆಂಬಲ ಬೆಲೆಯಲ್ಲಿ ಧಾನ್ಯ ಖರೀದಿ ಮತ್ತು ರೈತರ ಖಾತೆಗೆ ನೇರ ಹಣ ವರ್ಗಾವಣೆಯಲ್ಲಿ ಮಧ್ಯವರ್ತಿಗಳಿಗೆ ಅವಕಾಶವೇ ಇಲ್ಲ. ಇಂಥ ಯಾವುದೇ ದೂರುಗಳು ಬಂದಿಲ್ಲ. ತಮ್ಮ ಗಮನಕ್ಕೆ ಬಂದರೆ ತಕ್ಷಣ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಕಳೆದ ವರ್ಷಕ್ಕಿಂತ ಶೇ.10ರಷ್ಟು ಹೆಚ್ಚೇ ತೆರಿಗೆ ಹಂಚಿಕೆ ಮಾಡಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

2025–26ನೇ ಆರ್ಥಿಕ ವರ್ಷದಲ್ಲಿ ಕರ್ನಾಟಕಕ್ಕೆ 51,876 ಕೋಟಿ ತೆರಿಗೆ ಹಂಚಿಕೆ ಮಾಡಿದೆ ಎಂದಿದ್ದಾರೆ.

2014–15ರಲ್ಲಿ 24,789.78 ಕೋಟಿ ತೆರಿಗೆ ಹಂಚಿಕೆ ಆಗಿದ್ದರೆ, 2025–2 6ರ ಆರ್ಥಿಕ ವರ್ಷ ಇದಕ್ಕಿಂತ ಶೇ.108ರಷ್ಟು (51876 ಕೋಟಿ ರೂ.)ಅಧಿಕ ತೆರಿಗೆ ಹಂಚಿಕೆ ಮೊತ್ತವನ್ನು ಕರ್ನಾಟಕಕ್ಕೆ ಭರಿಸಲಾಗಿದೆ ಎಂದು ತಿಳಿಸಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಕರ್ನಾಟಕ ಅಭೂತಪೂರ್ವ ಬೆಳವಣಿಗೆಗೆ ಸಾಕ್ಷಿಯಾಗಿದೆ. ರಾಜ್ಯಕ್ಕೆ ಅತ್ಯಧಿಕ ರೈಲ್ವೆ ಯೋಜನೆಗಳ ಕೊಡುಗೆ ನೀಡಿದ್ದಾರೆ ಎಂದು ಹೇಳಿದ್ದಾರೆ.

15ನೇ ಹಣಕಾಸು ಆಯೋಗದಿಂದ ಕರ್ನಾಟಕದ ತೆರಿಗೆ ಪಾಲು ಶೇ.3.647ರಷ್ಟು ಎಂದು ನಿಗದಿಪಡಿಸಲಾಗಿದೆ. 2004–2014ರ ದಶಕದ ಅವಧಿಯಲ್ಲಿ ರಾಜ್ಯಕ್ಕೆ ಕೇವಲ 81,795 ಕೋಟಿ ರೂಪಾಯಿ ನೀಡಲಾಗಿತ್ತು.

2014–2024ರ ದಶಕದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಓಆಂ ಸರ್ಕಾರ ಬರೋಬ್ಬರಿ 2,85,452 ಕೋಟಿ ತೆರಿಗೆ ಹಂಚಿಕೆ ಮಾಡಿದೆ ಎಂದು ಅಂಕಿ ಅಂಶ ಸಹಿತ ವಿವರಣೆ ನೀಡಿದ್ದಾರೆ.

15 ರೈಲ್ವೆ ಯೋಜನೆ: ಕೇಂದ್ರ ಸರ್ಕಾರ ರಾಜ್ಯಕ್ಕೆ ಬರೋಬ್ಬರಿ 7,564 ಕೋಟಿ ವೆಚ್ಚದಲ್ಲಿ 15 ನಿರ್ಣಾಯಕ ರೈಲ್ವೆ ಯೋಜನೆಗಳನ್ನು ನೀಡಿದೆ. ಇದು ರಾಜ್ಯಕ್ಕೆ ಅತ್ಯಧಿಕ ರೈಲ್ವೆ ಯೋಜನೆಗಳ ಕೊಡುಗೆಯಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

# ಮಹಾಕುಂಭ: ಸಂಗಮದಲ್ಲಿ ಮಿಂದೆದ್ದ ಭೂತಾನ್ ದೊರೆ!



**ಪ್ರಯಾಗ್ ರಾಜ್:** ಇಲ್ಲಿನ ಸಂಗಮದಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಮಂಗಳವಾರ ಭೇಟಿ ನೀಡಿದ ಭೂತಾನ್ ದೊರೆ ಜಿಗ್ಮೆ ಖೇಸರ್ ನಮ್ಗೇಲ್ ವಾಂಗ್ ಚುಕ್ ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಿದ್ದಾರೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಜೊತೆಯಲ್ಲಿ ಗಂಗಾ, ಯುಮುನಾ ಮತ್ತು ಸರಸ್ವತಿ ನದಿಗಳ ಸಂಗಮ ತಾಣಕ್ಕೆ ಆಗಮಿಸಿದ ಭೂತನ್ ದೊರೆ, ನದಿ ನೀರಿನಲ್ಲಿ ಮಿಂದೆದ್ದರು. ಇದಕ್ಕೂ ಮುನ್ನಾ ಸೂರ್ಯನಿಗೆ 'ಅರ್ಘ್ಯ' ಅರ್ಪಿಸಿದರು.

ವಿಮಾನ ನಿಲ್ದಾಣದಲ್ಲಿ ಬಂದಿಳಿದಾಗ ಭೂತಾನ್‌ನ ಸಾಂಪ್ರದಾಯಿಕ ಉಡುಪಿನಲ್ಲಿ ಕಾಣಿಸಿಕೊಂಡಿದ್ದ ವಾಂಗ್ ಚುಕ್, ಸಂಗಮದಲ್ಲಿ ಪುಣ್ಯ ಸ್ನಾನಕ್ಕೆ ತೆರಳಿದಾಗ ಉದ್ದನೆಯ ಕೇಸರಿ ಬಣ್ಣದ ಕುರ್ತಾ ಮತ್ತು ಪೈಜಾಮಾ ಧರಿಸಿದರು.

ನೂತನ ಮಹಾಮಂಡಲೇಶ್ವರ ಸಂತೋಷ್ ದಾಸ್ ಜಿ ಮಹಾರಾಜ್ ಅವರೊಂದಿಗೆ ಉತ್ತರ ಪ್ರದೇಶ ಸಚಿವರಾದ ಸ್ವತಂತ್ರ ದೇವ್ ಸಿಂಗ್, ನಂದ ಗೋಪಾಲ್ ಗುಪ್ತಾ, ಯೋಗಿ ಆದಿತ್ಯನಾಥ್ ಹಾಗೂ ವಾಂಗ್ ಚುಕ್ ಪುಣ್ಯ ಸ್ನಾನ ಮಾಡುತ್ತಿರುವ ಚಿತ್ರವನ್ನು ಉತ್ತರ ಪ್ರದೇಶ ಸರ್ಕಾರ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದೆ.

ನಿನ್ನೆಯೇ ಲಖನೌಗೆ ಆಗಮಿಸಿದ ಭೂತಾನ್ ರಾಜನಿಗೆ ರಾಜಭವನದಲ್ಲಿ ರಾಜ್ಯಪಾಲ ಆನಂದಿಬೆನ್ ಪಟೇಲ್ ಆತಿಥ್ಯ ನೀಡಿದರು.

ಇದೇ ವೇಳೆ ರಾಜ್ಯಪಾಲರು ಮುಖ್ಯಮಂತ್ರಿ ವಾಂಗ್ ಚುಕ್ ಅವರೊಂದಿಗೆ ಭಾರತ–ಭೂತಾನ್ ಸಂಬಂಧಗಳ ಬಗ್ಗೆ ವಿವರವಾದ ಚರ್ಚೆಗಳನ್ನು ನಡೆಸಿದರು.

# 10%ರಷ್ಟು ಬಡ್ಡಿದರ ಕಡಿತವಾದರೂ ಚೇತರಿಸಿಕೊಳ್ಳದ ಪಾಕ್ ಆರ್ಥಿಕತೆ, ಆತಂಕದಲ್ಲಿ ಸರ್ಕಾರ

ಇಸ್ಲಾಮಾಬಾದ್: ಪ್ರಸಕ್ತ ಹಣಕಾಸು ವರ್ಷದ ಮೊದಲ ಏಳು ತಿಂಗಳಲ್ಲಿ ದೇಶದ ಕೇಂದ್ರೀಯ ಬ್ಯಾಂಕ್ ಬಡ್ಡಿದರದಲ್ಲಿ ಶೇ 10ರಷ್ಟು ಕಡಿತ ಮಾಡಿದ್ದರೂ ಪಾಕಿಸ್ತಾನವು ಆರ್ಥಿಕ ಬೆಳವಣಿಗೆಯನ್ನು ಪ್ರಾರಂಭಿಸಲು ವಿಫಲವಾಗಿದೆ ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ. ತೀರಾ ಇತ್ತೀಚಿನ ಬಡ್ಡಿದರ ಕಡಿತದ ಭಾಗವಾಗಿ ಜನವರಿ 27 ರಂದು ಸ್ಟೇಟ್ ಬ್ಯಾಂಕ್ ಆಫ್ ಪಾಕಿಸ್ತಾನವು ಬಡ್ಡಿದರವನ್ನು ಶೇಕಡಾ 1 ರಷ್ಟು ಕಡಿತಗೊಳಿಸಿ ಅದನ್ನು ಶೇಕಡಾ 12 ಕ್ಕೆ ನಿಗದಿಪಡಿಸಿತ್ತು. ಅಲ್ಲಿಗೆ ಕಳೆದ ವರ್ಷದ ಜೂನ್‌ನಲ್ಲಿ ಇದ್ದ ಶೇಕಡಾ 22 ರಷ್ಟು ಬಡ್ಡಿದರಕ್ಕೆ ಹೋಲಿಸಿದರೆ 7 ತಿಂಗಳಲ್ಲಿ ಶೇಕಡಾ 10 ರಷ್ಟು ಬಡ್ಡಿದರ ಕಡಿಮೆಯಾಗಿದೆ. ಈ ಕ್ರಮಗಳಿಂದ ಹಣದ ಹರಿವು ಮತ್ತು ಬೆಳವಣಿಗೆ ಹೆಚ್ಚಾಗಲಿದೆ ಎಂದು ನಿರೀಕ್ಷಿಸಲಾಗಿತ್ತು.

ಆದರೆ ಬಡ್ಡಿದರದಲ್ಲಿ ತೀವ್ರ ಕುಸಿತದ ಹೊರತಾಗಿಯೂ, ಪ್ರಸಕ್ತ ಹಣಕಾಸು ವರ್ಷದ ಮೊದಲ ಏಳು ತಿಂಗಳಲ್ಲಿ ಪಾಕಿಸ್ತಾನದ ಆರ್ಥಿಕ ಬೆಳವಣಿಗೆಯು ನಕಾರಾತ್ಮಕವಾಗಿಯೇ ಉಳಿದಿದೆ ಎಂದು ಡಾನ್ ಪತ್ರಿಕೆ ವರದಿ ಮಾಡಿದೆ. ಆಗಾಗ ಬಡ್ಡಿದರಗಳನ್ನು ಕಡಿಮೆ ಮಾಡಿದ್ದರಿಂದ ಭಾರಿ ಪ್ರಮಾಣದ ಹಣ ಬ್ಯಾಂಕುಗಳಿಂದ ಖಾಸಗಿ ವಲಯ ಮತ್ತು ಬ್ಯಾಂಕೇತರ ಹಣಕಾಸು ಸಂಸ್ಥೆಗಳಿಗೆ ವರ್ಗಾವಣೆಯಾಗಿದೆ ಎಂದು ವರದಿ ತಿಳಿಸಿದೆ. ಇಷ್ಟಾದರೂ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸಲು ಅದು ವಿಫಲವಾಗಿದೆ ಎಂದು ಡಾನ್ ವರದಿ ಹೇಳಿದೆ.

ಹಣಕಾಸು ವರ್ಷ 2025 ರ ಎರಡನೇ ತ್ರೈಮಾಸಿಕದಲ್ಲಿ ಖಾಸಗಿ ವಲಯ ಮತ್ತು ಎನ್‌ಬಿಎ□□□ಗಳಿಗೆ ಬ್ಯಾಂಕ್ ಮುಂಗಡಗಳು ತೀವ್ರವಾಗಿ ಹೆಚ್ಚಾಗಿವೆ. ಖಾಸಗಿ ವಲಯಕ್ಕೆ ಹೆಚ್ಚಿನ ನಗದು ಪೂರೈಕೆಯು ಆರ್ಥಿಕತೆಯ ಮೇಲೆ ಪರಿಣಾಮ ಬೀರಲು ಸಮಯ ತೆಗೆದುಕೊಳ್ಳುತ್ತದೆ ಎಂದು ಹಣಕಾಸು ತಜ್ಞರು ಹೇಳುತ್ತಿದ್ದರೆ, ಹಣದುಬ್ಬರವು ಮತ್ತೆ ಆರ್ಥಿಕತೆಯ ಬೆಳವಣಿಗೆಗೆ ಮಾರಕವಾಗಬಹುದು, ಆಮದುಗಳು ಹೆಚ್ಚಾಗಬಹುದು ಮತ್ತು ಇದರ ಪರಿಣಾಮವಾಗಿ 2025 ರ ಮೊದಲಾರ್ಧದಲ್ಲಿ ಪ್ರಸ್ತುತ 1.2 ಬಿಲಿಯನ್ ಯುಎಸ್‌ಡಿ ಹೆಚ್ಚುವರಿ ಚಾಲ್ತಿ ಕೊರತೆ ಎದುರಾಗಬಹುದು ಎಂದು ಸರ್ಕಾರ ಕಳವಳ ವ್ಯಕ್ತಪಡಿಸಿದೆ.

ಪತ್ರಿಕೆಯ ಪ್ರಕಾರ, ಇತ್ತೀಚಿನ ದತ್ತಾಂಶವು 2025 ರ ಜುಲೈ 1–ಜನವರಿ 17 ರಲ್ಲಿ ಎಂ 2 ಬೆಳವಣಿಗೆ (ಹಣದ ಪೂರೈಕೆ)ಯು ಋಣಾತ್ಮಕ 973 ಬಿಲಿಯನ್ ರೂ.ಗಳಷ್ಟಿದೆ ಎಂದು ತೋರಿಸಿದೆ. ಕಳೆದ ಹಣಕಾಸು ವರ್ಷದ ಇದೇ ಅವಧಿಯಲ್ಲಿ ಇದು 416 ಬಿಲಿಯನ್ ರೂ.ಗಳ ನಿವ್ವಳ ಬೆಳವಣಿಗೆ ದಾಖಲಿಸಿತ್ತು.

ಎಂ 2 ದತ್ತಾಂಶದ ಪ್ರಕಾರ ವಿಶಾಲ ಹಣದ ಹರಿವು 2024 ರ ಹಣಕಾಸು ವರ್ಷದಲ್ಲಿ 4.94 ಟ್ರಿಲಿಯನ್ ರೂ ಮತ್ತು 2023 ರ ಹಣಕಾಸು ವರ್ಷದಲ್ಲಿ 4.17 ಟ್ರಿಲಿಯನ್ ರೂ.ಗಳಷ್ಟು ಹೆಚ್ಚಾಗಿದೆ. ಬಹುತೇಕ ಸರ್ಕಾರಕ್ಕೆ ಸಂದಾಯವಾಗಿರುವ ಈ ಬೃಹತ್ ಪ್ರಮಾಣದ ನಗದು ಪೂರೈಕೆ ಹಣದುಬ್ಬರ ಹೆಚ್ಚಾಗಲು ಕಾರಣವಾಗಿದೆಯೇ ಹೊರತು ಬೇರೇನೂ ಆಗಿಲ್ಲ. ಹಣದುಬ್ಬರವು ಮೇ 2023 ರಲ್ಲಿ ದಾಖಲೆಯ ಗರಿಷ್ಠ ಶೇಕಡಾ 38 ಕ್ಕೆ ತಲುಪಿತ್ತು. ಹೆಚ್ಚುತ್ತಿರುವ ಹಣದುಬ್ಬರವನ್ನು ನಿಯಂತ್ರಿಸಲು ಸ್ಟೇಟ್ ಬ್ಯಾಂಕ್ ಬಡ್ಡಿದರವನ್ನು ಹೆಚ್ಚಿಸಿದ್ದು ಆರ್ಥಿಕ ಬೆಳವಣಿಗೆಗೆ ಅಡ್ಡಿಯಾಯಿತು ಎಂದು ತಜ್ಞರು ಹೇಳಿದ್ದಾರೆ.

# ತವರಿಗೆ ಬಂದ ಮಗಳನ್ನು ಸರಪಳಿಯಿಂದ ಕಟ್ಟಿಹಾಕಿದ ಪೋಷಕರು


**ಜಾಲ್ನಾ (ಮಹಾರಾಷ್ಟ್ರ):** ಮನೆಯವರ ವಿರೋಧದ ನಡುವೆ ಅಂತರ್ಧರ್ಮೀಯ ಮದುವೆ ಆಗಿದ್ದ ಮಹಿಳೆಯೊಬ್ಬರನ್ನು ಗೃಹಬಂಧನಲ್ಲಿಟ್ಟಿದ್ದ ಪ್ರಕರಣ ಜಾಲ್ನಾ ಜಿಲ್ಲೆಯ ಗ್ರಾಮವೊಂದರಲ್ಲಿ ಬೆಳಕಿಗೆ ಬಂದಿದೆ. ಮಹಿಳೆಯನ್ನು ಆಕೆಯ ಪೋಷಕರೇ ಮನೆಯಲ್ಲಿ ಸರಪಳಿಯಿಂದ ಕಟ್ಟಿಹಾಕಿರುವ ಆರೋಪ ಕೇಳಿಬಂದಿದ್ದು, ಗೃಹಿಣಿಯನ್ನು ರಕ್ಷಿಸಲಾಗಿದೆ ಎಂದು ಅಧಿಕಾರಿಯೊಬ್ಬರು ಮಂಗಳವಾರ ತಿಳಿಸಿದ್ದಾರೆ.ಶಹನಾಜ್ ಅಲಿಯಾಸ್ ಸೋನಲ್ ಗೃಹಬಂಧನದಿಂದ ರಕ್ಷಿಸಲ್ಪಟ್ಟಿರುವ ಮಹಿಳೆ. ಬಾಂಬೆ ಹೈಕೋರ್ಟ್‌ನ ಔರಂಗಾಬಾದ್ ಪೀಠದ ಆದೇಶ ಮೇರೆಗೆ ಪೊಲೀಸರು ಗ್ರಾಮಕ್ಕೆ ತೆರಳಿ ಮಹಿಳೆಯನ್ನು ಗೃಹಬಂಧನದಿಂದ ಮುಕ್ತಗೊಳಿಸಿದ್ದಾರೆ. ಭೋಕಾರ್ದನ್ ತಹಶಿಲ್ ವ್ಯಾಪ್ತಿಯ ಅಲಾಪುರ ಗ್ರಾಮದಲ್ಲಿರುವ ಪೋಷಕರ ಮನೆಯಲ್ಲಿ ಮಹಿಳೆಯನ್ನು ಸರಪಳಿಯಿಂದ ಕಳೆದ ಎರಡು ತಿಂಗಳಿಂದ ಕಟ್ಟಿಹಾಕಲಾಗಿತ್ತು ಎಂಬ ಆರೋಪ ಕೇಳಿಬಂದಿದೆ. ಪೊಲೀಸರ ನೀಡಿರುವ ಮಾಹಿತಿ ಪ್ರಕಾರ, 20 ಹರೆಯದ ಮಹಿಳೆ ಅಂತರ್ಧರ್ಮೀಯ ವ್ಯಕ್ತಿಯೊಂದಿಗೆ ಮದುವೆಯಾಗಿದ್ದು, ಈ ದಂಪತಿಗೆ ಮೂರು ವರ್ಷದ ಮಗನಿದ್ದಾನೆ. ಎರಡು ತಿಂಗಳ ಹಿಂದೆ ತನ್ನ ತವರು ಮನೆಗೆ ತೆರಳಿದ್ದ ಸೋನಲ್ ಅವರನ್ನು ಆಕೆಯ ಕುಟುಂಬಸ್ಥರು ಗೃಹಬಂಧನಲ್ಲಿರಿಸಿದ್ದರು. ಮಹಿಳೆ ಮತ್ತೆ ಗಂಡನ ಮನೆಗೆ ಹೋಗದಂತೆ ತಡೆಯಲು ಅವರು ಈ ರೀತಿ ಗೃಹಬಂಧನದಲ್ಲಿರಿಸಿದ್ದರು. ಸೋನಲ್ ಅವರ ಪತಿ ಹಲವು ಬಾರಿ ಅಲಾಪುರ ಗ್ರಾಮಕ್ಕೆ ತೆರಳಿ ತನ್ನ ಪತ್ನಿಯನ್ನು ಕಳಿಸುವಂತೆ ಅನೇಕ ಬಾರಿ ಮನವಿ ಮಾಡಿದರೂ ಸಹ ಇದಕ್ಕೆ ಅತ್ತೆ ಮನೆಯವರು ಸೊಪ್ಪು ಹಾಕಿರಲಿಲ್ಲ. ಅಲ್ಲದೆ, ಮನೆಯೊಳಗೆ ಬರದಂತೆ ಆತನಿಗೆ ನಿರಾಕರಿಸಿದ್ದರು. ತಮ್ಮ ಮಗಳನ್ನು ಏಕಾಂತ ಸ್ಥಳದಲ್ಲಿರಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ . ಗೃಹಬಂಧನದ ಕುರಿತು ಈವರೆಗೆ ಯಾವುದೇ ಪ್ರಕರಣ ದಾಖಲಾಗಿಲ್ಲ. ಆದ್ರೆ ನೊಂದ ಮಹಿಳೆ ದೂರು ನೀಡಿದ್ರೆ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳುವುದಾಗಿ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಎಡವಟ್ಟು ಬೇಟೆ, ಒಂದೇ ಬಾವಿಗೆ ಬಿದ್ದ ಹುಲಿ, ಕಾಡು ಹಂದಿ!

ಸಿಯೋನಿ (ಮಧ್ಯಪ್ರದೇಶ): ಕಾಡುಹಂದಿಯನ್ನು ಅಟ್ಟಿಸಿಕೊಂಡು ಬಂದ ಹುಲಿಯೊಂದು ಹಂದಿ ಜೊತೆಗೇ ಬಾವಿಗೆ ಬಿದ್ದಿರುವ ಘಟನೆ ಮಧ್ಯ ಪ್ರದೇಶದಲ್ಲಿ ನಡೆದಿದೆ. ಜಿಲ್ಲೆಯಲ್ಲಿ ಈ ಘಟನೆ ನಡೆದಿದ್ದು, ಕಾಡು ಹಂದಿಯನ್ನು ಬೇಟೆಯಾಡುವ ರಭಸದಲ್ಲಿ ಹುಲಿಯೊಂದು ಹಂದಿ ಜೊತೆಗೇ ಬಾವಿಗೆ ಬಿದ್ದಿರುವ ಅಪರೂಪದ ಘಟನೆ ನಡೆದಿದೆ. ಬಾವಿಯಿಂದ ಹುಲಿ ಮತ್ತು ಕಾಡುಹಂದಿಯ ಚೀರಾಟ ಕೇಳಿದ ಗ್ರಾಮಸ್ಥರು ಬಂದು ನೋಡಿದಾಗ ಹುಲಿ ಮತ್ತು ಕಾಡುಹಂದಿ ಬಿದ್ದಿರುವ ವಿಚಾರ ತಿಳಿದಿದೆ. ನೋಡ ನೋಡುತ್ತಲೇ ನೂರಾರು ಗ್ರಾಮಸ್ಥರು ಆಘಾತ ಮತ್ತು ವಿಸ್ಮಯದಿಂದ ಬಾವಿಯ ಸುತ್ತಲೂ ಜಮಾಯಿಸಿ ಹುಲಿ ಮತ್ತು ಹಂದಿಯ ಜುಗಲ್ ಬಂದಿ ನೋಡುತ್ತಿದ್ದರು. ಬಾವಿಯಲ್ಲಿ ಕಾಡು ಹಂದಿ ಪಕ್ಕದಲ್ಲೇ ಈಜುತ್ತಿದ್ದರೂ ಹುಲಿರಾಯ ಮಾತ್ರ ಅದನ್ನೂ ಏನೂ ಮಾಡದೇ ಬಾವಿಯಿಂದ ಮೇಲೇರುವ ಪ್ರಯತ್ನ ಮಾಡುತ್ತಿತ್ತು. ಅಂತೆಯೇ ಮೊದಲ ಬಾರಿಗೆ ಎನ್ನುವಂತೆ ಹಂದಿ ಕೂಡ ಹುಲಿಗೆ ಹೆದರದೆ ತನ್ನ ಜೀವ ಉಳಿಸಿಕೊಳ್ಳಲು ತಾನೂ ಕೂಡ ಮೇಲೇರಲು ಪ್ರಯತ್ನಿಸುತ್ತಿರುವುದು ವಿಡಿಯೋದಲ್ಲಿ ದಾಖಲಾಗಿದೆ.

ಇನ್ನು ವಿಚಾರ ತಿಳಿದ ಕೂಡಲೇ ಅರಣ್ಯಾಧಿಕಾರಿಗಳು ಘಟನಾ ಸ್ಥಳಕ್ಕೆ ದೌಡಾಯಿಸಿದ್ದು, ಬಳಿಕ ವನ್ಯಜೀವಿ ರಕ್ಷಣಾ ತಂಡಗಳನ್ನು ಸ್ಥಳಕ್ಕೆ ಕರೆಸಿದ್ದಾರೆ. ಗ್ರಾಮಸ್ಥರ ನೆರವಿನೊಂದಿಗೆ ಎರಡೂ ಪ್ರಾಣಿಗಳನ್ನು ಬಾವಿಯಿಂದ ಹೊರತೆಗೆಯುವ ಪ್ರಯತ್ನ ನಡೆಸಿದ್ದಾರೆ.

# 35 ವರ್ಷದ ಉಳಿತಾಯದ ಹಣವನ್ನು ಶಿಕ್ಷಣ ಸಂಸ್ಥೆಗೆ ದಾನ ಮಾಡಿದ ಮಹಿಳೆ




**ತಿರುಪತಿ(ಆಂಧ್ರ ಪ್ರದೇಶ):** ಇಳಿವಯಸ್ಸಿನ ಆಸರೆಗಾಗಿ ಹಣ ಉಳಿತಾಯ ಮಾಡುವುದು ಸಾಮಾನ್ಯ. ಆದರೆ, ಇಲ್ಲೊಬ್ಬ ಮಹಿಳೆ ಹೀಗೆ ಕೂಡಿಟ್ಟ ತಮ್ಮ 35 ವರ್ಷದ ಸಂಪಾದನೆಯನ್ನು ತಿರುಮಲ ತಿರುಪತಿ ದೇವಸ್ಥಾನದ (ಟಿಟಿಡಿ) ಶ್ರೀ ವೆಂಕಟೇಶ್ವರ ಸರ್ವ ಶ್ರೇಯಸ್ (ಎಸ್‌ವಿ ಬಾಲಮಂದಿರ) ಟ್ರಸ್ಟ್‌ಗೆ ದೇಣಿಗೆಯಾಗಿ ನೀಡಿದ್ದಾರೆ. ಒಟ್ಟು 50 ಲಕ್ಷ ಹಣವನ್ನು ದೇಣಿಗೆ ಕೊಟ್ಟಿದ್ದಾರೆ.

ರೇಣಿಗುಂಟದ ಸಿ.ಮೋಹನ ದಾನ ಮಾಡಿದ ಮಹಿಳೆ. ಇವರು ವಿಶ್ವಸಂಸ್ಥೆಯ ಅಭಿವೃದ್ಧಿ ಮತ್ತು ನಿರ್ವಹಣೆ ವಲಯದಲ್ಲಿ ಕೊಸೊವೊ, ಅಲ್ಬೇನಿಯಾ, ಯೆಮೆನ್, ಸೌದಿ ಅರೇಬಿಯಾ ಮತ್ತು ಭಾರತದಾದ್ಯಂತ ಕಾರ್ಯನಿರ್ವಹಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ದೇಗುಲದ ಮಂಡಳಿ, 70ರ ವಯೋಮಾನದ ದಾನಿ ಮಹಿಳೆ, ತಮ್ಮ 35 ವರ್ಷದ ಸೇವೆಯಲ್ಲಿ ಗಳಿಸಿ, ಉಳಿತಾಯ ಮಾಡಿದ ಹಣವನ್ನೆಲ್ಲ ಟಿಟಿಡಿ ಶಿಕ್ಷಣ ಸಂಸ್ಥೆಗಳಲ್ಲಿರುವ ಅನಾಥ ಮತ್ತು ಬಡ ಮಕ್ಕಳ ಶಿಕ್ಷಣಕ್ಕೆ ದಾನ ಮಾಡಿದ್ದಾರೆ ಎಂದು ತಿಳಿಸಿದೆ. ದೇಣಿಗೆ ಹಣವನ್ನು ಡಿಮ್ಯಾಂಡ್ ಡ್ರಾಫ್ಟ್(ಡಿಡಿ) ರೂಪದಲ್ಲಿ ತಿರುಮಲದಲ್ಲಿರುವ ಟಿಟಿಡಿ ಹೆಚ್ಚುವರಿ ಕಾರ್ಯನಿರ್ವಾಹಕ ಅಧಿಕಾರಿ ಸಿ.ವೆಂಕಯ್ಯ ಚೌಧರಿ ಅವರಿಗೆ ಹಸ್ತಾಂತರಿಸಿದರು. ಟಿಟಿಡಿ ತಿರುಪತಿಯ ವೆಂಕಟೇಶ್ವರ ದೇವಸ್ಥಾನದ ನಿರ್ವಹಣಾ ಮಂಡಳಿಯಾಗಿದೆ.

# ಆಪ್ ಶಾಸಕ ದಿನೇಶ್ ಮೋಹಾನಿಯಾ ವಿರುದ್ಧ ಕೇಸ್ ದಾಖಲು



ನವದೆಹಲಿ: ದೆಹಲಿ ವಿಧಾನಸಭೆ ಚುನಾವಣೆ ಹೊತ್ತಲ್ಲೇ, ಆಡಳಿತಾರೂಢ ಆಮ್ ಆದ್ಮಿ ಪಕ್ಷದ (ಆಪ್) ನಾಯಕರ ವಿರುದ್ಧ ಸರಣಿ ಪ್ರಕರಣಗಳು ದಾಖಲಾಗುತ್ತಿವೆ. ಸಿಎಂ ಅತಿಶಿ, ಅರವಿಂದ್ ಕೇಜ್ರಿವಾಲ್ ಬಳಿಕ ಶಾಸಕ ದಿನೇಶ್ ಮೋಹಾನಿಯಾ ವಿರುದ್ಧ ಮಹಿಳೆಯೊಬ್ಬರ ಜೊತೆ ಅನುಚಿತವಾಗಿ ವರ್ತಿಸಿದ ಆರೋಪದ ಮೇಲೆ ಕೇಸ್ ಹಾಕಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ದಿನೇಶ್ ಮೋಹಾನಿಯಾ ಅವರು ಮಹಿಳೆಯ ಜೊತೆಗೆ ಅನುಚಿತ ಸನ್ನೆ ಮಾಡಿದ ಮತ್ತು ಅವರಿಗೆ ಗಾಳಿಯಲ್ಲಿ ಚುಂಬಿಸಿದ (ಫ್ಲೈಯಿಂಗ್ ಕಿಸ್) ಆರೋಪ ಹೊರಿಸಲಾಗಿದೆ. ಶಾಸಕರ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯಡಿ (ಬಿಎನ್‌ಎಸ್) ಪ್ರಕರಣ ದಾಖಲಿಸಲಾಗಿದೆ ಎಂದು ದೆಹಲಿ ಪೊಲೀಸರು ಮಾಹಿತಿ ನೀಡಿದ್ದಾರೆ.

ಆಪ್ ಶಾಸಕ ದಿನೇಶ್ ಮೋಹಾನಿಯಾ ಅವರು ತಮಗೆ ಫ್ಲೈಯಿಂಗ್ ಕಿಸ್ ನೀಡುವ ಮೂಲಕ ಅನುಚಿವಾಗಿ ವರ್ತಿಸಿದ್ದಾರೆ. ಇದು ನನ್ನ ಘನತೆಗೆ ಧಕ್ಕೆ ತಂದಿದೆ ಎಂದು ಆರೋಪಿಸಿ ಮಹಿಳೆಯೊಬ್ಬರು ಸಂಗಮ್ ವಿಹಾರ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

ಸಂಗಮ್ ವಿಹಾರ್ ವಿಧಾನಸಭಾ ಕ್ಷೇತ್ರದ ಹಾಲಿ ಶಾಸಕರಾಗಿರುವ ದಿನೇಶ್ ಮೋಹಾನಿಯಾ ಸದ್ಯ ಅದೇ ಕ್ಷೇತ್ರದಿಂದ ಚುನಾವಣಾ ಕಣದಲ್ಲಿದ್ದಾರೆ. ಇವರ ವಿರುದ್ಧ ಬಿಜೆಪಿಯ ಚಂದನ್ ಕುಮಾರ್ ಚೌಧರಿ ಮತ್ತು ಕಾಂಗ್ರೆಸ್‌ನ ಹರ್ಷ್ ಚೌಧರಿ ಸವಾಲು ಎಸೆದಿದ್ದಾರೆ. ರಾಷ್ಟ್ರ ರಾಜಧಾನಿಯ 70 ವಿಧಾನಸಭಾ ಕ್ಷೇತ್ರಗಳಿಗೆ ಒಟ್ಟು 699 ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ.

ದೆಹಲಿಯಲ್ಲಿ ಇಂದು ಬೆಳಗ್ಗೆ 7 ಗಂಟೆಯಿಂದ 70 ವಿಧಾನಸಭಾ ಸ್ಥಾನಗಳಿಗೆ ಮತದಾನ ಆರಂಭವಾಗಿದೆ. 9 ಗಂಟೆವರೆಗೆ ಶೇಕಡಾ 8.10 ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಸಿಎಂ, ಮಾಜಿ ಸಿಎಂ ವಿರುದ್ಧ ಕೇಸ್: ಇದಕ್ಕೂ ಮೊದಲು ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಆರೋಪದಡಿ ಸಿಎಂ ಅತಿಶಿ ವಿರುದ್ಧ, ಯಮುನಾ ನದಿಗೆ ವಿಷ ಹಾಕಿದ ಆರೋಪದ ಮೇಲೆ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ವಿರುದ್ಧ ಚುನಾವಣಾ ಆಯೋಗದ ಸೂಚನೆಯ ಮೇರೆಗೆ ಕೇಸ್ ದಾಖಲಿಸಲಾಗಿದೆ.

ಚುನಾವಣಾ ಆಯೋಗ ತಮ್ಮ ವಿರುದ್ಧ ಬೇಕಂತಲೇ ಸಮರ ಸಾರಿದೆ ಎಂದು ಆರೋಪಿಸಿ ಆಪ್ ನಾಯಕರು ವಾಗ್ದಾಳಿ ನಡೆಸಿದ್ದಾರೆ. ಇದಕ್ಕೆ ಆಯೋಗವೂ ತಿರುಗೇಟು ನೀಡಿದ್ದು, ಸಂಸ್ಥೆಯು ಯಾವುದೇ ಪಕ್ಷದ ಪರವಾಗಿಲ್ಲ. ನಿಯಮಗಳನ್ನು ಮೀರುವ ಯಾವುದೇ ಅಭ್ಯರ್ಥಿಯ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಹೇಳಿದೆ.

# ಮಾನವ ಹಕ್ಕುಗಳ ಮಂಡಳಿಯಿಂದ ಅಮೆರಿಕ ಹೊರಕ್ಕೆ ಟ್ರಂಪ್ ಆದೇಶ



ವಾಷಿಂಗ್ಟನ್: 'ಅಮೆರಿಕ ಮೊದಲು' ಎಂಬ ತಮ್ಮ ಘೋಷಣೆಯ ಭಾಗವಾಗಿ ವಿಶ್ವಸಂಸ್ಥೆಯ ಆರೋಗ್ಯ ಸಂಸ್ಥೆಯಿಂದ (ಡಬ್ಲ್ಯೂಎಚ್‌ಒ) ಹೊರಬಂದಿದ್ದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಂದು ಮಹತ್ವದ ನಿರ್ಧಾರಕ್ಕೆ ಸಹಿ ಹಾಕಿದ್ದಾರೆ.

ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯಿಂದ ಹೊರಕ್ಕೆ, ಪ್ಯಾಲೆಸ್ಟೈನ್ ನಿರಾಶ್ರಿತರ ಪರಿಹಾರ ಕಾರ್ಯಗಳಿಗೆ ನೀಡುತ್ತಿರುವ ಹಣ ಕಡಿತ ಮತ್ತು ಪರಮಾಣು ಒಪ್ಪಂದದಿಂದ ಹಿಂದೆ ಸರಿದಿರುವ ಇರಾನ್ ಮೇಲೆ ಆರ್ಥಿಕ ಒತ್ತಡ ಹೇರುವ ಕಾರ್ಯಕಾರಿ ಆದೇಶಕ್ಕೆ ಟ್ರಂಪ್ ಅಸ್ತು ಎಂದಿದ್ದಾಗಿ ಅಲ್ಲಿನ ಮಾಧ್ಯಮಗಳು ವರದಿ ಮಾಡಿವೆ.

ಈ ಬಗ್ಗೆ ಹೇಳಿಕೆ ನೀಡಿರುವ ಟ್ರಂಪ್, "ಇರಾನ್ ಮೇಲೆ ಒತ್ತಡ ಹೇರುವ ಬಗ್ಗೆ ಕಠಿಣ ನಿರ್ಧಾರ ಕೈಗೊಂಡಿದ್ದೇವೆ. ಇದು ಕಷ್ಟವಾದರೂ ಮತ್ತು ಇಷ್ಟವಿಲ್ಲದಿದ್ದರೂ ಆದೇಶ ಹೊರಡಿಸಿದ್ದೇನೆ. ಆದಾಗ್ಯೂ ಕಾಲ ನಿರ್ಣಯದಂತೆ ಕ್ರಮ ವಹಿಸಬೇಕಾಗಿದೆ" ಎಂದಿದ್ದಾರೆ.


ಇರಾನ್ ಮೇಲೆ ಯುಎಸ್ ಪ್ರಹಾರ: ಇರಾನ್‌ನ ತೈಲ ರಫ್ತಿನ ಮೇಲೆ ಹೆಚ್ಚಿನ ಸುಂಕ ಸೇರಿದಂತೆ ಗರಿಷ್ಠ ಪ್ರಮಾಣದಲ್ಲಿ ಆರ್ಥಿಕ ನಿರ್ಬಂಧಗಳನ್ನು ವಿಧಿಸಲು ಟ್ರಂಪ್ ಸರ್ಕಾರ ನಿರ್ಧರಿಸಿದೆ. ಈ ಬಗ್ಗೆ ಖಜಾನೆ ಇಲಾಖೆಗೆ ನಿರ್ದೇಶನ ನೀಡಲಾಗಿದೆ.

ಮುಸ್ಲಿಂ ರಾಷ್ಟ್ರದ ಮೇಲೆ ಕ್ರಮಕ್ಕೆ ಅಮೆರಿಕದ ಹಲವು ಸೆನೆಟರ್‌ಗಳು ಕೂಡ ಒತ್ತಾಯಿಸಿದ್ದಾರೆ. ಪರಮಾಣು ಬೆದರಿಕೆ ಹಾಕುತ್ತಿರುವ ಇರಾನ್ ಮೇಲೆ ನಿಯಂತ್ರಣ ಅಗತ್ಯವಿದೆ ಎಂದು ಸೆನೆಟರ್‌ಗಳಾದ ಲಿಂಡ್ಸೆ ಗ್ರಹಾಂ, ಆರ್–ಎಸ್‌ಸಿ, ಜಾನ್ ಫೆಟರ್‌ಮ್ಯಾನ್, ಡಿ–ಪೆನ್ ಮತ್ತಿತರರು ನಿರ್ಣಯ ಮಂಡಿಸಿದ್ದಾರೆ.

ಪ್ಯಾಲೆಸ್ಟೈನ್‌ಗೆ ಹಣ ಕಡಿತ: ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಮೊದಲ ದಿನವೇ ಡಬ್ಲ್ಯೂಎಚ್‌ಒದಿಂದ ಹಿಂದೆ ಸರಿಯುವ ಆದೇಶ ಹೊರಡಿಸಿದ್ದ ಟ್ರಂಪ್, ಇದೀಗ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯಿಂದಲೂ ಅಮೆರಿಕವನ್ನು ಹೊರತರುವ ಫರ್ಮಾನು ಹೊರಡಿಸಿದ್ದಾರೆ.

ಇದರ ಜೊತೆಗೆ, ಇಸ್ರೇಲ್ ದಾಳಿಯಿಂದಾಗಿ ಕಂಗೆಟ್ಟಿರುವ ಪ್ಯಾಲೆಸ್ಟೈನ್ ನಿರಾಶ್ರಿತರಿಗಾಗಿ ವಿಶ್ವಸಂಸ್ಥೆಯ ಪರಿಹಾರ ಮತ್ತು ಕಾರ್ಯ ಸಂಸ್ಥೆ (ಯುಎನ್‌ಆರ್‌ಡಬ್ಲ್ಯೂಎ) ಗೆ ನೀಡುವ ಹಣವನ್ನೂ ಕಡಿತಗೊಳಿಸುವ ಆದೇಶಕ್ಕೂ ಸಹಿ ಹಾಕಿದ್ದಾರೆ.

# ಭೂಕಂಪನದಿಂದ ತಲ್ಲಣಗೊಂಡ ಅಫ್ಘಾನಿಸ್ತಾನ: ರಿಕ್ಟರ್ ಮಾಪಕದಲ್ಲಿ 4.3 ರಷ್ಟು ತೀವ್ರತೆ ದಾಖಲು




**ಅಫ್ಘಾನಿಸ್ತಾನ:** ಅಫ್ಘಾನಿಸ್ತಾನದಲ್ಲಿ ಸೋಮವಾರ ತಡರಾತ್ರಿ 4.3 ತೀವ್ರತೆಯ ಭೂಕಂಪ ಸಂಭವಿಸಿದೆ. ಮಂಗಳವಾರ ಬೆಳಗಿನ ಜಾವ ಭೂಮಿಯ 10 ಕಿಲೋಮೀಟರ್ ಆಳದಲ್ಲಿ, 01:42ರ ಸುಮಾರಿಗೆ ಭೂಮಿ ಕಂಪಿಸಿದೆ.

ನ್ಯಾಷನಲ್ ಸೆಂಟರ್ ಫಾರ್ ಸೆಸ್ಮಾಲಜಿ (ಓಅಖ) ಪ್ರಕಾರ 4.1 ತೀವ್ರತೆಯ ಭೂಕಂಪ ಇದಾಗಿದೆ. ಅಂತೆಯೇ ಜನವರಿ 30 ರಂದು, ರಿಕ್ಟರ್ ಮಾಪಕದಲ್ಲಿ 4.2 ರ ಭೂಕಂಪ ಈ ಪ್ರದೇಶದಲ್ಲಿ ಸಂಭವಿಸಿತ್ತು. ಇದೀಗ ಮತ್ತೆ ಕಂಪನವಾಗಿದೆ. ಈ ರೀತಿಯ ಭೂಕಂಪಗಳು ಸಾಮಾನ್ಯವಾಗಿ ಆಳವಾದ ಭೂಕಂಪಗಳಿಗಿಂತ ಹೆಚ್ಚು ಅಪಾಯಕಾರಿ. ಏಕೆಂದರೆ ಆಳವಿಲ್ಲದ ಭೂಕಂಪಗಳು ಮೇಲ್ಮೈಗೆ ಹತ್ತಿರವಾಗಿ ಹೆಚ್ಚಿನ ಶಕ್ತಿಯನ್ನು ಬಿಡುಗಡೆ ಮಾಡುತ್ತವೆ. ಇದು ಹೆಚ್ಚು ತೀವ್ರವಾದ ಅಲುಗಾಡುವಿಕೆ ಮತ್ತು ಹಾನಿಯನ್ನು ಉಂಟುಮಾಡುತ್ತದೆ.

ಈ ಪ್ರದೇಶವು ಆಗಾಗ್ಗೆ ಭೂಕಂಪಗಳನ್ನು ಅನುಭವಿಸುತ್ತದೆ, ಏಕೆಂದರೆ ರಿಕ್ಟರ್ ಮಾಪಕದಲ್ಲಿ 4ರಷ್ಟು ತೀವ್ರತೆಯ ಮತ್ತೊಂದು ಭೂಕಂಪವು ಜನವರಿ 26 ರಂದು ಈ ಪ್ರದೇಶದಲ್ಲಿ ಸಂಭವಿಸಿದೆ. ಓಅಖ ಹೇಳುವಂತೆ ಅಫ್ಘಾನಿಸ್ತಾನದಲ್ಲಿ ಕಳೆದ 30 ದಿನಗಳಲ್ಲಿ 13 ಭೂಕಂಪಗಳು ಸಂಭವಿಸಿವೆ.

ಮಂಗಳವಾರ ಸಂಭವಿಸಿದ ಭೂಕಂಪನವು ಅಫ್ಘಾನಿಸ್ತಾನದ ಬಡಾಕ್ಷನ್ ಪ್ರದೇಶದಲ್ಲಿ ನೈಸರ್ಗಿಕ ವಿಕೋಪಗಳಿಗೆ ಒಳಗಾಗುವ ಪರ್ವತ ಪ್ರದೇಶವಾಗಿದೆ. ವಿಶ್ವಸಂಸ್ಥೆಯ ಕಚೇರಿ (ಗಓಔಅಊಂ) ಪ್ರಕಾರ, ಅಫ್ಘಾನಿಸ್ತಾನವು ಕಾಲೋಚಿತ ಪ್ರವಾಹ, ಭೂಕುಸಿತಗಳು ಮತ್ತು ಭೂಕಂಪಗಳು ಸೇರಿದಂತೆ ನೈಸರ್ಗಿಕ ವಿಕೋಪಗಳಿಂದ ಆಗಾಗ್ಗೆ ನರಳುತ್ತಿರುತ್ತದೆ.

ಅಫ್ಘಾನಿಸ್ತಾನದಲ್ಲಿ ಆಗಾಗ್ಗೆ ಸಂಭವಿಸುವ ಭೂಕಂಪಗಳು ಭಾರಿ ಹಾನಿಯನ್ನುಂಟುಮಾಡುತ್ತವೆ. ಅಫ್ಘಾನಿಸ್ತಾನವು ಪ್ರಬಲ ಭೂಕಂಪಗಳ ಇತಿಹಾಸವನ್ನು ಹೊಂದಿದೆ.

ರೆಡ್ ಕ್ರಾಸ್ ಪ್ರಕಾರ ಇಲ್ಲಿ ಪ್ರತಿ ವರ್ಷ ಭೂಕಂಪಗಳು ಸಂಭವಿಸುತ್ತವೆ. ಹಿಂದೂ ಕುಶ್ ಪರ್ವತ ಶ್ರೇಣಿಯು ಭೌಗೋಳಿಕವಾಗಿ ಭೂಕಂಪಗಳು ಸಕ್ರಿಯವಾಗಿರುವ ಪ್ರದೇಶವಾಗಿದೆ. ಅಫ್ಘಾನಿಸ್ತಾನವು ಭಾರತೀಯ ಮತ್ತು ಯುರೇಷಿಯನ್ ಟೆಕ್ಟೋನಿಕ್ ಪ್ಲೇಟ್‌ಗಳ ನಡುವೆ ಹಲವಾರು ದೋಷ ರೇಖೆಗಳ ಮೇಲೆ ಕುಳಿತಿದೆ, ದೋಷ ರೇಖೆಯು ಹೆರಾತ್ ಮೂಲಕ ನೇರವಾಗಿ ಚಲಿಸುತ್ತದೆ.

# ಸ್ವೀಡನ್: ಶಾಲೆಯ ಮೇಲೆ ದುಷ್ಕರ್ಮಿಗಳಿಂದ ಗುಂಡಿನ ದಾಳಿ, 10 ಮಂದಿ ಸಾವು




ಸ್ವೀಡನ್: ಸ್ವೀಡನ್‌ನ ಶಾಲೆಯೊಂದರ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ್ದು, 10 ಮಂದಿ ಸಾವಿನ್ನಪ್ಪಿದ್ದು, ಐವರು ಗಾಯಗೊಂಡಿದ್ದಾರೆ. ದಾಳಿ ನಡೆಸಿದವರು ಯಾರೆಂಬುದು ಇನ್ನೂ ತಿಳಿದುಬಂದಿಲ್ಲ. ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಸುದ್ದಿ ಸಂಸ್ಥೆ ರಾಯ್ಟರ್ಸ್ ಪ್ರಕಾರ, ಕೇಂದ್ರ ಒರೆಬ್ರೊ ನಗರದ ಶಾಲೆಯ ಮೇಲೆ ದಾಳಿ ನಡೆಸಿದೆ. ದಾಳಿಕೋರ ಮನಬಂದಂತೆ ಗುಂಡು ಹಾರಿಸಿದ್ದಾನೆ. ಸ್ವೀಡನ್‌ನಲ್ಲಿ ಈ ನಗರವನ್ನು ಸುರಕ್ಷಿತ ನಗರವೆಂದೇ ಪರಿಗಣಿಸಲಾಗಿತ್ತು. ಗುಂಡಿನ ದಾಳಿಯಿಂದ ಜನರು ಆಘಾತಕ್ಕೊಳಗಾಗಿದ್ದಾರೆ.

ಗುಂಡಿನ ದಾಳಿಯ ನಂತರ ಶಾಲೆಯಲ್ಲಿ ಭದ್ರತೆ ಖಚಿತಪಡಿಸಿಕೊಳ್ಳಲು ಪೊಲೀಸರು ಇತರೆ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಂಡಿದ್ದಾರೆ. ಸ್ಥಳೀಯರು ಹತ್ತಿರ ಹೋಗದಂತೆ ಮನವಿ ಮಾಡಲಾಗಿದೆ. ಅಲ್ಲದೆ ತನಿಖೆ, ಭದ್ರತೆಗೆ ಸಂಬಂಧಿಸಿದ ಕೆಲಸದಲ್ಲಿ ಹಸ್ತಕ್ಷೇಪ ಮಾಡಬೇಡಿ ಎಂದು ಕೂಡ ಹೇಳಿದ್ದಾರೆ.

ಶಸ್ತ್ರಸಜ್ಜಿತ ವ್ಯಕ್ತಿ ಒಬ್ಬರೇ ಈ ಕೆಲಸವನ್ನು ಮಾಡಿದ್ದಾರೆ ಎನ್ನಲಾಗುತ್ತಿದೆ. ಇದರಲ್ಲಿ ಭಯೋತ್ಪಾದಕರ ಕೈವಾಡವಿದ್ದಂತೆ ತೋರುತ್ತಿಲ್ಲ ಎಂದು ಪೊಲೀಸರು ಹೇಳಿದ್ದಾರೆ.ರಾಜಧಾನಿ ಸ್ಟಾಕ್‌ಹೋಮ್‌ನಿಂದ ಪಶ್ಚಿಮಕ್ಕೆ 200 ಕಿಮೀ (124 ಮೈಲುಗಳು) ದೂರದಲ್ಲಿರುವ ಶಾಲೆಯಲ್ಲಿ ಈ ಘಟನೆ ನಡೆದಿದೆ. ಸ್ವೀಡಿಷ್ ಇತಿಹಾಸದಲ್ಲಿ ನಡೆದ ಅತ್ಯಂತ ಕೆಟ್ಟ ಸಾಮೂಹಿಕ ಗುಂಡಿನ ದಾಳಿ ಎಂದು ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಹೇಳಿದ್ದಾರೆ. ದಾಳಿ ಕೋರ ಕೂಡ ತನಗೆ ತಾನೇ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ, ಆದರೆ ಅವನಿಗೆ ಯಾವುದೇ ಕ್ರಿಮಿನಲ್ ಹಿನ್ನೆಲೆ ಇದ್ದಂತೆ ಕಾಣುತ್ತಿಲ್ಲ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ಹಲವು ಜನರು ಗಾಯಗೊಂಡಿದ್ದರಿಂದ ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗಬಹುದು ಎನ್ನಲಾಗುತ್ತಿದೆ.

# 'ಸಂಜು' ರೀತಿ ದರ್ಶನ್ ಬಯೋಪಿಕ್; ಹೀರೋ ಯಾರು?






ಕನ್ನಡ ಚಿತ್ರರಂಗದಲ್ಲಿ ಬಯೋಪಿಕ್ ಸಿನಿಮಾಗಳ ಸಂಖ್ಯೆ ಕಮ್ಮಿ. ಅದರಲ್ಲೂ ಸಿನಿಮಾ ಕಲಾವಿದರ ಬಗ್ಗೆ ಹೆಚ್ಚೇನು ಜೀವನಾಧರಿತ ಚಿತ್ರಗಳು ಬಂದಿಲ್ಲ. ಈ ಹಿಂದೆ ಮಿನುಗುತಾರೆ ನಟಿ ಕಲ್ಪನಾ ಅವರ ಜೀವನದಿಂದ ಪ್ರೇರಣೆಗೊಂಡು ಸಿನಿಮಾ ಬಂದಿತ್ತು. ಬಾಲಿವುಡ್, ಟಾಲಿವುಡ್‌ನಲ್ಲಿ ಇಂತಹ ಪ್ರಯತ್ನಗಳು ಆಗಾಗ್ಗೆ ನಡೆಯುತ್ತಿರುತ್ತದೆ. ಮಹಾನಟಿ ಸಾವಿತ್ರಿ, ಎನ್‌ಟಿಆರ್, ಸಿಲ್ಕ್ ಸ್ಮಿತಾ ಸೇರಿದಂತೆ ಈಗಾಗಲೇ ಕೆಲ ಸಿನಿಮಾ ತಾರೆಯರ ಜೀವನಾಧರಿತ ಚಿತ್ರಗಳು ಬಂದು ಹೋಗಿದೆ. ಹಿಂದಿಯಲ್ಲಿ ಸಂಜಯ್ ದತ್ ಬಯೋಪಿಕ್ ದೊಡ್ಡದಾಗಿ ಸದ್ದು ಮಾಡಿತ್ತು. ಒಂದ್ಕಾಲದಲ್ಲಿ ಸ್ಟಾರ್ ನಟನಾಗಿ ಮೆರೆದ ಸಂಜುಬಾಬು ಸಾಕಷ್ಟು ವಿವಾದಗಳಿಂದ ಸುದ್ದಿ ಆಗಿದ್ದರು. ಸಂಜು ಬಾಬ ಬಯೋಪಿಕ್ ತೆರೆಗೆ ತಂದು ನಿರ್ದೇಶಕ ರಾಜ್‌ಕುಮಾರ್ ಹಿರಾನಿ ಗೆದ್ದಿದ್ದರು.

ಸಂಜಯ್ ದತ್ ಪಾತ್ರದಲ್ಲಿ ರಣ್‌ಬೀರ್ ಕಪೂರ್ ನಟಿಸಿ ಮೋಡಿ ಮಾಡಿದ್ದರು. ಅಂದಾಜು 90 ಕೋಟಿ ರೂ. ಬಜೆಟ್ ಸಿನಿಮಾ 500 ಕೋಟಿ ರೂ. ಗ್ರಾಸ್ ಕಲೆಕ್ಷನ್ ಮಾಡಿ ದಾಖಲೆ ಬರೆದಿತ್ತು. 'ಸಂಜು' ರೀತಿಯಲ್ಲೇ ದರ್ಶನ್ ಬಯೋಪಿಕ್ ಮಾಡಬೇಕು, ನಾನು ಹೀರೋ ಆಗಿ ನಟಿಸಬೇಕು ಎನ್ನುವ ಆಸೆಯನ್ನು ನಟ ರಾಜವರ್ಧನ್ ತೆರೆದಿಟ್ಟಿದ್ದಾರೆ.

ದರ್ಶನ್ ಆಪ್ತ ಬಳಗದಲ್ಲಿ ಕೂಡ ಅವರು ಗುರ್ತಿಸಿಕೊಂಡಿದ್ದಾರೆ. ನೆಚ್ಚಿನ ನಟನ ಜೀವನಧಾರಿತ ಕಥೆಯಲ್ಲಿ ಹೀರೊ ಆಗಿ ನಟಿಸೋ ಇಂಗಿತ ವ್ಯಕ್ತಪಡಿಸಿದ್ದಾರೆ. ರಾಜವರ್ಧನ್ ನಟನೆಯ 'ಗಜರಾಮ' ಸಿನಿಮಾ ಬಿಡುಗಡೆಗೆ ಸಜ್ಜಾಗಿದೆ. ಈ ವಾರ ಸಿನಿಮಾ ತೆರೆಗೆ ಬರ್ತಿದೆ. ಸಿನಿಮಾ ಪ್ರಚಾರದ ಭಾಗವಾಗಿ ಕೆಲ ಸಂದರ್ಶನಗಳಲ್ಲಿ ಭಾಗಿ ಆಗಿದ್ದಾರೆ. ಫಿಲ್ಮಿಬೀಟ್ ಸಂದರ್ಶನದಲ್ಲಿ ಮಾತನಾಡುತ್ತಾ ದರ್ಶನ್ ಬಯೋಪಿಕ್ ಮಾಡುವ ಆಸೆ ವ್ಯಕ್ತಪಡಿಸಿದ್ದಾರೆ. ನಾನು ಐತಿಹಾಸಿಕ ಸೇರಿದಂತೆ ಎಲ್ಲಾ ತರಹದ ಪಾತ್ರಗಳಲ್ಲಿ ನಟಿಸಿದ್ದೀನಿ, ದರ್ಶನ್ ಸರ್ ಬಯೋಪಿಕ್‌ನಲ್ಲಿ ಬಣ್ಣ ಹಚ್ಚುವ ಆಸೆ ಇದೆ ಎಂದಿದ್ದಾರೆ. ಗಜರಾಮದಲ್ಲಿ ಕುಸ್ತಿಪಟುವಾಗಿ ಸ್ವಲ್ಪ ಹೊಟ್ಟೆ ಬಿಟ್ಕೊಂಡಿದೀನಿ ಖ್ಯಾತ ಖಳನಟ ತೂಗುದೀಪ ಶ್ರೀನಿವಾಸ್ ಪುತ್ರ ಆಗಿದ್ದರೂ ದರ್ಶನ್ ಚಿತ್ರರಂಗದಲ್ಲಿ ಗುರ್ತಿಸಿಕೊಳ್ಳುವುದು, ಹೀರೊ ಆಗುವುದು ಅಷ್ಟು ಸುಲಭ ಇರಲಿಲ್ಲ.


ಸಾಕಷ್ಟು ಅವಮಾನಗಳನ್ನು ಎದುರಿಸಿದ್ದರು. ಜೀವನೋಪಾಯಕ್ಕಾಗಿ ಹಸು ಕಟ್ಟಿ ಹಾಲು ಕರೆದು ಮಾಡಿದ್ದರು. ಬಳಿಕ ನೀನಾಸಂ ಸೇರಿ ನಟನೆಯ ಪಟ್ಟುಗಳನ್ನು ಕಲಿತರು. ಚಿತ್ರರಂಗದಲ್ಲಿ ಲೈಟ್ ಬಾಯ್ ಆಗಿ ಕೆಲಸ ಮಾಡಲು ಆರಂಭಿಸಿದ್ದರು. ಮುಂದೆ ಸಣ್ಣಪುಟ್ಟ ಪಾತ್ರಗಳಲ್ಲಿ ನಟಿಸಿ 'ಮೆಜೆಸ್ಟಿಕ್' ಚಿತ್ರದಿಂದ ಹೀರೊ ಆಗಿದ್ದರು.

ಕಷ್ಟಪಟ್ಟು ಮೇಲೆ ಬಂದ ದರ್ಶನ್ ಸ್ಟಾರ್ ನಟನಾಗಿ ದೊಡ್ಡ ಅಭಿಮಾನಿ ಬಳಗ ಸೃಷ್ಟಿಸಿಕೊಂಡರು. ಆದರೆ ವಿವಾದಗಳಿಂದಲೂ ಸುದ್ದಿ ಆಗಿದ್ದರು. ಕೌಟುಂಬಿಕ ಕಲಹದಿಂದ ಜೈಲು ಸೇರಿದ್ದರು. ಇತ್ತೀಚೆಗೆ ರೇಣುಕಾಸ್ವಾಮಿ ಪ್ರಕರಣದಲ್ಲಿ ಎ2 ವಿಚಾರಣಾಧೀನ ಕೈದಿಯಾಗಿ ಜೈಲು ಸೇರುವಂತಾಗಿತ್ತು. ಇತ್ತೀಚೆಗೆ ಜಾಮೀನು ಪಡೆದು ಹೊರ ಬಂದಿದ್ದಾರೆ. ಸದ್ಯ ಬೆನ್ನು ನೋವಿನಿಂದ ಬಳಲುತ್ತಿರುವ ದರ್ಶನ್ ಆದಷ್ಟು ಬೇಗ ಚೇತರಿಸಿಕೊಂಡು ಮತ್ತೆ ಸಿನಿಮಾಗಳಲ್ಲಿ ನಟಿಸುವ ಲೆಕ್ಕಾಚಾರದಲ್ಲಿದ್ದಾರೆ.

ಆದಷ್ಟು ಬೇಗ 'ಡೆವಿಲ್' ಶೂಟಿಂಗ್ ಶುರುವಾಗಬೇಕಿದೆ. 'ನೂರೊಂದು ನೆನಪು' ಚಿತ್ರದ ಮೂಲಕ ಚಿತ್ರರಂಗಕ್ಕೆ ಬಂದಿದ್ದ ರಾಜವರ್ಧನ್ 'ಬಿಚ್ಚುಗತ್ತಿ' ಚಿತ್ರದಲ್ಲಿ ನಟಿಸಿ ಗಮನ ಸೆಳೆದಿದ್ದರು. ಬಳಿಕ 'ಪ್ರಣಯಂ' ಹಾಗೂ 'ಹಿರಣ್ಯ' ಸಿನಿಮಾಗಳಲ್ಲಿ ಮಿಂಚಿದ್ದರು. ಬಯೋಪಿಕ್ ಸಿನಿಮಾ ಮಾಡುವುದು ಅಷ್ಟು ಸುಲಭದ ಕೆಲಸವಲ್ಲ. ಅದರಲ್ಲೂ ಕನ್ನಡದಲ್ಲಿ ಅಂತಹ ಪ್ರಯತ್ನ ಮಾಡಿ ಗೆಲ್ಲುವುದು ನಿಜಕ್ಕೂ ಸವಾಲಿನ ಕೆಲಸ. ಅದಕ್ಕೆ ದಕ್ಷ ನಿರ್ದೇಶಕ, ಕಲಾವಿದರು ಹಾಗೂ ತಂತ್ರಜ್ಞರ ತಂಡ ಒಳ್ಳೆ ಚಿತ್ರಕಥೆ ಅಗತ್ಯವಿದೆ. ನಟ ರಾಜವರ್ಧನ್ ಆಸೆ ಈಡೇರುತ್ತಾ ಕಾದು ನೋಡಬೇಕಿದೆ.

# ರೂಪೇಶ್ ಶೆಟ್ಟಿ-ಸಾನ್ಯಾ ವಿವಾಹ ಯಾವಾಗ?





ಬಿಗ್‌ಬಾಸ್ ಕನ್ನಡ ಮನೆಯೊಳಗೆ ಲವ್ ಸ್ಟೋರಿಗಳನ್ನು ವೀಕ್ಷಕರು ನೋಡಿದ್ದಾರೆ. ಕೆಲವರು ಹೊರಗೆ ಬಂದ್ಮೇಲೆ ಮುಂದುವರೆಸಿದ್ದಾರೆ. ಮತ್ತೆ ಕೆಲವರು ಅದು ಕೇವಲ ಫ್ರೆಂಡ್‌ಶಿಪ್ ಅಂತಷ್ಟೇ ಹೇಳಿಕೊಂಡಿದ್ದೂ ಇದೆ.

ಬಿಗ್ ಬಾಸ್ ಮನೆಯೊಳಗೆ ಇಬ್ಬರೂ ಲವ್ ಮಾಡುತ್ತಿದ್ದಾರೆ ಅಂತ ಅನುಮಾನ ಹುಟ್ಟಾಕಿದಂತ ಜೋಡಿಗಳಲ್ಲಿ ರೂಪೇಶ್ ಶೆಟ್ಟಿ ಹಾಗೂ ಸಾನ್ಯಾ ಐಯ್ಯರ್ ಕೂಡ ನಿಲ್ಲುತ್ತಾರೆ. ಬಿಗ್ ಬಾಸ್ ಮನೆಯೊಳಗೆ ರೂಪೇಶ್ ಶೆಟ್ಟಿ ಹಾಗೂ ಸಾನ್ಯಾ ಐಯ್ಯರ್ ಇಬ್ಬರ ಕೆಮಿಸ್ಟ್ರಿ ಇಂತಹದ್ದೊಂದು ಗುಮಾನಿಯನ್ನು ಹುಟ್ಟಾಕಿದ್ದು ನಿಜ. ಆದರೆ, ಬಿಗ್ ಬಾಸ್ ಮನೆಯಿಂದ ಹೊರ ಬಂದ್ಮೇಲೆ ಈ ಜೋಡಿ ತಮ್ಮ ಲವ್ ಸ್ಟೋರಿ ಬಗ್ಗೆ ಎಲ್ಲೂ ಹೇಳಿಕೊಂಡಿಲ್ಲ.

ಮದುವೆ ಬಗ್ಗೆ ಅಂತೂ ಎಲ್ಲೂ ಮಾತಾಡಿಲ್ಲ. ಇಬ್ಬರೂ ತಮ್ಮ ವೃತ್ತಿ ಬದುಕಿನ ಕಡೆಗೆ ಗಮನ ಹರಿಸಿದ್ದಾರೆ. ಇತ್ತೀಚೆಗೆ ರೂಪೇಶ್ ಶೆಟ್ಟಿಗೆ ಸಾನ್ಯಾ ಐಯ್ಯರ್ ಜೊತೆ ಮದುವೆ ಯಾವಾಗ ಅನ್ನೋ ನೇರ ಪ್ರಶ್ನೆ ಎದುರಾಗಿತ್ತು. ಅದಕ್ಕೆ ಇಬ್ಬರ ಲವ್ ಸ್ಟೋರಿ ಅನ್ನೋದನ್ನು ಓಪನ್ ಆಗಿ ಹೇಳಿದ್ದಾರೆ.

ಗಿಚ್ಚಿ ಗಿಲಿಗಿಲಿ ಜಾಹ್ನವಿ ಬಿಗ್ ಬಾಸ್ ಮನೆಯಿಂದ ಹೊರ ಬಂದ್ಮೇಲೆ ರೂಪೇಶ್ ಶೆಟ್ಟಿ 'ಅಧಿಪತ್ರ' ಸಿನಿಮಾದಲ್ಲಿ ನಟಿಸಿದ್ದರು. ಆ ಸಿನಿಮಾ ಇದೇ ಫೆಬ್ರವರಿ 7ರಂದು ಬಿಡುಗಡೆಯಾಗುತ್ತಿದೆ. ಈ ಕಾರಣಕ್ಕೆ ಸಂದರ್ಶನಗಳನ್ನು ನೀಡುತ್ತಿದ್ದಾರೆ. ಇದೇ ಸಿನಿಮಾ ಮೂಲಕ ನಿರೂಪಕಿ ಜಾಹ್ನವಿ ನಾಯಕಿಯಾಗಿ ಚಿತ್ರರಂಗಕ್ಕೆ ಎಂಟ್ರಿ ಕೊಡುತ್ತಿದ್ದಾರೆ. ಈ ವೇಳೆ ಅವರದ್ದೇ ಜಾಹ್ನವಿ ಚಾನೆಲ್ ಯುಟ್ಯೂಬ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ರೂಪೇಶ್ ಶೆಟ್ಟಿ ತಮ್ಮ ಲವ್ ಸ್ಟೋರಿ, ಸಾನ್ಯಾ ಐಯ್ಯರ್ ಹಾಗೂ ಮದುವೆ ಬಗ್ಗೆ ಓಪನ್ ಆಗಿ ಮಾತಾನಾಡಿದ್ದಾರೆ. ರೂಪೇಶ್ ಶೆಟ್ಟಿಯನ್ನು ಸಂದರ್ಶನ ಮಾಡುತ್ತಿದ್ದ ಜಾಹ್ನವಿ ನೇರವಾಗಿ "ನಿಮ್ಮ ಹಾಗೂ ಸಾನ್ಯಾ ಮದುವೆ ಯಾವಾಗ?" ಎಂದು ಪ್ರಶ್ನೆ ಮಾಡಿದ್ದರು. ಅದಕ್ಕೆ ರೂಪೇಶ್ ಶೆಟ್ಟಿ ಕೊಟ್ಟ ಉತ್ತರ ಹೀಗಿತ್ತು. "ನೀವೇನು ಡೈರೆಕ್ಟ್ ಆಗಿ ಮದುವೆಗೆ ಬಂದುಬಿಟ್ರಿ. ಆ ತರಹದ ವಿಚಾರನೇ ಇಲ್ಲ. ನಾವು ತುಂಬಾನೇ ಒಳ್ಳೆಯ ಫ್ರೆಂಡ್ಸ್ ಆಗಿದ್ದೇವೆ. ಹೊರಗೆ ಬಂದ್ಮೇಲೂ ತುಂಬಾ ಒಳ್ಳೆ ಸ್ನೇಹಿತರಾಗಿದ್ದೇವೆ. ಕಾಲ್ ಮಾಡುತ್ತೇವೆ, ಮಾತಾಡುತ್ತೇವೆ. ಮೊನ್ನೆ ಅವರ ಸಿನಿಮಾ ರಿಲೀಸ್ ಇದ್ದಾಗ ಬರ್ತ್‌ಡೇ ದಿನಾನೂ ಊರಿಂದ ಬಂದಿದ್ದೇನೆ. ಆತರ ಎಫರ್ಟ್ಸ್ ಇದ್ದೇ ಇರುತ್ತೆ. ಯಾಕಂದ್ರೆ ಫ್ರೆಂಡ್ ಅಂದ್ಮೇಲೆ ಫ್ರೆಂಡ್. ಅದು ಮದುವೆವರೆಗೂ ಹೋಗುವಂತಹ ಫ್ರೆಂಡ್‌ಶಿಫ್ ಅಲ್ಲ ಅನ್ನೋ ಕ್ಲಾರಿಟಿ ನಮಗೆ ಇದೆ." ಎಂದಿದ್ದಾರೆ. ಇದೇ ಸಂದರ್ಶನದಲ್ಲಿ ಬಿಗ್ ಬಾಸ್ ಮನೆಯಿಂದ ಹೊರ ಬಂದ್ಮೇಲೆ ಅವರು, ಅವರ ಕೆಲಸದಲ್ಲಿ ಬ್ಯುಸಿ ಇದ್ದಾರೆ. ತಾನು ತನ್ನ ಕೆಲಸದಲ್ಲಿ ಬ್ಯುಸಿ ಆಗಿರುವುದಾಗಿ ಹೇಳಿಕೊಂಡಿದ್ದಾರೆ. ಈ ಮಧ್ಯದಲ್ಲಿ ಯಾವಾಗಲಾದರೂ ಫೋನ್ ಮಾಡಿ ಮಾತಾಡೋದು, ಭೇಟಿಯಾಗೋದು ಇರುತ್ತೆ. ಇದು ಕೇವಲ ಪ್ಯೂರ್ ಫ್ರೆಂಡ್‌ಶಿಫ್. ಇದರಲ್ಲಿ ಮದುವೆ ಎಲ್ಲ ಡೌಟ್ ಎಂದು ಸ್ಪಷ್ಟ ಕೊಟ್ಟಿದ್ದಾರೆ. ಹಾಗಿದ್ದರೆ, ಬಿಗ್ ಬಾಸ್ ಮನೆಯೊಳಗೆ ಇಬ್ಬರಿಗೂ ಪ್ರೀತಿ ಹುಟ್ಟಿರಲಿಲ್ವಾ? ಇಂತಹದ್ದೊಂದು ಪ್ರಶ್ನೆ ಹುಟ್ಟಿಕೊಳ್ಳುವುದು ಸತ್ಯ. ಅದಕ್ಕೂ ರೂಪೇಶ್ ಶೆಟ್ಟಿ ಕ್ಲಾರಿಟಿಕೊಟ್ಟಿದ್ದಾರೆ.

"ಬಿಗ್‌ಬಾಸ್ ಮನೆಯೊಳಗೆ ಇರುವಾಗಲೂ ನಿಜವಾದ ಸ್ನೇಹವೇ ಇತ್ತು. ಬಿಗ್‌ಬಾಸ್ ಮನೆಯೊಳಗೆ ಹೋದಾಗ ಯಾರಾದರೂ ಬೇಕಾಗುತ್ತಾರೆ. ಒಳ್ಳೆಯ ಕನೆಕ್ಷನ್ ಸಿಕ್ಕಿದರೆ, ಅದು ಒಳ್ಳೆಯ ಗಿಫ್ಟ್ ಅಂತ ಅನಿಸುತ್ತೆ. ಹೊರಗಡೆ ಬಂದಾಗ ಆ ಫ್ರೆಂಡ್‌ಶಿಪ್ ಹಾಗೇ ಇರುತ್ತೆ. ಒಳಗಡೆ ಕಂಡಿದ್ದು ಲವ್ ಅಂತಾನೇ ಹೇಳುವುದಕ್ಕೆ ಆಗಲ್ಲ. ಒಳಗಡೆ ಇರುವ ಫ್ರೆಂಡ್‌ಶಿಪ್ ಕೂಡ ಲವ್ ತರ ಕಾಣಬಹುದು. ಲವ್ ಅಂದರೆ ಅದೊಂತರ ಕಮಿಟ್ಮೆಂಟ್ ಅಲ್ವಾ? ಅದಕ್ಕೆ ಹಲವು ಹಂತಗಳು ಇರುತ್ತವೆ. ಸದ್ಯ ಲವ್ ಇಲ್ಲ ಅನ್ನೋದು ಸತ್ಯ. ಫ್ರೆಂಡ್‌ಶಿಪ್ ಆದ್ಮೇಲೆ ಲವ್ ಆಗಬಹುದು ಅದು ಒಳ್ಳೆಯ ಪ್ರಶ್ನೆ" ಎಂದು ಕೊನೆಯಲ್ಲಿ ಹೇಳಿದ್ದಾರೆ.

# ಫೆಬ್ರವರಿಯಲ್ಲಿ ಬಿಡುಗಡೆ ಆಗ್ತಿರೋ ಕನ್ನಡ ಚಿತ್ರಗಳು

2025ರ ಮೊದಲ ತಿಂಗಳು ಕಳೆದೇ ಹೋಯ್ತು. ಕಳೆದ ಒಂದು ತಿಂಗಳಲ್ಲಿ ಕನ್ನಡ ಚಿತ್ರರಂಗದ ಸಾಧನೆ ಹೇಳಿಕೊಳ್ಳುವಂತಿಲ್ಲ. ಇದ್ದಿದ್ದರಲ್ಲಿ 'ಛೂ ಮಂತರ್' ಸಿನಿಮಾ ತಕ್ಕ ಮಟ್ಟಿಗೆ ಸದ್ದು ಮಾಡಿತ್ತು. ಫಾರೆಸ್ಟ್, ನಿಮ್ಮ ವಸ್ತುಗಳಿಗೆ 'ನೀವೇ ಜವಾಬ್ದಾರರು' ಹಾಗೂ 'ನೋಡಿದವರು ಏನಂತಾರೆ' ಚಿತ್ರಗಳ ಬಗ್ಗೆ ಮೆಚ್ಚುಗೆ ವ್ಯಕ್ತವಾಯಿತು.

ಆದರೆ ಪ್ರೇಕ್ಷಕರು ದೊಡ್ಡಮಟ್ಟದಲ್ಲಿ ಚಿತ್ರಮಂದಿರಕ್ಕೆ ಬರಲಿಲ್ಲ. ದೊಡ್ಡ ಸಿನಿಮಾಗಳು ಇಲ್ಲದೇ ಚಿತ್ರಮಂದಿರ ಮಾಲೀಕರು ಕಂಗೆಟ್ಟಿದ್ದಾರೆ. ಮತ್ತೆ ಚಿತ್ರಮಂದಿರಗಳನ್ನು ಕೆಲ ದಿನಗಳ ಕಾಲ ಮುಚ್ಚಬೇಕು ಎನ್ನುವ ಲೆಕ್ಕಾಚಾರದಲ್ಲಿದ್ದಾರೆ. ಅದೆಲ್ಲದರ ನಡುವೆ ಫೆಬ್ರವರಿಯಲ್ಲಿ ಯಾವೆಲ್ಲಾ ಕನ್ನಡ ಸಿನಿಮಾಗಳು ತೆರೆಗೆ ಬರ್ತಿವೆ. ಯಾವ ಸಿನಿಮಾ ನಿರೀಕ್ಷೆ ಹುಟ್ಟಿಸಿದೆ ಎನ್ನುವ ಚರ್ಚೆ ಶುರುವಾಗಿದೆ.

ಈ ವಾರ 5 ಚಿತ್ರಗಳು ಬಿಡುಗಡೆಗೆ ಸಜ್ಜಾಗಿವೆ. ಕಿಶೋರ್ ನಟನೆಯ 'ಅನಾಮಧೇಯ ಅಶೋಕ್ ಕುಮಾರ್', ರೂಪೇಶ್ ಶೆಟ್ಟಿ ಅಭಿನಯದ 'ಅಧಿಪತ್ರ', ರಾಜವರ್ಧನ್ ನಟನೆಯ 'ಗಜರಾಮ', ಕಿರುತೆರೆ ನಟ ದೀಪಕ್ ಸುಬ್ರಮಣ್ಯ ಲೇಡಿ ಗೆಟಪ್ ಹಾಕಿರುವ 'ಮಿಸ್ಟರ್ ರಾಣಿ' ಹಾಗೂ ಮಿಲಿಂದ್ ನಟನೆಯ 'ಅನ್‌ಲಾಕ್ ರಾಘವ' ತೆರೆಗೆ ಬರ್ತಿದೆ. 'ನಮ್ಮ ಪ್ರೀತಿಯ




ರಾಮು' ರೀ-ರಿಲೀಸ್ ವ್ಯಾಲೆಂಟೈನ್ಸ್ ಡೇ ಸಂಭ್ರಮದಲ್ಲಿ ಕೂಡ 4 ಚಿತ್ರಗಳು ಬಿಡುಗಡೆ ಆಗಲಿದೆ. ಅದರಲ್ಲಿ ದರ್ಶನ್ ನಟನೆಯ 'ನಮ್ಮ ಪ್ರೀತಿಯ ರಾಮು' ಸಿನಿಮಾ ದೊಡ್ಡಮಟ್ಟದಲ್ಲಿ ರೀ-ರಿಲೀಸ್ ಆಗಲಿದೆ. 2003ರಲ್ಲಿ ಬಂದಿದ್ದ ಈ ಸಿನಿಮಾ ಅಷ್ಟಾಗಿ ಸದ್ದು ಮಾಡಿರಲಿಲ್ಲ. ಫೆಬ್ರವರಿ 16ಕ್ಕೆ ದರ್ಶನ್ ಹುಟ್ಟುಹಬ್ಬ. ಅದಕ್ಕಿಂತ ಎರಡು ದಿನ ಮುನ್ನ ಈ ಸಿನಿಮಾ ತೆರೆಗೆ ತರುವ ತಯಾರಿ ನಡೀತಿದೆ. ಈಗಾಗಲೇ ಪೋಸ್ಟರ್‌ಗಳು ಬಿಡುಗಡೆ ಆಗುತ್ತಿದೆ. ಟ್ರೈಲರ್ ಕಟ್ ಮಾಡಲಾಗಿದೆ.

5ಆಯಲ್ಲಿ ಡಿಟಿಎಸ್ ಸೌಂಡ್ ಜೊತೆಗೆ ಸಿನಿಮಾ ಹೊರ ರೂಪದಲ್ಲಿ ಪ್ರೇಕ್ಷಕರ ಮುಂದೆ ಬರಲಿದೆ. 'ರಾಮು' ಜೊತೆ 3 ಸಿನಿಮಾ 'ನಮ್ಮ ಪ್ರೀತಿಯ ರಾಮು' ಜೊತೆ ಇನ್ನು 3 ಸಿನಿಮಾಗಳು ಫೆಬ್ರವರಿ 14ಕ್ಕೆ ತೆರೆಗೆ ಬರಲಿದೆ. ಬಹಳ ಹಿಂದೆ ಶುರುವಾಗಿದ್ದ 'ರಾಜು ಜೇಮ್ಸ್ ಬಾಂಡ್' ಸಿನಿಮಾ ಅಂದೇ ಬಿಡುಗಡೆ ಆಗುತ್ತಿದೆ. 'ಭುವನಂ ಗಗನಂ' ಹಾಗೂ 'ನಿಮಿತ್ತ ಮಾತ್ರ' ಸಿನಿಮಾ ಕೂಡ ಲಿಸ್ಟ್‌ನಲ್ಲಿದೆ. ಒಟ್ಟು ನಾಲ್ಕು ಚಿತ್ರಗಳು ವ್ಯಾಲಂಟೈನ್ಸ್ ಡೇಗೆ ಬರಲಿದೆ.

ಫೆ.21ಕ್ಕೆ 3 ಚಿತ್ರಗಳು ಬಹಳ ಹಿಂದೆ ಶುರುವಾಗಿದ್ದ 'ವಿಷ್ಣುಪ್ರಿಯ' ಚಿತ್ರಕ್ಕೆ ಅಂತೂ ಇಂತೂ ಇದೇ ತಿಂಗಳು ಬಿಡುಗಡೆ ಭಾಗ್ಯ ಸಿಗಲಿದೆ. ಈ ಚಿತ್ರದಲ್ಲಿ ಕೆ. ಮಂಜು ಪುತ್ರ ಶ್ರೇಯಸ್




ಜೊತೆ ಕಣ್ಸನ್ನೆ ಹುಡುಗಿ ಪ್ರಿಯಾ ವಾರಿಯರ್ ನಾಯಕಿಯಾಗಿ ನಟಿಸಿದ್ದಾರೆ. ಈಗಾಗಲೇ ಚಿತ್ರದ ಟ್ರೈಲರ್, ಸಾಂಗ್ಸ್ ಗಮನ ಸೆಳೆದಿದೆ. ಫೆಬ್ರವರಿ 21ಕ್ಕೆ 'ಭಾವ ತೀರ ಯಾನ' ಹಾಗೂ 'ಅಪಾಯವಿದೆ ಎಚ್ಚರಿಕೆ' ಎಂಬ ಮತ್ತೆರಡು ಚಿತ್ರಗಳು ತೆರೆಗೆ ಬರ್ತಿದೆ. ಶಿವರಾತ್ರಿಗೆ 'ರಾಕ್ಷಸ' ತಿಂಗಳ ಕೊನೆಗೆ ಶಿವರಾತ್ರಿ ಸಂಭ್ರಮದಲ್ಲಿ ಪ್ರಜ್ವಲ್ ದೇವರಾಜ್ ನಟನೆಯ 'ರಾಕ್ಷಸ' ಸಿನಿಮಾ ರಿಲೀಸ್ ಆಗಲಿದೆ. ಪ್ರಜ್ವಲ್ ನಟನೆಯ 6 ಚಿತ್ರಗಳು ಇದೇ ವರ್ಷ ತೆರೆಗೆ ಬರುವ ಸಾಧ್ಯತೆಯಿದೆ. ಕಳೆದ ವಾರ 'ಗಣ' ಎಂಬ ಸಿನಿಮಾ ಬಂದಿತ್ತು. ಆದರೆ ಸರಿಯಾದ ಪ್ರಚಾರ ಇಲ್ಲದೇ ಆ ಸಿನಿಮಾ ಬಂದು ಹೋಗಿದ್ದು ಯಾರಿಗೂ ಗೊತ್ತಾಗಲಿಲ್ಲ. ಪ್ರಜ್ವಲ್ ಸುಖಾಸುಮ್ಮನೆ ಯಾಕೆ ಸಿನಿಮಾಗಳಲ್ಲಿ ನಟಿಸುತ್ತಾರೆ? ಪ್ರಚಾರ ಯಾಕೆ ಮಾಡಲ್ಲ ಎಂದು ಕೇಳುವವರು ಇದ್ದಾರೆ.




# 14 ವರ್ಷ ಜೊತೆಗಿದ್ದು ದೂರ ಆಗಿಬಿಟ್ವಾ...?



ಕಿರುತೆರೆಯಲ್ಲಿ ಮಿಂಚಿದವರು ಸಿನಿಮಾದಲ್ಲಿ ಕಾಣಿಸಿಕೊಳ್ಳುವುದು ಹೊಸತೇನು ಅಲ್ಲ. ಆದರೆ, ನ್ಯೂಸ್ ಆಂಕರ್ ಆಗಿದ್ದವರು ಇಂದು ಸಿನಿಮಾಗೆ ನಾಯಕಿಯಾದವರು ತುಂಬಾನೇ ವಿರಳ. ಇಂತಹವರಲ್ಲಿ ಜಾಹ್ನವಿ ಕೂಡ ಒಬ್ಬರು. ಬಿಗ್ ಬಾಸ್ ಖ್ಯಾತಿಯ ರೂಪೇಶ್ ಶೆಟ್ಟಿ ನಾಯಕನಾಗಿ ನಟಿಸಿರುವ 'ಅಧಿಪತ್ರ' ಸಿನಿಮಾಗೆ ಜಾಹ್ನವಿ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಇವರ ಸಿನಿಮಾ ಇದೇ ವಾರ ಬಿಡುಗಡೆಯಾಗುತ್ತಿದೆ. 'ಅಧಿಪತ್ರ' ಸಿನಿಮಾದ ಪ್ರಮೋಷನ್‌ನಲ್ಲಿ ಬ್ಯುಸಿಯಾಗಿರುವ ನಟಿ ಜಾಹ್ನವಿ ತಮ್ಮ ಬದುಕಿನ ಬಗ್ಗೆ ಓಪನ್ ಆಗಿ ಮಾತಾಡಿದ್ದಾರೆ. ನಿರೂಪಣೆಯಿಂದ ಸಿನಿಮಾ ಕಡೆ ವಾಲಿದಾಗ ಅವರ ಆಪ್ತರ ಪ್ರತಿಕ್ರಿಯೆ ಹೇಗಿತ್ತು? ವಿಚ್ಛೇದನಕ್ಕೆ ಸಿನಿಮಾ ಹಾಗೂ ರಿಯಾಲಿಟಿ ಶೋ ಕಾರಣನಾ? 14 ವರ್ಷದ ದಾಂಪತ್ಯಕ್ಕೆ ಅಂತ್ಯ ಹಾಡಿದ ಬಳಿಕ ಬದುಕು ಹೇಗಿದೆ?


ಜಾಹ್ನವಿ ಮೊದಲು ನ್ಯೂಸ್ ಚಾನೆಲ್‌ಗಳಲ್ಲಿ ಆಂಕರ್ ಆಗಿ ಕೆಲಸ ಮಾಡಿದವರು. ಬಳಿಕ ರಿಯಾಲಿಟಿ ಶೋಗಳಲ್ಲಿ ಹಾಗೂ ಸಿನಿಮಾಗಳಲ್ಲಿ ನಟಿಸಿದ್ದಾರೆ. ನಿರೂಪಣೆ ಬಿಟ್ಟು ನಟನೆಗೆ ಇಳಿದಾಗ ಅವರ ಆಪ್ತರು ಏನಂದರು? ಅನ್ನೋದನ್ನು ರಿವೀಲ್ ಮಾಡಿದ್ದಾರೆ. "ನಾನು ಆಂಕರಿಂಗ್ ಬಿಟ್ಟು ಸಿನಿಮಾ ಮಾಡುವುದಕ್ಕೆ ಬಂದಾಗ ಎಲ್ಲರೂ ಖುಷಿ ಪಟ್ಟರು. ಯಾಕಂದ್ರೆ, ನಾನು ಅಂತಹ ಸರ್ಕಲ್ ಅನ್ನೇ ಇಟ್ಟುಕೊಳ್ಳುವುದು. ಇನ್ನು ಹೊರಗಡೆಯವರು ಏನೇ ಮಾತಾಡಿದರೂ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ. ಹೊರಗಡೆಯವರಿಂದ ಏನು ಮಾತು ಬಂದಿದೆ ಅನ್ನೋದು ಕೂಡ ನನಗೆ ಗೊತ್ತಿಲ್ಲ. ನನ್ನ ಸುತ್ತಮುತ್ತ, ನಮ್ಮ ಅಮ್ಮ ಅವರಿಗೆಲ್ಲ ತುಂಬಾನೇ ಖುಷಿಯಿದೆ. ಮೊದಲು ಅವರಿಗೆ ಸ್ವಲ್ಪ ಭಯವಿತ್ತು. ಯಾರೂ ನೆಗೆಟಿವ್ ಆಗಿ ಮಾತಾಡಿಲ್ಲ. ಎಲ್ಲರೂ ಪಾಸಿಟಿವ್ ಆಗಿಯೇ ಮಾತಾಡಿದ್ದಾರೆ." ಎನ್ನುತ್ತಾರೆ ಜಾಹ್ನವಿ. ವಿಚ್ಛೇದನದ ಬಳಿಕ ಜೀವನ ಹೇಗಿದೆ ಅನ್ನೋದನ್ನು ರಿವೀಲ್ ಮಾಡಿದ್ದಾರೆ. "ಮುಂಚೆಗಿಂತಲೂ ತುಂಬಾನೇ ಫ್ರೀಯಾಗಿ ಆ ಫ್ರೀಡಂ ಅನ್ನು ಎಂಜಾಯ್ ಮಾಡುತ್ತಿದ್ದೇನೆ. ಅಂದರೆ, ಮನಸ್ಸಿಗೆ ನೆಮ್ಮದಿ ಇದೆ. ಇವತ್ತು ಇಂಟರ್‌ವ್ಯೂ ಇದ್ದರೆ, ನಾಳೆ ನನ್ನದು ಯೂಟ್ಯೂಬ್ ಕೆಲಸ ಮಾಡುತ್ತೇನೆ. ಸವಿರುಚಿ ಶುರುವಾದರೆ ಅಲ್ಲಿ ಕೆಲಸ ಮಾಡುತ್ತೇನೆ. ವೇದಿಕೆ ಮೇಲೆ ನಿರೂಪಣೆ ಮಾಡುವುದಕ್ಕೆ ಸಿಕ್ಕರೆ ಅಲ್ಲಿ ನಿರೂಪಣೆ ಮಾಡುತ್ತೇನೆ.

ಎಲ್ಲಾದರೂ ಫಾರಿನ್‌ಗೆ ನಿರೂಪಣೆ ಮಾಡುವುದಕ್ಕೆ ಅವಕಾಶ ಸಿಕ್ಕರೆ ಅಲ್ಲಿಗೆ ಹೋಗುತ್ತೇನೆ. ನನಗೆ ತುಂಬಾ ಕೆಲಸ ಮಾಡಬೇಕು. ಹೆಸರು ಮಾಡಬೇಕು ಅಂತ ಮೊದಲಿನಿಂದಲೂ ಆಸೆ. ಈಗ ಯಾವುದೇ ರಿಸ್ಟ್ರಿಕನ್ ಇಲ್ಲದೆ. ನನ್ನ ಲೈಫ್‌ನ ನಿರ್ಧಾರವನ್ನು ನಾನೇ ತೆಗೆದುಕೊಂಡು ನನ್ನ ಲೈಫ್ ಅನ್ನು ನಾನೇ ರೂಲ್ ಮಾಡುತ್ತಿದ್ದೇನೆ. ಮುಂಚೆ ಬೇರೆಯವರು ಮಾಡುತ್ತಿದ್ದರು." ಎನ್ನುತ್ತಾರೆ. ವಿಚ್ಛೇದನಕ್ಕೂ ಮುನ್ನ ಒಂದು ಸಿನಿಮಾಗೆ ಆಫರ್ ಬಂದಾಗ ಪತಿಗೂ ಇಷ್ಟ ಆಗಬೇಕಿತ್ತು.

ಒಂದು ವೇಳೆ ಅವರು ನೋ ಅಂದರೆ ಆಗುತ್ತಿರಲಿಲ್ಲ. ಇಬ್ಬರೂ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಗುತ್ತಿತ್ತು. ಹಣಕಾಸುಗಳ ಲೆಕ್ಕದಲ್ಲಿ ಹಿಂದೆ ಮುಂದೆ ಆಗುತ್ತಿತ್ತು. ಊರಿಗೆ ಹೋಗಬೇಕು ಅಂದರೆ, ಇಬ್ಬರೂ ಸೇರಿಕೊಂಡೇ ನಿರ್ಧಾರ ಮಾಡಬೇಕಾಗಿತ್ತು. ಕೆಲವೊಂದು ತಪ್ಪು ತಿಳುವಳಿಕೆಗಳಿಂದ ಗಲಾಟೆಗಳು ಆಗುತ್ತಿತ್ತು. ಈಗ ಆ ವ್ಯಕ್ತಿಯಿಲ್ಲ. ಹೀಗಾಗಿ ಮಗ, ಭವಿಷ್ಯದ ಯೋಚನೆಗಳು ಇದೆ" ಎಂದಿದ್ದಾರೆ. ಕೆಲವೊಮ್ಮೆ ಅವರ ದಾಂಪತ್ಯ ಜೀವನವನ್ನು ನೆನೆಸಿಕೊಂಡು ದಿಢೀರನೇ ಅಳು ಬಂದುಬಿಡುತ್ತಂತೆ. ಎಲ್ಲಾ ನೆನಪಿಸಿಕೊಂಡಿ ಸಂಕಟ ಆಗುತ್ತೆ ಎಂದಿದ್ದಾರೆ. "ಸುಮ್ಮನೆ ಒಮ್ಮೆ ಮಲಗಿದ್ದಾಗ ತಕ್ಷಣ ಎಚ್ಚರ ಆಗುತ್ತೆ. 14 ವರ್ಷ ಜೊತೆಗಿದ್ದು ದೂರ ಆಗಿಬಿಟ್ವಾ? ಅಂತ ಅನಿಸುತ್ತೆ. ಅದೊಂತರ ಸಂಕಟ ತರ ಫೀಲ್ ಆಗುತ್ತೆ. ಆಮೇಲೆ ನನ್ನನ್ನು ನಾನೇ ಕಂಟ್ರೋಲ್ ಮಾಡಿಕೊಳ್ಳುತ್ತೇನೆ. ನಾವು ಎಷ್ಟೇ ಸ್ಟ್ರಾಂಗ್ ಆಗಿ ಕಾಣಿಸಿಕೊಳ್ಳಬಹುದು. ನಾವು ಮನುಷ್ಯರೇ ಅಲ್ವಾ? 14 ವರ್ಷದ ಜರ್ನಿಯಲ್ಲಿ ಎಷ್ಟೇ ಕೆಟ್ಟದ್ದು ನಡೆದಿದ್ದರೂ ಒಂದಾದರೂ ಒಳ್ಳೆಯದು ಇದ್ದೇ ಇರುತ್ತೆ ಅಲ್ವಾ? ಆದರೆ, ತಕ್ಷಣ ಸರಿ ಹೋಗುತ್ತೇನೆ." ಎಂದಿದ್ದಾರೆ ಜಾಹ್ನವಿ. ಹಾಗೇ ಸಿನಿಮಾ ಮಾಡುವುದಕ್ಕಾಗಲಿ, ಗಿಚ್ಚಿ ಗಿಲಿಗಿಲಿ ಮಾಡುವುದಕ್ಕಾಗಲಿ ಪರಿಯೊಂದಿಗೆ ವಿಚ್ಛೇದನ ಪಡೆದಿದ್ದಲ್ಲ. ಅದಕ್ಕೆ ಬೇರೆ ಕಾರಣನೇ ಇದೆ. ಇದನ್ನೆಲ್ಲ ಮಾಡುವುದಕ್ಕೆ ಬಿಟ್ಟಿದ್ದರೆ ಜೊತೆಯಲ್ಲಿ ಇರಬಹುದು ಅನ್ನೋ ಆಲೋಚನೆ ಬಂದೇ ಇಲ್ಲ. ಇಬ್ಬರು ಬೇರೆಯಾಗುವುದಕ್ಕೆ ಕಾರಣವೇ ಬೇರೇನೆ ಇದೆ ಎಂದು ಜಾಹ್ನವಿ ಹೇಳಿಕೊಂಡಿದ್ದಾರೆ.

# ವರ್ಷಗಳ ನಂತರ ರಮ್ಯಾ-ರಕ್ಷಿತಾ ಮುಖಾಮುಖಿ...!





ರಮ್ಯಾ ಮತ್ತು ರಕ್ಷಿತಾ, ಒಂದು ಕಾಲದಲ್ಲಿನ ಕನ್ನಡ ಚಿತ್ರರಂಗದ ಎರಡು ಮುತ್ತುಗಳು. ವಜ್ರೇಶ್ವರಿ ಕಂಬೈನ್ಸ್ ಮೂಲಕ ಪುನೀತ್ ರಾಜ್ ಕುಮಾರ್ ಅವರ ಚಿತ್ರದ ಮೂಲಕವೇ ಚಿತ್ರರಂಗಕ್ಕೆ ಬಂದ ಇಬ್ಬರು ಆ ನಂತರ ಜಿದ್ದಿಗೆ ಬಂದರು. ಒಂದರ್ಥದಲ್ಲಿ ನಾನಾ-ನೀನಾ ಎನ್ನುವ ಮನಸ್ಥಿತಿ ಇಬ್ಬರಲ್ಲಿ ಕೂಡ ಇತ್ತು. ಕೇವಲ ಕನ್ನಡದಲ್ಲಿ ಸ್ಟಾರ್‌ಗಳ ಜೊತೆ ತೆರೆ ಹಂಚಿಕೊಳ್ಳುವ ವಿಚಾರ ಮಾತ್ರವಲ್ಲ ಅಕ್ಕ-ಪಕ್ಕದ ರಾಜ್ಯದಲ್ಲಿ ಮೆರೆಯುವ ಹಂಬಲ ಇಬ್ಬರಲ್ಲಿ ಕೂಡ ಇತ್ತು. ಈ ಕಡೆ ಎಕ್ಸ್‌ಕ್ಯೂಸ್ ಮೀ, ರಂಗ ಎಸ್ ಎಸ್ ಎಲ್ ಸಿ, ಕಂಠಿ, ಆಕಾಶ್, ಅಮೃತಧಾರೆ, ಹೀಗೆ ರಮ್ಯಾ ಒಂದಾದ ಮೇಲೊಂದು ಚಿತ್ರಗಳ ಮೂಲಕ ರಮ್ಯಾ ಸ್ಯಾಂಡಲ್‌ವುಡ್ ಕ್ವೀನ್ ಎಂದು ಕರೆಸಿಕೊಂಡರೆ ರಕ್ಷಿತಾ ಧಮ್, ಗೋಕರ್ಣ, ಲವ್, ಕಲಾಸಿಪಾಳ್ಯ, ಡೆಡ್ಲಿ ಸೋಮ, ಅಯ್ಯ, ಸುಂಟರಗಾಳಿ ಚಿತ್ರಗಳ ಮೂಲಕ ಕನ್ನಡಿಗರ ಪಾಲಿಗೆ ಕ್ರೇಜಿ ಕ್ವೀನ್ ಆದರು.

ತನನಂ ತನನಂ ಚಿತ್ರದಲ್ಲಿ ಕವಿತಾ ಲಂಕೇಶ್ ಇಬ್ಬರನ್ನು ಒಂದು ಮಾಡುವ ಪ್ರಯತ್ನ ಮಾಡಿದರು ಕೂಡ ಚಿತ್ರದ ಚಿತ್ರೀಕರಣದ ಸಮಯದಲ್ಲಿ ಇಬ್ಬರ ನಡುವೆ ಮುನಿಸು ಇದ್ದೇ ಇತ್ತು. ಸಂದರ್ಶನವೊಂದರಲ್ಲಿ ಖುದ್ದು ರಕ್ಷಿತಾ ಈ ಮಾತನ್ನು ಒಪ್ಪಿಕೊಂಡಿದ್ದರು. ರ್ಯಾಪಿಡ್ ರಶ್ಮಿ ಅವರಿಗೆ ಹಿಂದೆ ನೀಡಿದ್ದ ಸಂದರ್ಶನದಲ್ಲಿ ರಕ್ಷಿತಾ ತಮ್ಮ ನಡುವೆ ಇದ್ದ ವೈಮನಸ್ಸು, ದ್ವೇಷದ ಬಗ್ಗೆ ಮಾತನಾಡಿದ್ದರು. ನಮ್ಮ ನಡುವೆ ಆ ಜಗಳ ಇಲ್ಲದಿದ್ದರೆ ನಮ್ಮ ಸಿನಿಮಾ ಪಯಣವೇ ಅಪೂರ್ಣವಾಗಿರುತ್ತಿತ್ತು ಎಂದು ನನಗೆ ಹಲವು ಬಾರಿ ಅನಿಸಿದ್ದು ಇದೆ, ಆ ಒಂದು ದ್ವೇಷ ಇದ್ದಿದ್ದಕ್ಕೆ ನಾವು ಜಿದ್ದಿಗೆ ಬಿದ್ದವರಂತೆ ಸಾಧನೆ ಮಾಡಲು ಸಾಧ್ಯವಾಯಿತು ಎಂದು ಹೇಳಿದ್ದ ರಕ್ಷಿತಾ ಅದನ್ನು ಮಾಡಬೇಕು ಇದನ್ನು ಮಾಡಬೇಕು ಎಂಬ ತುಡಿತ ಇಬ್ಬರಲ್ಲಿಯೂ ಇತ್ತು ಆದರೆ ಸ್ಪರ್ಧೆ ಆರೋಗ್ಯಕರವಾಗಿರಲಿಲ್ಲ ಎಂದು ಹೇಳಿದ್ದರು. ಇಂಥಾ ರಮ್ಯಾ ಮತ್ತು ರಕ್ಷಿತಾ ಈ ಹಳೆಯ ವಿಚಾರಗಳನ್ನೆಲ್ಲ ಮರೆತು ಸ್ನೇಹಿತರಾಗಿ ತುಂಬಾ ದಿನಗಳಾಗಿವೆ. ಇಬ್ಬರಲ್ಲಿಯೂ ಈಗ ಪರಸ್ಪರ ಗೌರವದ ಮನೋಭಾವನೆ ಇದೆ. ಇದಕ್ಕೆ ಕೈಗನ್ನಡಿ ಎಂಬಂತೆ ರಮ್ಯಾ ಬಗ್ಗೆ ರಕ್ಷಿತಾ ಮತ್ತೊಮ್ಮೆ ಮಾತನಾಡಿದ್ದಾರೆ. ಹೌದು, ರಕ್ಷಿತಾ ಅವರ ಸಹೋದರ ರಾಣಾ ಹೊಸ ಬದುಕಿಗೆ ಮುನ್ನುಡಿ ಬರೆಯಲು ಸಿದ್ಧರಾಗಿದ್ದಾರೆ. ಗ್ರಹಸ್ಥಾಶ್ರಮಕ್ಕೆ ಕಾಲಿಡಲಿದ್ದಾರೆ. ಸಹಜವಾಗಿ ಅದ್ಧೂರಿಯಾಗಿ ನಡೆಯಲಿರುವ ಈ ಮದುವೆಗೆ ಕನ್ನಡ ಚಿತ್ರರಂಗದ ಅನೇಕರು ಸಾಕ್ಷಿಯಾಗಲಿದ್ದಾರೆ. ನವ ಜೋಡಿಗೆ ಶುಭಾಶಯವನ್ನು ಕೋರಲಿದ್ದಾರೆ. ಇನ್ನು ಮದುವೆಯ ತಯಾರಿಯನ್ನು ಪ್ರೇಮ್ ಮತ್ತು ರಕ್ಷಿತಾ ಆಗಲೇ ಶುರು ಮಾಡಿದ್ದಾರೆ. ಮದುವೆಯ ಆಮಂತ್ರಣ ಪತ್ರಿಕೆ ಕೊಡುತ್ತಿದ್ದಾರೆ. ಈ ಸಮಯದಲ್ಲಿ ರಾಣಾ ಮದುವೆಗೆ ರಮ್ಯಾ ಬರುತ್ತಾರಾ ಎನ್ನುವ ಪ್ರಶ್ನೆ ರಕ್ಷಿತಾಗೆ ಎದುರಾಗಿದೆ. ಈ ಪ್ರಶ್ನೆಗೆ ನ್ಯೂಸ್ ಫಸ್ಟ್ ಗೆ ನೀಡಿದ ಸಂದರ್ಶನದಲ್ಲಿ ಉತ್ತರ ನೀಡಿರುವ ರಕ್ಷಿತಾ ಮದುವೆ ಆಮಂತ್ರಣ ಪತ್ರಿಕೆ ಎಲ್ಲರಿಗೆ ಕೊಡಲಾಗಿದೆ. ರಮ್ಯಾ ಅವರಿಗೆ ಕೂಡ ಇನ್ವಿಟೇಷನ್ ಕಾರ್ಡ್ ತಲುಪಿಸಲಾಗಿದೆ. ಆದರೆ ರಮ್ಯಾ ಸದ್ಯಕ್ಕೆ ಊರಲ್ಲಿ ಇಲ್ಲ, ನಾನು ಫೋನ್ ಮೂಲಕ ಅವರಿಗೆ ಮದುವೆಯ ವಿಚಾರ ಹೇಳಿದ್ದೇನೆ, ಇಲ್ಲ ಖಂಡಿತ ಬಂದೇ ಬರುತ್ತೇನೆ ಮಿಸ್ ಮಾಡಲ್ಲ ಎಂದು ರಮ್ಯಾ ಹೇಳಿದ್ದಾರೆ ಎಂದು ರಕ್ಷಿತಾ ಹೇಳಿದ್ದಾರೆ. ಹಾಗೊಂದು ವೇಳೆ ಮಾತು ತಪ್ಪದೇ ರಮ್ಯಾ ಈ ಮದುವೆ ಸಮಾರಂಭಕ್ಕೆ ಬಂದರೆ ವರ್ಷಗಳ ನಂತರ ರಮ್ಯಾ ಮತ್ತು ರಕ್ಷಿತಾ ಮುಖಾಮುಖಿಯಾದಂತೆ ಆಗಲಿದೆ. ಈ ಅಮೃತ ಗಳಿಗೆಗೆ ಕನ್ನಡ ಚಿತ್ರರಂಗ ಕೂಡ ಸಾಕ್ಷಿಯಾಗಲಿದೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-52 Email-mussanje2010@gmail.com, Phone: 9448074878